ಸಂಪುಟ: ೦೭/ ಸಂಚಿಕೆ: ೧೧೧/ಶನಿವಾರ ದಿನಾಂಕ : ೧೪-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 111/ SATURDAY Date : 14-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## 16ನೇ ಹಣಕಾಸು ಆಯೋಗಕ್ಕೆ ರಾಜ್ಯದ ಶಿಫಾರಸ್ಸುಗಳು ಪ್ರಸ್ತಾಪಿಸಿದ ಮುಖ್ಯಮಂತ್ರಿ

**ನವದೆಹಲಿ/ಬೆಂಗಳೂರು:** ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರದಂದು 16ನೇ ಹಣಕಾಸು ಆಯೋಗದ ಅಧ್ಯಕ್ಷ ಡಾ. ಅರವಿಂದ್ ಪನಗಾರಿಯ ಮತ್ತು ಆಯೋಗದ ಗೌರವಾನ್ವಿತ ಸದಸ್ಯರೊಂದಿಗೆ ಭೇಟಿ ಮಾಡಿ, ಕೇಂದ್ರದಿಂದ ರಾಜ್ಯಗಳಿಗೆ ತೆರಿಗೆ ಹಂಚಿಕೆ ಮತ್ತು ಹಣಕಾಸು ವರ್ಗಾವಣೆಗಳ ಕು-ರಿತು ರಾಜ್ಯದ ಆಶಯಗಳು, ನಿರೀಕ್ಷೆಗಳು ಮತ್ತು ಪ್ರಸ್ತಾವನೆಗಳನ್ನು ಮಂಡಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಜ್ಞಾಪಕ ಪತ್ರವನ್ನು ಆಯೋಗಕ್ಕೆ ಸಲ್ಲಿಸುವುದರೊಂದಿಗೆ, ಈ ಜ್ಞಾಪಕ ಪತ್ರದಲ್ಲಿ ನ್ಯಾಯಯುತ, ಪಾರದರ್ಶಕ ಮತ್ತು ಬೆಳವಣಿಗೆಯನ್ನು ಪ್ರೋತ್ಸಾಹಿಸುವ ಮತ್ತು ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸುವ ರಾಜ್ಯದ ದೃಷ್ಟಿಕೋನವನ್ನು ಸ್ಪ?ಪಡಿಸಿದರು.

ಆಯೋಗವನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಭಾರತದ ಆರ್ಥಿಕ ಬೆಳವಣಿಗೆಯಲ್ಲಿ ಕರ್ನಾಟಕದ ಪ್ರಮುಖ ಪಾತ್ರವನ್ನು ಒತ್ತಿ ಹೇಳಿದರು ರಾಜ್ಯವು ದೇಶದ ಒಟ್ಟು ಜಿಡಿಪಿಗೆ ಸುಮಾರು ಶೇ.8.7ರ?ು ಕೊಡುಗೆ ನೀಡುತ್ತಿದ್ದು ಜಿ. ಎಸ್.ಟಿ ಸಂಗ್ರಹಣೆಯಲ್ಲಿ 2ನೇ ಸ್ಥಾನದಲ್ಲಿದೆ ಎಂದು ತಿಳಿಸಿದರು.

ಈ ಕೊಡುಗೆಯ ಹೊರತಾಗಿಯೂ ಸಂಪನ್ಮೂಲ ಹಂಚಿಕೆಯಲ್ಲಿ ಉಂಟಾಗಿರುವ ತೀವ್ರ ಅಸಮತೋಲನವನ್ನು ಮುಖ್ಯಮಂತ್ರಿಗಳು ಪ್ರಸ್ತುತ ಪಡಿಸಿದರು. ರಾಜ್ಯದಿಂದ ಕೇಂದ್ರಕ್ಕೆ ಸ್ವೀಕೃತವಾಗುವ ತೆರಿಗೆಯ ಪ್ರತಿ ರೂಪಾಯಿಗೆ ಪ್ರತಿಯಾಗಿ ರಾಜ್ಯವು ಕೇವಲ 15 ಪೈಸೆ ಮಾತ್ರ ಪಡೆಯುತ್ತದೆ. 15 ನೇ ಹಣಕಾಸು ಆಯೋಗವು ಕರ್ನಾಟಕದ ತೆ-ರಿಗೆ ಪಾಲನ್ನು 4.713% ರಿಂದ 3.647% ಕ್ಕೆ ಇಳಿಕೆ ಮಾಡಿದ್ದರಿಂದ 15ನೇ ಹಣಕಾಸು ಆಯೋಗದ ಅವಧಿಯಲ್ಲಿ 80,000 ಕೋಟಿಗಳಷ್ಟು ನಷ್ಟವಾಗಿದೆ ಎಂದು ಅವರು ತಿಳಿಸಿದರು.

ಸಂಪನ್ಮೂಲಗಳ ಹಂಚಿಕೆಯಲ್ಲಿ ಉಂಟಾಗಿರುವ ಈ ಅಸಮತೋಲನವನ್ನು ಸರಿಪಡಿಸಲು ರಾಜ್ಯವು 16ನೇ ಹಣಕಾಸು ಆಯೋಗಕ್ಕೆ ಈಗಾಗಲೇ ಜ್ಞಾಪನಾ ಪತ್ರವನ್ನು ಸಲ್ಲಿಸಿದೆ.

**ರಾಜ್ಯದ ಮುಖ್ಯ ಪ್ರಸ್ತಾವನೆಗಳು :**

ಕೇಂದ್ರ ಹಾಗು ರಾಜ್ಯಗಳ ನಡುವಿನ ಹಂಚಿಕೆಯು ಕನಿ? 50% ಕ್ಕೆ ಹೆಚ್ಚಿಸಬೇಕು ಮತ್ತು ಸೆಸ್‌ಗಳು ಮತ್ತು ಸರ್‌ಚಾರ್ಜ್‌ಗಳನ್ನು 5% ಕ್ಕೆ ಮಿತಿಗೊಳಿಸಬೇಕೆಂದು ಪ್ರಸ್ತಾಪಿಸಿದೆ. ಕೇಂದ್ರದ ತೆರಿಗೆಯೇತರ ಆದಾಯವನ್ನು ರಾಜ್ಯಗಳಿಗೆ ಹಂಚಿಕೆಯಾಗುವ ಪಾಲಿನಲ್ಲಿ ಸೇರಿಸಲು




ಸಹ ಶಿಫಾರಸ್ಸು ಮಾಡಿದೆ.

ರಾಜ್ಯಗಳ ನಡುವಿನ ಹಂಚಿಕೆಗೆ ಸಂಬಂಧಿಸಿದಂತೆ ಪ್ರತಿ ರಾಜ್ಯವು ತಾನು ನೀಡುವ ಕೊಡುಗೆಯಲ್ಲಿ ಸುಮಾರು 60% ಅನ್ನು ಉಳಿಸಿಕೊಳ್ಳಲು ಮತ್ತು 40% ಅನ್ನು ಉಳಿದ ರಾಜ್ಯಗಳಿಗೆ ಹಂಚಿಕೆಯಾಗಬೇಕೆಂದು ಸೂಚಿಸಿದೆ ಇದು ಬೆಳವಣಿಗೆ ಮತ್ತು ಸಮಾನತೆ ಎರಡನ್ನೂ ಖಚಿತಪಡಿಸುತ್ತದೆ. ಸೂತ್ರವನ್ನು ನ್ಯಾಯಯುತವಾಗಿಸಲು, ಕರ್ನಾಟಕವು ಆದ-ಾಯ-ದೂರ ಮಾನದಂಡದ ಪಾಲನ್ನು ಕಡಿಮೆ ಮಾಡಲು ಮತ್ತು ರಾಜ್ಯದ ಆರ್ಥಿಕ ಕೊಡುಗೆಗೆ ಹೆಚ್ಚಿನ ಪಾಲನ್ನು ನೀಡಲು ಪ್ರಸ್ತಾಪಿಸಿದೆ.

ಕರ್ನಾಟಕವು ತನ್ನ ಹೆಚ್ಚುವರಿ ಜ್ಞಾಪಕ ಪತ್ರದಲ್ಲಿ ಸಂಪನ್ಮೂಲ ಹಂಚಿಕೆಯು ಹೆಚ್ಚು ಬೆಳವಣಿಗೆ-ಆದ-ಾರಿತ ಮತ್ತು ನ್ಯಾಯಯುತವಾಗಿಸಲು ನಿರ್ಣಾಯಕ ಸುಧಾರಣೆಗಳಿಗೆ ಕರೆ ನೀಡಿದೆ.

ಅನುದಾನಗಳ ಅವೈಜ್ಞಾನಿಕ ವಿನ್ಯಾಸ ಮತ್ತು ರಾಜ್ಯ-ನಿರ್ದಿ? ಅನುದಾನಗಳ ಅನಿರೀಕ್ಷಿತತೆಯ ಕುರಿತು ಹೆಚ್ಚುವರಿ ಜ್ಞಾಪಕ ಪತ್ರದಲ್ಲಿ ಪ್ರಸ್ತಾಪಿಸಲಾಗಿದೆ. ದೇಶದ ಜಿಡಿಪಿ ಗೆ ರಾಜ್ಯದ ಕೊಡುಗೆಯು ಹೆಚ್ಚಾಗಿರುವ ಹೊರತಾಗಿಯೂ, ತಲಾವಾರು ತೆರಿಗೆ ಹಂಚಿಕೆಯು ಗಮನಾರ್ಹವಾಗಿ ಕುಸಿದಿದೆ – 14 ನೇ ಮತ್ತು 15 ನೇ ಹಣಕಾಸು ಆಯೋಗಗಳ ನಡುವಿನ ರಾಷ್ಟ್ರೀಯ ಸರಾಸರಿಯ 95% ರಿಂದ 73% ಕ್ಕೆ ಕುಸಿದಿದೆ.

ಸಂಪನ್ಮೂಲ ಹಂಚಿಕೆಯಲ್ಲಿ ಸಮಾನತೆ ಮುಖ್ಯವಾಗಿದ್ದರೂ, ಇದು ಸ್ಥಿರವಾದ ಆರ್ಥಿಕ ಕಾರ್ಯಕ್ರಮತೆ ಮತ್ತು ಆರ್ಥಿಕ ಶಿಸ್ತನ್ನು ಪಾಲಿಸುವ ರಾಜ್ಯಗಳಿಗೆ ದಂಡ ವಿಧಿಸುವಂತಾಗಬಾರದು. ಸಂಪನ್ಮೂಲ ಹಂಚಿಕೆಯಲ್ಲಿ ಸಮಾನತೆಯನ್ನು ಫಲಿತಾಂಶ ಆಧಾರಿತ ರೀತಿಯಲ್ಲಿ ಕಾರ್ಯಗತಗೊಳಿಸಬೇಕು ಎಂದು ರಾಜ್ಯವು ಒತ್ತಿಹೇಳಿತು, ಆದ್ದರಿಂದ, ಆದಾಯ-ದೂರ ಮಾನದಂಡದ ಪಾಲನ್ನು 20% ರ?ು ಕಡಿಮೆ ಮಾಡಿ ದೇಶದ ಜಿಡಿಪಿ ಯಲ್ಲಿ ರಾಜ್ಯಗಳ ಕೊಡುಗೆಯನ್ನು ಅಳತೆಗೋಲಾಗಿ ಪರಿಗಣಿಸಿ ಇದಕ್ಕೆ 20% ಅಂಕವನ್ನು ನೀಡಬೇಕೆಂದು ಪ್ರಸ್ತಾಪಿಸಿದೆ.

ಹಣಕಾಸು ಆಯೋಗವು ನೀಡುವ ರಾಜಸ್ವ ಕೊರತೆ ಅನುದಾನಗಳ ಪರಿಣಾಮಕಾರಿತ್ವವನ್ನು ಮುಖ್ಯಮಂತ್ರಿಯವರು ಪ್ರಶ್ನಿಸಿದರು. ಪ್ರಸ್ತುತ ರೂಪದಲ್ಲಿ ರಾಜಸ್ವ ಕೊರತೆ ಅನುದಾನವನ್ನು ಪಡೆಯುತ್ತಿರುವ ಫಲಾನುಭವಿ ರಾಜ್ಯಗಳು, ಈ ಅನುದಾನದ ಹೊರತಾಗಿಯೂ ರಾಜಸ್ವ ಕೊರತೆಯನ್ನು ಶೂನ್ಯವಾಗಿಸುವಲ್ಲಿ ವಿಫಲವಾಗಿರುವುದನ್ನು ಉಲ್ಲೇಖಿಸಿ ರಾಜಸ್ವ ಕೊರತೆ ಅನುದಾನವನ್ನು ತೆರಿಗೆ ಹಂಚಿಕೆಯ ಸೂತ್ರದಲ್ಲೇ ರಾಜ್ಯಗಳಿಗೆ ನೀಡಬೇಕೆಂದು ಪ್ರಸ್ತಾಪಿಸಿದರು.

ಇದಲ್ಲದೆ, ರಾಜಸ್ವ ಕೊರತೆ ಅನುದಾನಗಳನ್ನು ಅಂ-ದಾಜಿಸಲು ಆಯೋಗವು ಪರಿಕಲ್ಪಿಸುವ ವೆಚ್ಚದ ಆದ್ಯತೆಗಳು ವ್ಯಕ್ತಿನಿ? ಮೌಲ್ಯಮಾಪನಗಳನ್ನು ಪ್ರತಿಬಿಂಬಿಸುತ್ತವೆ. ದುರದೃ?ವಶಾತ್, ಈ ಮೌಲ್ಯಮಾಪನಗಳು ಸಂಬಳ, ಪಿಂಚಣಿ ಮತ್ತು ಆಡಳಿತಾತ್ಮಕ ವೆಚ್ಚಗಳಿಗೆ ಹೋಲಿಸಿದರೆ ಕಲ್ಯಾಣ ಕಾರ್ಯಕ್ರಮಗಳಿಗೆ ಸರ್ಕಾರ ಭರಿಸುವ ವೆಚ್ಚವನ್ನು ಕಡಿಮೆ ಪ್ರಮಾಣದಲ್ಲಿ ಇರಿಸುತ್ತವೆ. ನಮ್ಮ ಸರ್ಕಾರವು ಎಲ್ಲರ ಕಲ್ಯಾಣವನ್ನು ಒತ್ತಿಹೇಳುವ ಗಾಂಧೀಜಿಯವರ ಸರ್ವೋದಯ ತತ್ವದಿಂದ ಮಾರ್ಗದರ್ಶಿಸಲ್ಪಟ್ಟಿದೆ. ಕಡಿಮೆ ಆದಾಯದ ಕುಟುಂಬಗಳನ್ನು ಸಬಲೀಕರಣಗೊಳಿಸುವ ಮೂಲಕ, ಸ್ಥಳೀಯ ಬೇಡಿಕೆಯನ್ನು ಉತ್ತೇಜಿಸುವ ಮತ್ತು ಸಮಗ್ರ ಬೆಳವಣಿಗೆಯನ್ನು ಹೆಚ್ಚಿಸುವಲ್ಲಿ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳು ರೂಪಿತವಾಗಿದೆ. ಆದ-್ದರಿಂದ, ಹಣಕಾಸಿನ ಹಂಚಿಕೆಯಲ್ಲಿ ಮೌಲ್ಯಮಾಪನ ಮಾಡುವಾಗ ಈ ಕಲ್ಯಾಣ ಕಾರ್ಯಕ್ರಮಗಳ ಮೇಲಿನ ವೆಚ್ಚಗಳಿಗೆ ಹೆಚ್ಚಿನ ಆದ್ಯತೆ ನೀಡದೆ ಹೋದರೆ ಕನಿ? ಸಂಬಳ, ಪಿಂಚಣಿ ಮತ್ತು ಬಡ್ಡಿ ಪಾವತಿಗಳಂತಹ ಬದ್ಧ ವೆಚ್ಚಗಳಿಗೆ ಸಮಾನವಾಗಿ ಪರಿಗಣಿಸಬೇಕು.

ಕೇಂದ್ರ ಸರ್ಕರದ ವಿವೇಚನಾಧಾರಿತ ಅನುದಾನವಾಗಿರುವ ರಾಜ್ಯ ಕೇಂದ್ರಿತ ಅನುದಾನದ ಬದಲಾಗಿ ಒಟ್ಟು ಕೇಂದ್ರ ಸ್ವೀಕೃತಿಗಳ 0.3% ರ?ು ಅನುದಾನವನ್ನು ಸೂತ್ರ ಆಧಾರಿತ ಹಂಚಿಕೆಯ ಮೂಲಕ ರಾಜ್ಯಗಳಿಗೆ ನೀಡಬೇಕೆಂದು ಕರ್ನಾಟಕವು ಶಿಫಾರಸು ಮಾಡಿದೆ. ಆದಾಗ್ಯೂ, ಆಯೋಗವು ಅಂತಹ ನಿಬಂಧನೆಗಳನ್ನು ಮುಂದುವ-ರಿಸಿದರೆ ಬೆಂಗಳೂರು ಮತ್ತು ಇತರ ನಿರ್ಣಾಯಕ ಯೋಜನೆಗಳಿಗೆ ಅನುದಾನಕ್ಕಾಗಿ ಮೂಲ ಜ್ಞಾಪಕ ಪತ್ರದಲ್ಲಿ ಸಲ್ಲಿಸಿರುವ ತನ್ನ ಪ್ರಸ್ತಾವನೆಯನ್ನು ಪುನರುಚ್ಚರಿಸಿದೆ.

ಕರ್ನಾಟಕದ ಆರ್ಥಿಕತೆಯಲ್ಲಿ ಬೆಂಗಳೂರಿನ ಪ್ರಮುಖ ಪಾತ್ರವನ್ನು ಪರಿಗಣಿಸಿ, ಬೆಂಗಳೂರಿನ ಮೂಲಸೌಕರ್ಯವನ್ನು ಬಲಪಡಿಸಲು ರೂ. 1.15 ಲಕ್ಷ ಕೋಟಿ ಹೂಡಿಕೆಗೆ ಬೆಂಬಲವನ್ನು ಮುಖ್ಯಮಂತ್ರಿ ಕೋರಿದರು. ಅಲ್ಲದೆ, ಕಡಿಮೆ ಆದಾಯ ಮತ್ತು ಕುಂಠಿತ ಮೂಲಸೌಕರ್ಯ ಅಭಿವೃದ್ಧಿ ಸಮಸ್ಯೆಯನ್ನು ಎದುರಿಸುತ್ತಿರುವ ಕಲ್ಯಾಣ ಕರ್ನಾಟಕ ಮತ್ತು ಮಲೆನಾಡಿನಲ್ಲಿ ಪ್ರಾದೇಶಿಕ ಅಂತರವನ್ನು ಕಡಿಮೆ ಮಾಡುವ ಅಗತ್ಯವನ್ನು ಅವರು ಒತ್ತಿ ಹೇಳಿದರು.

ಬೆಳವಣಿಗೆ ಮತ್ತು ಸಮಾನತೆ ಜೊತೆ ಜೊತೆಯಾಗಿ ಮುಂದುವರಿಯಬೇಕು. ಆದ್ದರಿಂದ ಸದೃಢ ಭಾರತದ ನಿರ್ಮಾಣಕ್ಕೆ ನ್ಯಾಯಯುತ ಸಂಪನ್ಮೂಲ ಹಂಚಿಕೆಯಿಂದ ಬೆಂಬಲಿತವಾದ ಬಲವಾದ ಕರ್ನಾಟಕ ಅತ್ಯಗತ್ಯ ಎಂದು ಮುಖ್ಯಮಂತ್ರಿ ಯವರು ಒತ್ತಿ ಹೇಳಿದರು.

ಕರ್ನಾಟಕದ ಆರ್ಥಿಕ ಬಲವು ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಬೆಳವಣಿಗೆಗೆ ದಂಡ ವಿಧಿಸಬಾರದು, ಬದಲಾಗಿ ಪ್ರೊ?ರೀತ್ಸಾಹ ದೊರೆಯುವಂತೆ ನೋಡಿಕೊಳ್ಳುವ ಸಮಯ ಇದು. ಸಮತೋಲಿತ, ಸಂಪನ್ಮೂಲ ಹಂಚಿಕೆಯ ದೃಷ್ಟಿಕೋನವನ್ನು ಅಳವಡಿಸಿಕೊಳ್ಳುವಂತೆ ನಾವು ಆಯೋಗವನ್ನು ಒತ್ತಾಯಿಸಿದರು.

ಈ ಸಭೆಯಲ್ಲಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಹಣಕಾಸು ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್ ಮತ್ತಿತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ರಾಜಕಾಲುವೆ ದಿಕ್ಕು ಬದಲಿಸಲು ಅವಕಾಶ ನೀಡಬೇಡಿ: ಎನ್.ಆರ್.ರಮೇಶ್



**ಬೆಂಗಳೂರು,** – ಯಾರಿಗೂ ಉಪಕಾರ ಮಾಡಿಕೊಡುವ ಉದ್ದೇಶದಿಂದ ಸರ್ಕಾರಿ ಸ್ವತ್ತಿನಲ್ಲಿ ರಾಜಕಾಲುವೆ ದಿಕ್ಕನ್ನು ಬದಲಿಸಲು ಮುಂದಾಗಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು ಕೋಟ್ಯಂತರ ಮೌಲ್ಯದ ಆಸ್ತಿಯನ್ನು ಸಂರಕ್ಷಣೆ ಮಾಡುವಂತೆ ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಅವರು ಭೂ ದಾಖಲೆ ಇಲಾಖೆ ಆಯುಕ್ತರಿಗೆ ಪತ್ರ ಬರೆದು ಮನವಿ ಮಾಡಿಕೊಂಡಿದ್ದಾರೆ.

ಯಡಿಯೂರಿನ ನಾಗಸಂದ್ರ ಗ್ರಾಮದ ಸರ್ವೆ ನಂಬರ್ 36/2 ರ ಸ್ವತ್ತು ಸಂಪೂರ್ಣವಾಗಿ ಸರ್ಕಾರಿ ಖರಾಬು ಸ್ವತ್ತಾಗಿರುತ್ತದೆ. ಸದರಿ ಸ್ವತ್ತಿನ ಮಧ್ಯಭಾಗದಲ್ಲಿ ದ್ವಿತೀಯ ಹಂತದ ರಾಜಕಾಲುವೆಯು ಹಾದು ಹೋಗಿರುತ್ತದೆ. ಮೇಲೆ ತಿಳಿಸಿರುವ ಸರ್ವೆ ನಂಬರ್ 36/2 ರ ಸರ್ಕಾರಿ ಸ್ವತ್ತನ್ನು ನಕಲಿ ದಾಖಲೆಗಳ ಮೂಲಕ ಶರ್ಮಿಳ ಭಕ್ತಾರಾಂ ಎಂಬುವವರು ಕಬಳಿಸಿದ್ದಾರೆ. ಮಾತ್ರವಲ್ಲ, ಬೆಂಗಳೂರು ದಕ್ಷಿಣ ತಾಲ್ಲೂಕಿನ ತಹಸೀಲ್ದಾರ್ ಕಛೇರಿಗೆ ಮನವಿ ಪತ್ರ ಸಲ್ಲಿಸಿ, ಯಡಿಯೂರು ನಾಗಸಂದ್ರ ಗ್ರಾಮದ ಸರ್ವೆ ನಂಬರ್ 36/2 ರಲ್ಲಿ ಹಾದು ಹೋಗಿರುವ ರಾಜಕಾಲುವೆಯ ದಿಕ್ಕನ್ನು ಬದಲಿಸಿಕೊಡುವಂತೆ ಮನವಿ ಮಾಡಿಕೊಂಡಿದ್ದಾರೆ. ಅವರ ಈ ಮನವಿ ಸಂಪೂರ್ಣವಾಗಿ ಕಾನೂನು ಬಾಹಿರವಾದ ಮನವಿಯಾಗಿರುತ್ತದೆ ಎಂದು ಅವರು ದೂರಿನಲ್ಲಿ ದಾಖಲೆ ನೀಡಿದ್ದಾರೆ.

ಸರ್ವೆ ನಂಬರ್ 36/2 ರ ಸ್ವತ್ತು ಸಂಪೂರ್ಣವಾಗಿ ಸರ್ಕಾರಿ ಬಿ ಖರಾಬು ಸ್ವತ್ತಾಗಿರುತ್ತದೆ.ಮುಂದುವರೆದಂತೆ, ದಿನಾಂಕ 25/03/2024 ರಂದು ಬೆಂಗಳೂರು ದಕ್ಷಿಣ ತಾಲ್ಲೂಕಿನ ತಹಸೀಲ್ದಾರ್ ಅವರು ಸದರಿ ಯಡಿಯೂರು ನಾಗಸಂದ್ರ ಗ್ರಾಮವು ಗೆಜೆಟ್ ನೋಟಿಫಿಕೇಷನ್ ಸಂಖ್ಯೆ: –56/66–67 ರಂತೆ ನಗರ ಭೂಮಾಪನ ವ್ಯಾಪ್ತಿಗೆ ಒಳಪಟ್ಟಿರುವ ಕಾರಣ ಇದಕ್ಕೆ ಸಂಬಂಧಪಟ್ಟ ನಿರ್ಧಾರವನ್ನು ತೆಗೆದುಕೊಳ್ಳಬೇಕಿರುವುದು ಭೂದಾಖಲೆಗಳ ಇಲಾಖೆ ಎಂದು ಟಿಪ್ಪಣಿಯನ್ನು ಬರೆದಿರುತ್ತಾರೆ.

ಅದಾದನಂತರ, ಭೂದಾಖಲೆಗಳ ಸಹಾಯಕ ನಿರ್ದೇಶಕರು, ನಗರ ಮಾಪನ ತಂಡ 03, ಕೆ.ಆರ್. ವೃತ್ತ ಇವರು ಕಾನೂನು ಬಾಹಿರವಾದ ನಿರ್ಣಯವನ್ನು ತೆಗೆದುಕೊಂಡಿರುವ ವಿಷಯ ತಿಳಿದು ಬಂದಿರುತ್ತದೆ.ಯಡಿಯೂರು ನಾಗಸಂದ್ರ ಗ್ರಾಮದ ಸರ್ವೆ ನಂಬರ್ 36/2 ರ 1.13 ಎಕರೆ ವಿಸ್ತೀರ್ಣದ ಸ್ವತ್ತು ಸಂಪೂರ್ಣ ಸರ್ಕಾರಿ ಬಿ ಖರಾಬು ಸ್ವತ್ತಾಗಿದ್ದು, ಸುಮಾರು 100 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯಯುತವಾಗಿರುತ್ತದೆ.

ಆದರೆ, ಶರ್ಮಿಳ ಭಕ್ತಾರಾಂ ಅವರು ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡಿರುವ ವಿಷಯ ದಾಖಲೆಗಳ ಸಹಿತವೇ ರುಜುವಾತಾಗಿದ್ದರೂ ಸಹ, ಭೂದಾಖಲೆಗಳ ಸಹಾಯಕ ನಿರ್ದೇಶಕರಾದ ಕುಸುಮ ಲತಾ ಅವರು ಕಾನೂನು ಬಾಹಿರವಾಗಿ ನಿರ್ಣಯವನ್ನು ತೆಗೆದುಕೊಂಡು ಸದರಿ ಸರ್ಕಾರಿ ಸ್ವತ್ತಿನಲ್ಲಿ ಹಾದು ಹೋಗಿದ್ದ ರಾಜಕಾಲುವೆಯ ದಿಕ್ಕನ್ನು ಬದಲಿಸುವ ಬಗ್ಗೆ ವರದಿಯನ್ನು ಮಂಡಿಸಿರುತ್ತಾರೆ ಎಂಬ ಆಘಾತಕಾರಿ ವಿಷಯ ತಿಳಿದುಬಂದಿರುತ್ತದೆ.

ಹೀಗಾಗಿ ಕುಸುಮ ಲತಾ ರವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮವನ್ನು ತೆಗೆದುಕೊಳ್ಳಬೇಕೆಂದು ಮತ್ತು ಶರ್ಮಿಳ ಭಕ್ತಾರಾಂ ರವರು ಕಬಳಿಸಲು ಹೊರಟಿರುವ ಸರ್ಕಾರಿ ಸ್ವತ್ತನ್ನು ಸಂರಕ್ಷಿಸಿಕೊಳ್ಳುವ ಬಗ್ಗೆ ಕಾನೂನು ರೀತ್ಯಾ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ದಾಖಲೆಗಳ ಸಹಿತ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಮಾನ್ಯ ಆಯುಕ್ತರನ್ನು ರಮೇಶ್ ಆಗ್ರಹಿಸಿದ್ದಾರೆ.

## ಇರಾನ್ ಮೇಲೆ ಇಸ್ರೇಲ್ ದಾಳಿ ಗಗನ ಮುಟ್ಟಲಿದೆ ತೈಲಬೆಲೆ

ನವದೆಹಲಿ, ಜೂ.13: ಇರಾನ್ ದೇಶದ ಮೇಲೆ ಇಸ್ರೇಲ್ ಏಕಾಏಕಿ ದಾಳಿ ಮಾಡಿರುವುದು ಜಾಗತಿಕವಾಗಿ ಮಾರುಕಟ್ಟೆಗಳನ್ನು ಆತಂಕಕ್ಕೆ ದೂಡಿದೆ. ಮಾತ್ರವಲ್ಲ ಕಚ್ಚಾ ತೈಲ ಬೆಲೆ ಏರಿಕೆಯಾಗುವ ಸಾಧ್ಯತೆಗಳಿವೆ.

ಇಸ್ರೇಲ್ ದಾಳಿಯಿಂದಾಗಿ ಇಂದು ತೈಲ ಬೆಳೆ ಶೇ. 13ರಷ್ಟು ಏರಿಕೆ ಆಗಿದೆ. ಒಂದು ಬ್ಯಾರಲ್ ಕಚ್ಚಾ ತೈಲದ ಬೆಲೆ 76 ಡಾಲರ್ ಆಸುಪಾಸಿನಷ್ಟಿದೆ. ಇಸ್ರೇಲ್ ದಾಳಿ ಪರಿಣಾಮವಾಗಿ ಮಧ್ಯಪ್ರಾಚ್ಯ ದೇಶಗಳಿಂದ ತೈಲ ಸರಬರಾಜು ಕಡಿಮೆಗೊಳ್ಳುವ ಸಾಧ್ಯತೆ ಮನಗಂಡು ತೈಲ ಬೆಲೆ ಹೆಚ್ಚಳ ಆಗಿದೆ.

ಇದರ ಪರಿಣಾಮವಾಗಿ ಭಾರತವೂ ಒಳಗೊಂಡಂತೆ ಜಾಗತಿ-ಕವಾಗಿ ಪೆಟ್ರೋಲ್ ಬೆಲೆಯೂ ಏರಿಕೆ ಆಗುವ ಸಾಧ್ಯತೆ ಇದೆ. ಯುಎಸ್ ಡಬ್ಲ್ಯುಟಿಐ ಕ್ರೂಡ್ ಒಂದು ಬ್ಯಾರಲ್‌ಗೆ ಶೇ. 11.38ರಷ್ಟು ಏರಿ 75.82 ಡಾಲರ್ ಮುಟ್ಟಿದೆ. ಬ್ರೆಂಟ್ ಕ್ರೂಡ್ ಇಂಡೆಕ್ಸನಲ್ಲಿ ಒಂದು ಬ್ಯಾರಲ್ ತೈಲದ ಬೆಲೆ 76.48 ಡಾಲರ್‌ಗೆ ಏರಿದೆ. ಇಸ್ರೇಲ್ ದಾಳಿಗೆ ಪ್ರತಿಯಾಗಿ ಇರಾನ್ ಕೂಡ ವಿವಿಧ ಕಾರ್ಯಾಚರಣೆ ಅಥವಾ ಕ್ರಮಗಳನ್ನು ಕೈಗೊಳ್ಳಬಹುದು. ತಜ್ಞರ ಪ್ರಕಾರ ಇರಾನ್ ನಿಯಂತ್ರಣದಲ್ಲಿರುವ ಹಾರ್ಮುಜ್ ಜಲಮಾರ್ಗವನ್ನು ಬಂದ್ ಮಾಡಬಹುದು. ವಿಶ್ವದ ಶೇ. 25ರಷ್ಟು ತೈಲ ಸರಬರಾಜು ಇಲ್ಲಿಂದ ಸಾಗಿ ಹೋಗುತ್ತದೆ. ಪರ್ಯಾಯ ಮಾರ್ಗದಲ್ಲಿ ತೈಲ ಸಾಗಿಸಲು ಹೆಚ್ಚು ವೆಚ್ಚವಾಗಬಹುದು. ಇದೇ ರೀತಿ ಬಿಕ್ಕಟ್ಟು ಮುಂದುವ-ರಿದರೆ ತೈಲ ಬೆಲೆ ಬ್ಯಾರಲ್‌ಗೆ 120 ರೂ ಮುಟ್ಟಿದರೂ ಅಚ್ಚರಿ ಇಲ್ಲ ಎನ್ನಲಾಗಿದೆ. ಅಂದರೆ, ಈಗಿರುವ ಬೆಲೆಗಿಂತ ಶೇ. 85ರಷ್ಟು ಏರಿಕೆ ಆಗುವ ಸಂಭಾವ್ಯತೆ ಇಲ್ಲದಿಲ್ಲ.ಪರಿಸ್ಥಿತಿ ಇದೇ ರೀತಿ ಇದ್ದಲ್ಲಿ ಮುಂದಿನ ದಿನಗಳಲ್ಲಿ ಭಾರತದಲ್ಲಿ ಪೆಟ್ರೋಲ್ ಮತ್ತು ಡೀಸಲ್ ಬೆಲೆ ತೀವ್ರವಾಗಿ ಏರಿಕೆ ಆಗುವ ನಿರೀಕ್ಷೆ ಇದೆ.

## ರಸ್ತೆ ಸುರಕ್ಷತಾ ಸಮಿತಿ ಸಭೆ : ಸಂಚಾರಿ ನಿಯಮ ಪಾಲಿಸದಿದ್ದಲ್ಲಿ ಮನೆಗೆ ಬರುವುದು ನೋಟಿಸ್ : ಜಿಲ್ಲಾಧಿಕಾರಿ ಜಾನಕಿ

**ಬಾಗಲಕೋಟೆ,** : ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೀಡಿರುವ ಮಾಹಿತಿಯಂತೆ ನಗರದ ಒಟ್ಟು 22 ಸ್ಥಳಗಳಲ್ಲಿ ಈಗಾಗಲೇ ಎ ಎನ್ ಪಿ ಆರ್ ಕ್ಯಾಮರಾ ಅಳವಡಿಸಲಾಗಿದ್ದು, ಇನ್ನು ಮುಂದೆ ಹೆಲ್ಮೆಟ್ ಧ-ರಿಸದೇ, ಮೊಬೈಲ್ ಬಳಸುತ್ತ ವಾಹನ ಚಾಲನೆ, ಟ್ರಿಪಲ್ ರೈಡಿಂಗ್ ಸೇರಿದಂತೆ ಇನ್ನಿತರ ಸಂಚಾರಿ ನಿಯಮ ಪಾಲಿಸದಿದ್ದಲ್ಲಿ ನೇರವಾಗಿ ಅಂತವರ ಮನೆಗಳಿಗೆ ದಂಡ ಕಟ್ಟುವಂತೆ ನೋಟಿಸ್ ಕಳಿಹಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ ಎಂ ತಿಳಿಸಿದರು.

ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ಗುರುವಾರದಂದು ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಯಾವುದೇ ರೀತಿಯ ರಸ್ತೆ ಅಪಘಾತಗಳಾದರೂ, ಅದಕ್ಕೆ ನಾವೂ, ನೀವುಗಳೆಲ್ಲ ಸೇರಿ ಸಮಾನರಾಗಿ ಕಾರಣರಾಗುತ್ತೇವೆ. ಆದ್ದರಿಂದ ರಸ್ತೆ ಸುರಕ್ಷತೆಗೆ ಅಧಿಕಾರಿಗಳು ಹೆಚ್ಚಿನ ಗಮನ ಹ-ರಿಸಬೇಕು. . ಅಲ್ಲದೇ, ಶಾಲಾ ಸಮಯಕ್ಕನುಗುಣವಾಗಿ ಬೆಳಿಗ್ಗೆ ಮತ್ತು ಸಂಜೆ ಬಸ್ ಸೌಲಭ್ಯ ಹೆಚ್ಚಿಸುವಂತೆ, ಹೆಚ್ಚಿನ ವಿದ್ಯಾರ್ಥಿಗಳ ಸಂಚಾರದ ಮಾರ್ಗಕ್ಕೆ ಬಸ್ ಸೌಲಭ್ಯ ಒದಗಿಸಬೇಕು ಮತ್ತು ಶಾಲಾ ಕಾಲೇಜುಗಳಲ್ಲಿ ರಸ್ತೆ ಸುರಕ್ಷತೆ, ಸಂಚಾರಿ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ



ಸೂಚಿಸಿದರು.


ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ್ ರೆಡ್ಡಿ, ಮಾತನಾಡಿ ಜಿಲ್ಲೆಯಲ್ಲಿ ಸುಮಾರು 5878 ಕಿ.ಮೀ ರಸ್ತೆ ಇದ್ದು, ಸುಮಾರು 5 ಲಕ್ಷಕ್ಕೂ ಹೆಚ್ಚಿನ ವಾಹನಗಳು ಸಂಚರಿಸುತ್ತಿವೆ. ಈ ಹಿನ್ನಲೆಯಲ್ಲಿ ಹೆಚ್ಚಿನ ಮಟ್ಟದ ಎಚ್ಚರಿಕೆ ಕ್ರಮಗಳನ್ನ ವಹಿಸಿದ್ದರೂ ಕೂಡ ಕಳೆದ ವರ್ಷಕ್ಕಿಂತ ಹೆಚ್ಚಿನ ಅಪಘಾತಗಳು ಈ ವರ್ಷ ಸಂಭವಿಸಿದ್ದು, ಅದರಲ್ಲೂ ಪ್ರತಿಶತ 95 ದ್ವಿಚಕ್ರ ವಾಹನಗಳೇ ಅಪಘಾತಕ್ಕಿಡಾಗಿರುವುದು ಕಂಡುಬಂದಿದೆ. ಈ ಅಪಘಾತಳಿಗೆಲ್ಲ ಸಂಚಾರಿ ನಿಯಮ ಸರಿಯಾಗಿ ಪಾಲನೆ ಮಾಡದಿರುವುದೇ ಪ್ರಮುಖ ಕಾರಣವಾಗಿದೆ. ಜಿಲ್ಲೆಯಲ್ಲಿ ಅಪಘಾತ ಪ್ರಮಾಣ ಇಳಿಕೆ ಮಾಡುವ ಉದ್ದೇಶದಿಂದ ಪದೇ ಪದೇ ಅಪಘಾತಗಳಾಗುತ್ತಿರುವ ಜಿಲ್ಲೆಯ ಒಟ್ಟು 21 ಪ್ರಮುಖ ಸ್ಥಳಗಳನ್ನು ಬ್ಲಾಕ್ ಸ್ಪಾಟ್ ಗಳೆಂದು ಗುರುತಿಸಿಕೊಂಡಿದ್ದು ಅವುಗಳನ್ನು ವೈಜ್ಞಾನಿಕವಾಗಿ ಸರಿಪಡಿಸಬೇಕಾಗಿರುತ್ತದೆ ಎಂದರು.

ಸಭೆಯಲ್ಲಿ ಅರಣ್ಯ ಸಂರಕ್ಷಣಾಧಿಕಾರಿ ರೂಟ್ರನ್ ಪಿ ಬಾಗಲಕೋಟೆ ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾರಾಯಣ ಎಸ್ ಕುಲಕರ್ಣಿ ಶಿಕ್ಷಣ ಇಲಾಖೆ ಡಿ ಡಿ ಪೀ ಐ ಹೆಚ್ ಜಿ ಮಿರ್ಜಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಹಿಟ್ ಆಂಡ್ ರನ್ ಸಂತ್ರಸ್ತರಿಗೆ ಪರಿಹಾರ ಧನ

ಹಿಟ್ ಆಂಡ್ ರನ್ ಅಪಘಾತ ಪ್ರಕರಣಗಳಲ್ಲಿ ನೊಂದವರಿಗೆ ಪರಿಹಾರ ಧನ ಒದಗಿಸುವ ಕೆಲಸವನ್ನು ಜಿಲ್ಲಾಡಳಿತದ ಸಹಕಾರದೊಂದಿಗೆ ಪೋಲೀಸ್ ಇಲಾಖೆ ಮಾಡುತ್ತಿದ್ದು, ರಾಜ್ಯದಲ್ಲೇ ಪ್ರಥಮ ಎಂಬುದು ಅತ್ಯಂತ ಶ್ಲಾಘನೀಯ ವಿಷಯವಾಗಿದೆ. ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೃತ ಮತ್ತು ಗಾಯಾಳು ಸೇರಿ ಒಟ್ಟು 191 ಪ್ರಕರಣಗಳು ದಾಖಲಾಗಿದ್ದು, 66 ಮಾರಣಾಂತಿಕ ಅಪಘಾತ ಮತ್ತು 31 ಮಾರಣಾಂತಿಕ ವಲ್ಲದ ಪ್ರಕರಣಗಳನ್ನು ಧನ ಪರಿಹಾರಕ್ಕಾಗಿ ಜಿಐ ಕೌನ್ಸಿಲ್ ಗೆ ಅರ್ಜಿ ಸಲ್ಲಿಸಲಾಗಿತ್ತು. ಮೃತರಿಗೆ ತಲಾ 2 ಲಕ್ಷ ಮತ್ತು ಗಾಯಾಳುಗಳಿಗೆ ತಲಾ 50 ಸಾವಿರ ದಂತೆ ಒಟ್ಟು 71 ಪ್ರಕರಣಗಳ ಸಂತ್ರಸ್ತರಿಗೆ ಪರಿಹಾರ ಧನ ಈಗಾಗಲೇ ಮಂಜೂರಾಗಿದೆ.

## ಕರ್ನಾಟಕ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಫಲಿತಾಂಶ ಪ್ರಕಟ



ಬೆಂಗಳೂರು: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿಯು ಶುಕ್ರವಾರದಂದು ಎಸ್‌ಎಸ್‌ಎಲ್‌ಸಿ (ಖಖಐಅ) ಪರೀಕ್ಷೆ–2ರ ಫಲಿತಾಂಶವನ್ನು ಪ್ರಕಟಿಸಿದೆ. ಒಟ್ಟು 87,330 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ನಾಲ್ವರು ವಿದ್ಯಾರ್ಥಿಗಳು 625ಕ್ಕೆ 625 ಅಂಕ ಗಳಿಸಿದ್ದಾರೆ. ಆ ಮೂಲಕ ಅಂಕ ಹೆಚ್ಚಳಕ್ಕೆ ಪರೀಕ್ಷೆ ಬರೆದಿದ್ದ ನಾಲ್ವರಿಗೆ ಔಟ್ ಆಫ್ ಔಟ್ ಅಂಕ ಬಂದಿದೆ. ಕರ್ನಾಟಕದ 967 ಕೇಂದ್ರಗಳಲ್ಲಿ ಮೇ 26ರಿಂದ ಜೂನ್ 2ರವರೆಗೆ ಎಸ್‌ಎಸ್‌ಎಲ್ ಪರೀಕ್ಷೆ–2 ನಡೆದಿತ್ತು.

ಫಲಿತಾಂಶ ನೋಡುವುದು ಹೇಗೆ? : ಇಚಿಡಿ–ಡಿಜಣಟಣ.ಟಿಭಿ.ಎಟಿ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಿ. ಮುಖಪುಟದಲ್ಲಿ, ಏಖಇಂಃ 10ನೇ ಖಖಐಅ ಪರೀಕ್ಷೆಯ 2 ನೇ ಫಲಿತಾಂಶಗಳು 2025 ಮೇಲೆ ಕ್ಲಿಕ್ ಮಾಡಿ. ನಿಮ್ಮ ನೋಂದಣಿ ಸಂಖ್ಯೆಯನ್ನು ನಮೂದಿಸಿ ಸಬ್‌ಮಿಟ್ ಮಾಡಿ. ಬಳಿಕ ಪರದೆಯ ಮೇಲೆ ನಿಮ್ಮ ಫಲಿತಾಂಶ ಕಾಣಿಸಿಕೊಳ್ಳುತ್ತದೆ. ವಿದ್ಯಾರ್ಥಿಗಳು ಫಲಿತಾಂಶವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. ಕಳೆದ ಮೇ 24 ರಂದು ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು, ಶೇ.62.34ರಷ್ಟು ವಿದ್ಯಾರ್ಥಿಗಳು ಪಾಸ್ ಆಗಿದ್ದರು. ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ಕರ್ನಾಟಕ ಶಾಲಾ ಪರೀಕ್ಷೆ & ಮೌಲ್ಯ ನಿರ್ಣಯ ಮಂಡಳಿ ಕಚೇರಿಯಲ್ಲಿ ಸಚಿವ ಮಧು ಬಂಗಾರಪ್ಪ ಫಲಿತಾಂಶ ಪ್ರಕಟಿಸಿದ್ದರು.

ಜಿಲ್ಲೆಗೆ ಪ್ರಥಮ, ರಾಜ್ಯಕ್ಕೆ ದ್ವಿತೀಯ ರ್‍ಯಾಂಕ್ ಬಂದ ವಿದ್ಯಾರ್ಥಿನಿಯರು

ಈ ಬಾರಿ 8,42,173 ಮಕ್ಕಳ ಪೈಕಿ 5,24,984 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದರು. ಶೇ.74ರಷ್ಟು ಬಾಲಕಿಯರು ಉತ್ತೀರ್ಣರಾಗಿದ್ದು, ಫಲಿತಾಂಶದಲ್ಲಿ ಮೇಲುಗೈ ಸಾಧಿಸಿದ್ದರು. ಇನ್ನು, ಶೇ.91.12ರಷ್ಟು ಫಲಿತಾಂಶದ ಮೂಲಕ ದಕ್ಷಿಣ ಕನ್ನಡ ಜಿಲ್ಲೆ ಮೊದಲ ಸ್ಥಾನ ಪಡೆದಿದ್ದು, ಎರಡನೇ ಸ್ಥಾನದಲ್ಲಿ ಉಡುಪಿ, 3ನೇ ಸ್ಥಾನದಲ್ಲಿ ಉತ್ತರ ಕನ್ನಡ ಜಿಲ್ಲೆ ಇತ್ತು. ಶೇಕಡ 42 ಪರ್ಸೆಂಟ್ ಫಲಿತಾಂಶದ ಮೂಲಕ ಕಲಬುರಗಿ ಜಿಲ್ಲೆ ಕೊನೆಯ ಸ್ಥಾನ ಪಡೆದುಕೊಂಡಿತ್ತು. ಈ ಬಾರಿ 22ಕ್ಕೂ ಹೆಚ್ಚು ವಿದ್ಯಾರ್ಥಿಗಳು 625ಕ್ಕೆ 625 ಅಂಕ ಪಡೆದುಕೊಳ್ಳುವ ಮೂಲಕ ಕಮಾಲ್ ಮಾಡಿದ್ದರು.

## ಕೋಮು ಹಿಂಸಾಚಾರ ನಿಗ್ರಹಿಸುವ ವಿಶೇಷ ಕಾರ್ಯಪಡೆ ಕಚೇರಿ ಉದ್ಘಾಟಿಸಿದ ಗೃಹ ಸಚಿವ ಜಿ ಪರಮೇಶ್ವರ

**ಮಂಗಳೂರು:** ರಾಜ್ಯದ ಕರಾವಳಿ ಪ್ರದೇಶದಲ್ಲಿ ಕೋಮು ಹಿಂಸಾಚಾರವನ್ನು ನಿಗ್ರಹಿಸುವ ಮತ್ತು ಸಾರ್ವಜನಿಕ ಸುವ್ಯವಸ್ಥೆಯನ್ನು ಕಾಪಾಡುವ ಗುರಿಯನ್ನು ಹೊಂದಿರುವ ವಿಶೇಷ ಕಾರ್ಯಪಡೆ (ಎಸ್‌ಎಫ್) ಕಚೇರಿಯನ್ನು ಗೃಹ ಸಚಿವ ಜಿ ಪರಮೇಶ್ವರ ಶುಕ್ರವಾರ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಪರಮೇಶ್ವರ, ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಉದ್ವಿಗ್ನತೆಗೆ ಕಾರಣವಾದ ಇತ್ತೀಚಿನ ಕೊಲೆ ಸೇರಿದಂತೆ ಜಿಲ್ಲೆಯಲ್ಲಿ ಪದೇ ಪದೆ ನಡೆಯುತ್ತಿರುವ ಹಿಂಸಾಚಾರದ ಘಟನೆಗಳಿಂದಾಗಿ ಎಸ್‌ಎಫ್ ಅನ್ನು ಸ್ಥಾಪಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

ಈ ಪ್ರದೇಶವು ಸಾಂಸ್ಕೃತಿ-ಕವಾಗಿ ಶ್ರೀಮಂತವಾಗಿದ್ದು, ಸಾಕ್ಷರರು ಮತ್ತು ಶಾಂತಿಯುತ ಜನಸಂಖ್ಯೆಗೆ ನೆಲೆಯಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಇದು 'ದ್ವೇಷ ಮತ್ತು ಕೋಮು ಧ್ರುವೀಕರಣದ ವಾತಾವರಣ'ದಿಂದ ಬಳಲುತ್ತಿದೆ ಎಂದರು.




'ದೇಶದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ ಸರ್ಕಾರದ ಖಂಈ ಅನ್ನು ರಚನೆ ಮಾಡಿದೆ. ಇದು ಕೋಮು ಭಾಷಣ, ಕೋಮು ಸಂಘರ್ಷ ಸೃಷ್ಟಿಸುವವರನ್ನು ಹತ್ತಿಕ್ಕುವ ದಿಸೆಯಲ್ಲಿ ಈ ಕಾರ್ಯಪಡೆ ಕೆಲಸ ಮಾಡಲಿದೆ. ಸ್ಥಳೀಯ ಪೊಲೀಸ್ ಅಧಿಕಾರಿಗಳು ಮತ್ತು ಮಾಜಿ ಆಯುಕ್ತ ಕುಲದೀಪ್ ಕುಮಾರ್ ಜೈನ್ ಅವರ ಸಲಹೆಗಳನ್ನು ಅನುಸರಿಸಿ, ಪ್ರಸ್ತಾವನೆಯ ಒಂದು ವಾರದೊಳಗೆ ಪಡೆ ರಚಿಸಲಾಗಿದೆ' ಎಂದು ಹೇಳಿದರು.

ಇಲ್ಲಿನ ನಿವಾಸಿಗಳು ಶಾಂತಿ ಕಾಪಾಡುವಂತೆ ಸಚಿವರು ಒತ್ತಾಯಿಸಿದರು. ಜನರು ಶಾಂತವಾಗಿದ್ದರೆ, ಈ ಪಡೆ ನಿಷ್ಕ್ರಿಯವಾಗಿರುತ್ತದೆ. ಆದ-'ರೆ, ಅವರು ಹಾಗೆ ಮಾಡದಿದ್ದರೆ, ಅದು ಕಾರ್ಯನಿರ್ವಹಿಸಬೇಕಾಗುತ್ತದೆ' ಎಂದು ಅವರು ಹೇಳಿದರು.

ನಕ್ಸಲ್ ವಿರೋಧಿ ಘಟಕಗಳಿಂದ ಸಿಬ್ಬಂದಿಯನ್ನು ಎಸ್‌ಎಫ್ ರಚಿಸಲು ಮರು ನಿಯೋಜಿಸಲಾಗಿದ್ದು, ಅಗತ್ಯವಿದ್ದರೆ ಉಡುಪಿ ಮತ್ತು ಶಿವಮೊಗ್ಗದಂತಹ ಇತರ ಸೂಕ್ಷ್ಮ ಜಿಲ್ಲೆಗಳಿಗೆ ವಿಸ್ತರಿಸಲಾಗುವುದು ಎಂದು ಪರಮೇಶ್ವರ ಸ್ಪಷ್ಟಪಡಿಸಿದರು.

ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಎಸ್‌ಎಫ್ ರಚನೆಯು ದ್ವೇಷ ಮತ್ತು ಹಿಂಸಾಚಾರದ ಮೂಲ ಕಾರಣಗಳನ್ನು ಪರಿಹರಿಸಲು ರಾಜ್ಯ ಸರ್ಕಾರ ತೆಗೆದುಕೊಂಡ ನಿರ್ಣಾಯಕ ಹೆಜ್ಜೆಯಾಗಿದೆ. ಪ್ರಗತಿಪರವಾಗಿರುವ ದಕ್ಷಿಣ ಕನ್ನಡ ಮತ್ತು ಉಡುಪಿಯಲ್ಲಿ ಏಕೈಕ ಕರಾಳ ವಿಚಾರವೆಂದರೆ ಕೋಮು ಉದ್ವಿಗ್ನತೆ. ಈ ಸಮಯದಲ್ಲಿ ಇದನ್ನು ತೊಡೆದಾಕುವ ಅಗತ್ಯವಿದೆ ಎಂದು ಹೇಳಿದರು.

ಖಂಈ ರಾಜಕೀಯ ಪ್ರೇರಿತವಾಗಿಲ್ಲ ಮತ್ತು ಸಾಮರಸ್ಯವನ್ನು ಕಾಪಾಡುವ ಗುರಿಯನ್ನು ಹೊಂದಿದೆ. ಮುಂದಿನ ದಿನಗಳಲ್ಲಿ ಎಲ್ಲ ಸಮುದಾಯಗಳ ಪ್ರತಿನಿಧಿಗಳೊಂದಿಗೆ ಶಾಂತಿ ಸಭೆಗಳನ್ನು ನಡೆಸುವ ಯೋಜನೆಗಳು ನಡೆಯುತ್ತಿವೆ ಎಂದು ರಾವ್ ಹೇಳಿದರು.

ಕರ್ನಾಟಕ ರಾಜ್ಯ ಪೊಲೀಸ್ ವತಿಯಿಂದ ಕರಾವಳಿ ಭಾಗದಲ್ಲಿ ನೂತನವಾಗಿ ಆರಂಭಿಸಿರುವ 'ಕೋಮು ಹಿಂಸೆ ನಿಗ್ರಹ ವಿಶೇಷ ಕಾರ್ಯಪಡೆ'ಯನ್ನು ಮಂಗಳೂರು ನಗರದಲ್ಲಿ ಇಂದು ಉದ್ಘಾಟಿಸಿದೆನು.

## ಪ್ರಿಯಾಂಕಾ ಜಾರಕಿಹೊಳಿ ಅಧ್ಯಕ್ಷತೆಯಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



ಹಳ್ಳೂರ 13, ಪ್ರಿಯಾಂಕಾ ಸತೀಶ ಜಾರಕಿಹೊಳಿ ಮಾನ್ಯ ಚಿಕ್ಕೋಡಿ ಲೋಕಸಭಾ ಸದಸ್ಯರಾದ ಪ್ರಿಯಾಂಕಾ ಸತೀಶ ಜಾರಕಿಹೊಳಿ ಅವರ ಅಧ್ಯಕ್ಷತೆಯಲ್ಲಿ 2025 ನೇ ಸಾಲಿನಲ್ಲಿ ನಡೆದ ಎಸ್. ಎಸ್. ಎಲ್. ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಚಿಕ್ಕೋಡಿ ಶೈಕ್ಷಣಿಕ ಜಿಲ್ಲಾ ಮಟ್ಟದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಹಾಗೂ ಅಭಿನಂದನಾ ಸಮಾರಂಭವನ್ನು ರವಿವಾರ ದಿ 15 ರಂದು ಚಿಕ್ಕೋಡಿ ಸಂಸದರ ಸಭಾ ಭವನದಲ್ಲಿ ನೆರವೇರಲಿದೆ.

ಕಾರ್ಯಕ್ರಮದ ಅಧ್ಯಕ್ಷತೆ ಹಾಗೂ ಉದ್ಘಾಟನೆ ಕು. ಪ್ರಿಯಾಂಕಾ ಸತೀಶ ಜಾರಕಿಹೊಳಿ ಮಾನ್ಯ ಲೋಕಸಭಾ ಸದಸ್ಯರು, ಚಿಕ್ಕೋಡಿ. ಮುಖ್ಯ ಅತಿಥಿಗಳು ಶ್ರೀ ಗಣೇಶ ಪ್ರಕಾಶ ಹುಕ್ಕೇರಿ ಮಾನ್ಯ ಶಾಸಕರು, ಚಿಕ್ಕೋಡಿ-ಸದಲಗಾ ಶ್ರೀ ಲಕ್ಷ್ಮಣರಾವ ಚಿಂಗಳೆ ಅದ್ಯಕ್ಷರು, ನಗರಾಭಿವೃದ್ಧಿ ಪ್ರಾಧಿಕಾರ ಬೆಳಗಾವಿ ಶ್ರೀ ಮಹಾವೀರ ಎಲ್. ಮೋಹಿತೆ ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿಗಳು ಹಾಗೂ ಹಿರಿಯ ಮುಖಂಡರು ರಾಯಭಾಗ ಉಪನ್ಯಾಸ ಶ್ರೀ ವಿಶ್ವನಾಥ ಚೌಗಲಾ ಕನ್ನಡ ಉಪನ್ಯಾಸಕರು,ಸರಕಾರಿ ಪದವಿಪೂರ್ವ ಕಾಲೇಜು, ಮಜಲಟ್ಟಿ ಅತಿಥಿಗಳು ಶ್ರೀ ರಾಮನಗೌಡ ಕನ್ನೊಳ್ಳಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಳಗಾವಿ ಶ್ರೀ ಪಾಂಡುರಂಗ ಈಶ್ವರ ಭಂಡಾರೆ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಚಿಕ್ಕೋಡಿ ಶ್ರೀ ಸುಭಾಷ ಎಸ್. ಸಂಪಗಾಂವಿ ಎ.ಎಸ್. ಉಪ ವಿಭಾಗಾಧಿಕಾ-ರಿಗಳು ಹಾಗೂ ಉಪ ವಿಭಾಗೀಯ ದಂಡಾಧಿಕಾರಿಗಳು, ಚಿಕ್ಕೋಡಿ ಶ್ರೀ ಆರ್. ಎಸ್. ಸೀತಾರಾಮು .ಇ.ಎಸ್. ಉಪ ನಿರ್ದೇಶಕರು, (ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಸೇರಿದಂತೆ ರಾಜಕಿಯ ಮುಖಂಡರು ಕಾರ್ಯಕರ್ತರು ಸಾರ್ವಜನಿಕರು ಆಗಮಿಸುವರು , ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಜಾ ದಿನಗಳಂದು ಉಪ ನೊಂದಣಿ ಕಚೇರಿ ಕಾರ್ಯ ನಿರ್ವಹಣೆ

ಬೈಲಹೊಂಗಲ- ಸಾರ್ವಜನಿಕರ ಅನುಕೂಲಕ್ಕಾಗಿ ರಾಜ್ಯದಲ್ಲಿ ಈಗಾಗಲೆ 2 ನೇ ಮತ್ತು 4 ನೇ ಶನಿವಾರ ಭಾನುವಾರಗಳ ರಜಾ ದಿನದಂದು ನೊಂದಣಿ ಮತ್ತು ಮುದ್ರಾಂಕ ಇಲಾಖೆಯ ಉಪನೊಂದಣಿ ಕಛೇರಿಗಳು ಕಾರ್ಯನಿರ್ವಹಿಸಲು ಸರ್ಕಾರ ಆದೇಶ ಮಾಡಿದ್ದು ಅದರಂತೆ ಬೆಳಗಾವಿ ಜಿಲ್ಲೆಯಲ್ಲಿ ದಿನಾಂಕ 15/06/2025 ರಂದು ಬೈಲಹೊಂಗಲದ ಉಪನೋಂದಣಿ ಕಛೇ-ರಿಯು ಕಾರ್ಯನಿರ್ವಹಿಸಲಿದ್ದು ಎಂದಿನಂತೆ ಕಛೇರಿಯಲ್ಲಿ ಜಿಲ್ಲೆಯ ಯಾವುದೇ ಸ್ವತ್ತುಗಳ ನೋಂದಣಿ ಮಾಡಿಸಬಹುದಾಗಿದೆ.

ಕಾರಣ ಸಾರ್ವಜನಿಕರು ಇದರ ಸದುಪಯೋಗವನ್ನು ಮಾಡಿಕೊಳ್ಳಬೇಕು. ರವಿವಾರ ಕಛೇರಿಯು ಕಾರ್ಯನಿರ್ವಹಿಸುವದರಿಂದ ಬರುವ ಮಂಗಳವಾರ ದಿನಾಂಕ 17/06/2025 ಕಛೇ-ರಿಗೆ ರಜೆ ಇರುತ್ತದೆ ಎಂದು ಬೈಲಹೊಂಗಲ ಉಪನೊಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ಬಸಶ್ರೀ ಪ್ರಶಸ್ತಿಗೆ ಹಿರೇಹೊಳಿ ಆಯ್ಕೆ



ತಾಳಿಕೋಟೆ, ನಾಟ್ಯ ಸ್ಫೂರ್ತಿ ಆರ್ಟ & ಕಲ್ಚರಲ್ ಅಕಾಡೆಮಿ (ರಿ) ಧಾರವಾಡ ಇದರ 15ನೇ ವಾರ್ಷಿಕೋತ್ಸವದ ಅಂಗವಾಗಿ ಕೊಡಮಾಡಲಾಗುವ ರಾಜ್ಯಮಟ್ಟದ ಬಸವಶ್ರೀ ಪ್ರಶಸ್ತಿಗೆ ತಾಳಿಕೋಟೆಯ ಶ್ರೀ ಸಂಗಮೇಶ್ವರ ಪ್ರೌಢ ಶಾಲೆಯ ಹಿಂದಿ ಶಿಕ್ಷಕ ಬಿ.ಆಯ್.ಹಿರೇಹೊಳಿ ಅವರು ಆಯ್ಕೆಯಾಗಿದ್ದಾರೆ.

ಶಿಕ್ಷಕ ಬಿ.ಆಯ್.ಹಿರೇಹೊಳಿ ಅವರು ಶಿಕ್ಷಣ ಕ್ಷೇತ್ರದಲ್ಲಿಯ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದ್ದು ಇದೇ ದಿ. 15 ರಂದು ದಾರವಾಡದ ಆಲೂರ ವೆಂಕಟರಾವ್ ಭವನದಲ್ಲಿ ನಡೆಯಲಿರುವ ವಾರ್ಷಿಕೋತ್ಸವ ಸಮಾರಂಭದಲ್ಲಿ ರಾಜ್ಯಮಟ್ಟದ ಬಸವಶ್ರೀ ಪ್ರಶಸ್ತಿ ಪ್ರಧಾನವಾಗಲಿದೆ.

ಶಿಕ್ಷಕ ಬಿ.ಆಯ್.ಹಿರೇಹೊಳಿ ಅವರಿಗೆ ರಾಜ್ಯ ಮಟ್ಟದ ಬಸವಶ್ರೀ ಪ್ರಶಸ್ತಿ ಲಬಿಸಿದ್ದಕ್ಕೆ ಎಸ್.ಎಸ್.ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಚ್. ಎಸ್.ಪಾಟೀಲ, ಕಾರ್ಯದರ್ಶಿ ಸಚಿನ.ಎಚ್.ಪಾಟೀಲ, ಆಡಳಿತಾಧಿಕಾರಿ ಕಿರಣ.ಎಚ್.ಪಾಟೀಲ, ರವಿ.ಬಿ.ಪಾಟೀಲ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಅಶೋಕ.ಕಟ್ಟಿ, ಜೆ.ಎಮ್. ಕೊಣ್ಣೂರ, ಒಳಗೊಂಡು ಸಂಸ್ಥೆಯ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ನಿಗದಿತ ಅವಧಿಗಿಂತ ಮೊದಲೇ ಸುರಿಯುತ್ತಿರುವ ಮಳೆಯಿಂದ ಜನಜೀವನ ಅಸ್ತವ್ಯಸ್ತ

# ಮುಂಗಾರು ಪೂರ್ವ ಮಳೆ ತಾಲೂಕಿನಲ್ಲಿ ಬಿತ್ತನೆ ಚುರುಕು

**ಜಮಖಂಡಿ:** ಮಳೆಯಿಂದ ಒಂದಡೇ ಆತಂಕ ಸೃಷ್ಠಿಯಾದರೇ, ಮತ್ತೊಂಡೆಗೆ ಸಂಭ್ರಮದ ವಾತಾವರಣ. ಇದು ತಾಲೂಕಿನ ಜನತೆ ಅನುಭವಿಸುತ್ತಿರುವ ಪ್ರಸಕ್ತ ಸನ್ನವೇಷ. ನಗರಪ್ರದೇಶದಲ್ಲಿ ವಾಡಿಕೆಗೆ ಮುಂಚೆ ಸು-ರಿಯುತ್ತಿರುವ ಮಳೆಯಿಂದ ವ್ಯಾಪಾರ ಇಳಿಮುಖವಾಗುವ ಮೂಲಕ ಸಾಂಕ್ರಾಮಿಕ ರೋಗಗಳ ತೊಂದರೆ ಅನುಭವಿಸುತ್ತಿದ್ದಾರೆ. ಆದರೇ ಗ್ರಾಮೀಣಪ್ರದೇಶದಲ್ಲಿ ಸು-ರಿಯುತ್ತಿರುವ ಮಳೆಯಿಂದ ಸಂಭ್ರಮದಿಂದ ತಮ್ಮ ಜಮೀನುಗಳಲ್ಲಿ ಬಿತ್ತನೆ ಕೆಲಸ ಚುರುಕುಗೊಳಿಸಿರುವ ಹಿನ್ನಲೆಯಲ್ಲಿ ಸಂತಸ ವ್ಯಕ್ತಪಡಿಸುತ್ತಿದ್ದಾರೆ.



ಮಳೆಗಾಲ ಪ್ರಾರಂಭವಾಗಿದ್ದು ತಾಲೂಕಿನಾದ್ಯಂತ ಕೃಷಿ ಚಟುವಟಿಕೆಗಳು ಭರದಿಂದ ಸಾಗಿವೆ. ರೈತರು ಮುಂಗಾರು ಬೆಳೆಗಳ ಬಿತ್ತನೆಗೆ ಸಿದ್ಧತೆ ಮಾಡಿಕೊಂಡಿದ್ದು ನೀರಾವರಿ ಸೌಲಭ್ಯವಿರುವ ನದಿತೀರದ ಗ್ರಾಮಗಳಲ್ಲಿ ವಾಣಿಜ್ಯ ಬೆಳೆ ಕಬ್ಬಿನ ನಾಟಿ ಜೋರಾಗಿ ನಡೆದಿದೆ.

ವಾಡಿಕೆಗಿಂತ ಮೊದಲೇ ಮಳೆ ಪ್ರಾರಂಭವಾಗಿದ್ದರಿಂದ ತಾಲೂಕಿನ ಕೆಲಕಡೆಗಳಲ್ಲಿ ಬೆಳೆಯಲಾಗಿದ್ದ ಬೇಸಿಗೆ ಮೆಕ್ಕೆ ಜೋಳ ಮಳೆಯಲ್ಲಿ ಸಿಲುಕಿ ತೊಂದರೆ ಅನುಭವಿಸಿದ ಘಟನೆಗಳು ನಡೆದಿವೆ. ದ್ರಾಕ್ಷಿ ಸಹಿತ ವಿವಿಧ ಹಣ್ಣಿನ ಬೆಳಗೆಗಳು ಮತ್ತು ತರಕಾರಿಗಳು, ಈರುಳ್ಳಿ, ಮಾವು ಬೆಳೆದ ರೈತರು ಮುಂಗಾರು ಪೂರ್ವ ಮಳೆಯಿಂದ ಹಾನಿ ಅನುಭವಿಸಿದ್ದಾರೆ. ಮಾವಿನ ಬೆಲೆ ಕುಸಿದಿದ್ದು ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಬ್ಬು ಬೆಳೆಗಾರರಿಗೆ ಮುಂಗಾರು ಪೂರ್ವ ಮಳೆ ವರದಾನದಂತೆ ಕೆಲಸ ಮಾಡಿದೆ. ನದಿಯಲ್ಲಿ ನೀರು ಬತ್ತಿ ಹೋಗುತ್ತಿತ್ತು, ಕೊಳವೆಭಾವಿಗಳ ನೀರು ಕಡಿಮೆಯಾಗಿ ಕಬ್ಬಿನ ಬೆಳೆ ಉಳಿಸಿಕೊಳ್ಳುವದು ಕಷ್ಟದ ಮಾತಾಗಿ-ತ್ತು. ವಾಡಿಕೆಗೆ ಪೂರ್ವದಲ್ಲಿ ಮಳೆಯಾಗಿದ್ದ-ರಿಂದ ನದಿಯಲ್ಲಿ ನೀರು ಬಂದಿದ್ದು, ಕೊಳವೆಬಾವಿಗಳು ಚಾರ್ಜ ಆಗಿ ಒಣಗುತ್ತಿದ್ದ ಕಬ್ಬಿಗೆ ಜೀವ ಜಲ ಲಭಿಸಿದೆ.

ಮುಂಗಾರು ಮಳೆ ಪ್ರಾರಂಭವಾಗಿದ್ದು ರೈತರು ಕೃಷಿ ಚಟುವಟಿಕೆಯಲ್ಲಿ ತೊಡಗಿದ್ದಾರೆ. ಒಣ ಬೇಸಾಯ ವಿರುವ ರೈತರು ತೊಗರಿ, ಜೋಳ, ಕಡಲೆ, ಶೇಂಗಾ ಉದ್ದು, ಅಲಸಂದಿ, ಹೆಸರು, ಮುಂತಾದ ಬೆಳೆಗಳ ಬಿತ್ತನೆಗೆ ತಯಾರಿ ನಡೆಸಿದ್ದಾರೆ. ನೀರಾವರಿ ಅನುಕೂಲ ವಿರುವ ರೈತರು ಕಬ್ಬು ನಾಟಿ ಮಾಡುತ್ತಿದ್ದು ಕೃಷಿ ಚಟುವಟಿಕೆಗಳು ಭರದಿಂದ ನಡೆಯುತ್ತಿವೆ. ಕೃಷಿ ಉಪಕರಣಗಳ ಸದ್ದು ಜೋರಾಗಿ ಕೇಳಿ ಬರುತ್ತಿದ್ದು, ಎತ್ತುಗಳು, ಕಾರ್ಮಿಕರ, ಟ್ರ್ಯಾಕ್ಟರಗಳ ಭರಾಟೆ ಆರಂಭಗೊಂಡಿದೆ

ಸುರಿಯುತ್ತಿರುವ ಮಳೆ......

ನಿಗದಿತ ಅವಧಿಗಿಂತ ಮೊದಲೇ ಸು-ರಿಯುತ್ತಿರುವ ಮಳೆಯಿಂದ ಬೇಸಿಗೆ ತಿಂಗಳಾದ ಮೇ ಮತ್ತು ಜೂನ ತಿಂಗಳಲ್ಲಿ ತಾಲೂಕಿನಲ್ಲಿ ಯಾವುದೇ ರೀತಿಯಲ್ಲಿ ನೀರಿನ ಹಾಹಾಕಾರ ಉಂಟಾಗಿಲ್ಲ. ಕಳೆದ 20 ದಿನಗಳ ಹಿಂದೆಯೇ ಆರಂಭಗೊಂಡಿರುವ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಸಾಂಕ್ರಾಮಿಕ ರೋಗಗಳು ಹರಡುತ್ತಿದ್ದು, ಆಸ್ಪತ್ರೆಗಳಲ್ಲಿ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ತಾಲೂಕಿನ ದಾಖಲೆ ಪ್ರಮಾಣದಲ್ಲಿ ವಾಡಿಕೆಗಿಂತೆ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿದೆ. ಸಂತೆ ದಿನವಾದ ಗುರುವಾರ ಕೂಡ ಸುರಿದ ಮಳೆಯಿಂದ ವ್ಯಾಪಾರ, ವಹಿವಾಟು ಸ್ಥಗಿ-ತಗೊಂಡಿದೆ.



## ದಿ.ಬಿ.ಎಸ್.ಪಾಟೀಲರು ಧರ್ಮದ ದಾರಿಯಲ್ಲಿ ಸಾಗಿದ್ದರು-ವೇ.ಹಿರೇಮಠ



ತಾಳಿಕೋಟೆ, ರಾಜ್ಯದ ರಾಜಕೀಯ ದಿಗ್ಗಜರಲ್ಲಿಯೇ ಅತೀ ಚಾಣಕ್ಯ ರಾಜ-ಕಾರಣಿಯಾಗಿ ಮೇರು ವ್ಯಕ್ತಿತ್ವದಿಂದ ಗುರುತಿಸಿಕೊಂಡ ಬಡಬಗ್ಗರ, ರೈತರ ನಾಡಿಮಿಡಿತ ಅರೀತುಕೊಂಡು ಅವರ ಬಧುಕನ್ನು ಹಸನಗೊಳಿಸಲು ಮಾಜಿ ಸಚಿವ ದಿ.ಬಿ.ಎಸ್.ಪಾಟೀಲ(ಸಾಸನೂರ) ಅವರು ಶ್ರಮಿಸಿದವರಾಗಿದ್ದರೆಂದು ಕೊಣ್ಣೂರಿನ ವೇ. ಈರಯ್ಯ ಹಿರೇಮಠ ಅವರು ನುಡಿದರು.

ಮಂಗಳವಾರರಂದು ಹಿರೂರ ಗ್ರಾಮದ ಕೆಜಿವ್ಹಿಎ ಸಂಘದ ಶ್ರೀ ಭೋಗೇಶ್ವರ ಪ.ಪೂ.ಕಾಲೇಜ್ ಆವರಣದಲ್ಲಿ ಮಾಜಿ ಸಚಿವ ದಿ.ಬಿ.ಎಸ್.ಪಾಟೀಲ(ಸಾಸನೂರ) ಅವರ ಏಳನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದ ಅಂಗವಾಗಿ ಅವರ ಗದ್ದುಗೆಗೆ ರುದ್ರಾಭಿಷೇಕ, ನವಗೃಹ ಪೂಜೆ ನೆರವೇರಿಸಿ ಸಾನಿದ್ಯವಹಿಸಿ ಮಾತನಾಡಿದ ಅವರು ದಿ.ಬಿ.ಎಸ್.ಪಾಟೀಲ(ಸಾಸನೂರ) ಅವರು ಗೌಡ್ಕಿ ಮನೆತನದಲ್ಲಿಯೇ ಹುಟ್ಟಿ ಬೆಳೆದು ಬಂದಿದ್ದರೂ ಕೂಡಾ ಅಹಂಭಾವವೆಂಬುದು ಅವರಲ್ಲಿ ಇರಲಿಲ್ಲಾ ಸಾಮಾನ್ಯರಲ್ಲಿ ಸಾಮಾನ್ಯರಾಗಿ ಬಡವರ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸುವ ಗುಣಗಳನ್ನು ಹೊಂದಿದ್ದರು ಯಾವಾಗಲೂ ಹಸನ್ಮುಖದೊಂದಿಗೆ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾ ಇಡೀ ರಾಜ್ಯದ ರೈತರ ಏಳಿಗೆಗಾಗಿ ರಾಜ್ಯದಲ್ಲಿಯೇ ಮೊದಲಭಾರಿಗೆ ಬೆಂಬಲಬೆಲೆಯನ್ನು ಘೋಷಣೆ ಮಾಡಿ ರೈತರಿಗೆ ಹುಮ್ಮಸ್ಸನ್ನು ತುಂಬುವದರೊಂದಿಗೆ ಅವರ ಕಷ್ಟಕ್ಕೆ ಅಣಿಯಾದಂತ ವ್ಯಕ್ತಿಯಾಗಿದ್ದರು ರಾಜ್ಯದಲ್ಲಿಯ ಕೃಷಿ ಉತ್ಪನ್ನ ಮಾರುಕಟ್ಟೆಗಳಿಗೆ ಹೊಸ ಪರಿಭಾಷೆಯ ಮೂಲಕ ರೈತರ ಜೀವನ ಉನ್ನತಿಗೋಸ್ಕರ ಅನೇಕ ಬದಲಾವಣೆಗಳನ್ನು ತಂದು ರೈತರ ಉತ್ಪನ್ನಗಳಿಗೆ ಒಳ್ಳೆಯ ಬೆಲೆ ಸಿಗುವಂತೆ ಮಾಡಿದರು, ಆರೋಗ್ಯ ಮತ್ತು ಸಕ್ಕರೆ ಸಚಿವರಾಗಿದ್ದಾಗೂ ಕೂಡಾ ರಾಜ್ಯದಲ್ಲಿಯೇ ಮೊದಲ ಭಾ-ರಿಗೆ ಪ್ರಾಥಮಿಕ ಚಿಕೀತ್ಸಾಲಯಗಳನ್ನು ಪ್ರಾರಂಬಿಸಿ ಹಳ್ಳಿಗಾಡಿನ ಜನರಿಗೂ ಸಹ ಸೇವೆ ಒದಗಿಸುವಂತ ಕಾರ್ಯಗಳನ್ನು ಮಾಡಿದ್ದಾರೆ ಅವರು ಹಾಕಿಕೊಟ್ಟ ಮಾರ್ಗದತ್ತ ಅವರ ಮಗನಾದ ದೇವರಹಿಪ್ಪರಗಿ ಮತಕ್ಷೇತ್ರದ ಮಾಜಿ ಶಾಸಕ ಸೋಮನಗೌಡ ಪಾಟೀಲ(ಸಾಸನೂರ) ಅವರೂ ಕೂಡಾ ಅಭಿವೃದ್ದಿ ಕಾರ್ಯಗಳ ಮೂಲಕ ಕ್ಷೇತ್ರದಲ್ಲಿ ಜನಮಾನಸದಲ್ಲಿ ಉಳಿದುಕೊಂಡಿ ದ್ದಾರೆಂದರಲ್ಲದೇ ದಿ.ಬಿ.ಎಸ್.ಪಾಟೀಲ(ಸಾಸನೂರ) ಅವರು ಕ್ಷೇತ್ರದ ಜನರೊಂದಿಗೆ ಇಟ್ಟ ಒಡನಾಟಗಳ ಕುರಿತು ವಿವರಿಸಿದರು.

ಇನ್ನೋರ್ವ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಪ್ರಭುಗೌಡ ಬಿರಾದಾರ(ಅಸ್ಕಿ) ಅವರು ಮಾತನಾಡಿ ದಿ.ಬಿ.ಎಸ್.ಪಾಟೀಲ(ಸಾಸನೂರ) ಅವರು ಕೇವಲ ರಾಜಕಾರಣದಲ್ಲಿ ಅಷ್ಟೇ ಅಲ್ಲದೇ ಶೈಕ್ಷಣಿಕ ಕ್ಷೇತ್ರದಲ್ಲಿಯೂ ದಾಪುಗಾಲುವನ್ನು ಹಾಕಿದವರಾಗಿದ್ದರು ಮತಕ್ಷೇತ್ರದಲ್ಲಿಯ ಕಡುಬಡವರಿಗೆ ಒಳ್ಳೆಯ ಶಿಕ್ಷಣ ಸಿಗಬೇಕೆಂಬ ಉದ್ದೇಶದೊಂದಿಗೆ ಕೆಜಿವ್ಹಿಎ ಸಂಘದಡಿಯಲ್ಲಿ ಪ್ರಾಥಮಿಕ ಹಂತದಿಂದ ಪಧವಿ ಶಿಕ್ಷಣದವರೆಗೂ ಶಾಲಾ ಕಾಲೇಜುಗಳನ್ನು ಪ್ರಾರಂಬಿಸಿ ಶಿಕ್ಷಣದ ಕ್ರಾಂತಿ ಹರಿಸುವ ಮೂಲಕ ಜಿಲ್ಲೆಯಲ್ಲಿಯೇ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳ ಸಾಲಿನಲ್ಲಿ ಶ್ರೀ ಭೋಗೇಶ್ವರ ಶಿಕ್ಷಣ ಸಂಸ್ಥೆಯನ್ನು ಬೆಳಿಸಿದ್ದಾರೆ ಈ ಶಿಕ್ಷಣ ಸಂಸ್ಥೆಯು ಅನೇಕ ಅಂಗ ಸಂಸ್ಥೆಗಳ ಮೂಲಕ ಗ್ರಾಮೀಣ ಭಾಗದಲ್ಲಿಯ ವಿದ್ಯಾರ್ಥಿಗಳಿಗೆ ಒಳ್ಳೆಯ ಶಿಕ್ಷಣ ಒದಗಿಸುವಂತಹ ಕಾರ್ಯವನ್ನು ಮಾಡಿದ್ದಾರೆ ರಾಜಕೀಯ ಜೀವನದಲ್ಲಿ ಅನೇಕ ಕಷ್ಟಗಳು ಬಂದರೂ ಕೂಡಾ ಅವುಗಳೆಲ್ಲವನ್ನು ಬೇದಿಸಿ ರಾಜ-ಕೀಯ ಮೇರುಘಟ್ಟವನ್ನು ತಲುಪಿದ್ದಾರೆ ಅಂತಹ ಮೇರು ವ್ಯಕ್ತಿತ್ವದ ರಾಜಕಾರಣಿ ಮಕ್ಕಳಾದ ದೇವರಹಿಪ್ಪರಗಿ ಮಾಜಿ ಶಾಸಕ ಸೋಮನಗೌಡ ಪಾಟೀಲ(ಸಾಸನೂರ), ಸಹೋದರ ಸಾಹೇಬಗೌಡ, ಸುರೇಶಗೌಡ ಅವರೂ ಕೂಡಾ ಕ್ಷೇತ್ರದಲ್ಲಿಯ ಜನರ ಸಂಕಷ್ಟಕ್ಕೆ ಸ್ಪಂದಿಸುವದರೊಂದಿಗೆ ಕ್ಷೇತ್ರವನ್ನು ಅಭಿವೃದ್ದಿ ಕಾರ್ಯಗಳ ಮೂಲಕ ಮುನ್ನಡೆಸಿದವರಾಗಿದ್ದಾರೆ ದಿ.ಬಿ.ಎಸ್.ಪಾಟೀಲರು ಹಾಕಿಕೊಟ್ಟ ಮಾರ್ಗದತ್ತ ಎಲ್ಲ ರಾಜಕಾರಣಿಗಳು ಮುನ್ನಡೆಯಲಿ ಕ್ಷೇತ್ರದಲ್ಲಿ ಅಭಿವೃದ್ಧಿಯ ಕ್ರಾಂತಿ ಚಿಮ್ಮಿಸಲಿ ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಶಾಸಕ ಸೋಮನಗೌಡ ಪಾಟೀಲ ಅವರು ವಹಿಸಿ ಮಾತನಾಡಿದರು.

ಈ ಸಮಯದಲ್ಲಿ ಸಾಹೇಬಗೌಡ ಪಾಟೀಲ(ಸಾಸನೂರ), ಸುರೇಶಗೌಡ ಪಾಟೀಲ(ಸಾಸನೂರ), ನಾನಾಗೌಡ ಬಿರಾದಾರ(ವಡವಡಗಿ), ಶಂಕರಗೌಡ ಅಸ್ಕಿ, ಭೀಮನಗೌಡ ಸಿದ್ದರಡ್ಡಿ, ಅವ್ವಣ್ಣ ಗ್ವಾತಗಿ, ಸಂಗನಗೌಡ ಹೆಗರಡ್ಡಿ, ಎಚ್.ಎಸ್.ಪಾಟೀಲ, ರಮೇಶ ಮಸಬಿನಾಳ, ಶೇಖರಗೌಡ ಪಡೇಕನೂರ, ಭೀಂನಗೌಡ ಬಿರಾದಾರ, ಹಣಮಂತ್ರಾಯ ಗುಣಕಿ, ಎಸ್.ಎನ್.ಬಸಣ್ಣವರ, ಎಸ್. ಎಸ್.ಸಂಗನಗೌಡರ, ಯಂಕು ನಾಡಗೌಡ, ಮಲ್ಲನಗೌಡ ನಾಡಗೌಡ, ಹಾಗೂ ಬಂದು ಮಿತ್ರರು, ರಾಜಕೀಯ ಮುಖಂಡರುಗಳು, ಕೆಜಿವ್ಹಿಎ ಸಂಘದ ನಿರ್ದೇಶಕರು, ಸಿಬ್ಬಂದಿವರ್ಗದವರು, ಅಭಿಮಾನಿಗಳು ಉಪಸ್ಥಿತರಿದ್ದರು. ಬಿ.ಕೆ.ಪಾಟೀಲ ನಿರೂಪಿಸಿ ವಂದಿಸಿದರು.

## ಶಾಲೆಯಲ್ಲಿ ಪರಿಸರ ದಿನಾಚಾರಣೆ

### ಪರಿಸರದಿಂದ ಸಿಗುವ ಆರೋಗ್ಯದ ಬಗ್ಗೆ ಮಕ್ಕಳಿಗೆ ಮಾಹಿತಿ



**ಬೈಲಹೊಂಗಲ-** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ (ರಿ) ಹಿರೇಬಾಗೇವಾಡಿ ಆಶ್ರಯದಲ್ಲಿ ಮದನಬಾವಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಪರಿಸರ ಮಾಹಿತಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿತ್ತು.

ಮುಖ್ಯ ಶಿಕ್ಷಕ ಚಂದ್ರಶೇಖರ ಸಂಗನಗೌಡ್ರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಅಥಿತಿಯಾಗಿ ಆಗಮಿಸಿದ ಸಿ.ಎಸ್.ಶಿವನಾಯ್ಕರ ಕಾರ್ಯಕ್ರಮವನ್ನು ಉದ್ದೇಶಿಸಿ ಪರಿಸರ ಸಂರಕ್ಷಣೆಯ ಬಗ್ಗೆ ಪರಿಸರದಿಂದ ಸಿಗುವ ಆರೋಗ್ಯದ ಬಗ್ಗೆ ಮಕ್ಕಳಿಗೆ ಮಾಹಿತಿ ನೀಡಿದರು.

ಶಾಲೆಯ ಸಹ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ, ಸೇವಾ ಪ್ರತಿನಿಧಿ ಸಂಘದ ಸದಸ್ಯರು ಮತ್ತು ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ತಾಲ್ಲೂಕು ಕೃಷಿ ಮೇಲ್ವಿಚಾರಕ ರಿಯಾಜಸಾಹೇಬ ದರಗಾದ ಸ್ವಾಗತಿಸಿದರು. ಶಿಕ್ಷಕಿ ಮಂಜುಳಾ ಶೆಟ್ಟರ ನಿರೂಪಿಸಿದರು. ವಲಯದ ಮೇಲ್ವಿಚಾರಕಿ ಯಶೋಧ ವಂದಿಸಿದರು.

### ಹವಾಮಾನ ಇಲಾಖೆಯ ಮುನ್ಸೂಚನೆ ಮೇರೆಗೆ ಜಿಲ್ಲಾಡಳಿತದಿಂದ

## ಸಾರ್ವಜನಿಕರಿಗೆ ಮುನ್ನೆಚ್ಚರಿಕಾ ಸೂಚನೆಗಳು

ಗದಗ : ರಾಜ್ಯ ಹವಾಮಾನ ಇಲಾಖೆಯ ವರದಿಯಂತೆ, ಗದಗ ಜಿಲ್ಲೆಯಲ್ಲಿ ದಿನಾಂಕ 12-06-2025 ರಂದು ರೆಡ್ ಅಲರ್ಟ್, 13-06-2025 & 15-06-2025 ರಂದು ಆರೆಂಜ್ ಅಲರ್ಟ್ ಹಾಗೂ ದಿನಾಂಕ 14-06-2025 ರಂದು ಯಲ್ಲೋ ಅಲರ್ಟ ನೀಡಲಾಗಿದ್ದು, ಇದರಿಂದ ಗದಗ ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಸಂಭವ ಇರುತ್ತದೆ. ಸಾರ್ವಜನಿಕರು ಮುನ್ನೆಚ್ಚರಿಕೆಯಿಂದ ಇರುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಮಳೆಯಾಗುವ ಸಂದರ್ಭದಲ್ಲಿ ಗುಡುಗು-ಸಿಡಿಲಿನಿಂದಾಗುವ ಅಹಿತಕರ ಘಟನೆಗಳನ್ನು ತಪ್ಪಿಸಲು ಸಾರ್ವಜನಿಕರು ಮನೆಯಲ್ಲಿಯೇ ಇರಲು ಅಥವಾ ಸುರಕ್ಷಿತ ಸ್ಥಳಗಳಲ್ಲಿರ ಇರಬೇಕು. ಮಳೆಯಾಗುವ ಸಂದರ್ಭದಲ್ಲಿ ನದಿ/ಹಳ್ಳದ/ಕೆರೆ ದಡದಲ್ಲಿ ಬಟ್ಟೆ ತೊಳೆಯುವುದು, ಈಜಾಡುವುದು, ದನಕರುಗಳನ್ನು ಮೆಯಿಸುವುದು ಹಾಗೂ ಅಪಾಯವಿರುವ ಸೇತುವೆಗಳಲ್ಲಿ ಸಂಚರಿಸುವುದು ಮತ್ತು ಇತರೆ ಚಟುವಟಿಕೆ ನಡೆಸದಂತೆ ಮುನ್ನೆಚ್ಚ-ರಿಕೆಯನ್ನು ತೆಗೆದುಕೊಳ್ಳುವುದು.

ಭಾರಿ ಮಳೆ/ಪ್ರವಾಹ ಸಂದರ್ಭದಲ್ಲಿ ತಗ್ಗು ಪ್ರದೇಶದಲ್ಲಿ ವಾಸವಿದ್ದರೆ, ಸುರಕ್ಷತೆ ಇರುವ ಸ್ಥಳಗಳಿಗೆ ತೆರಳಬೇಕು. ಯುವಕರು ಮತ್ತು ಸಾರ್ವಜನಿಕರು ನದಿ/ಹಳ್ಳದ/ಕೆರೆ ದಡಗಳಲ್ಲಿ ಅಪಾಯವಿರುವ ಸೇತುವೆಗಳಲ್ಲಿ ಫೋಟೋ/ ಸೆಲ್ಫಿ ಗಳನ್ನು ತೆಗೆಯದಂತೆ ಮುನ್ನೆಚ್ಚರಿಕೆ ವಹಿಸಬೇಕು. ನಿರಂತರ ಮಳೆಯಿಂದ ಅಪಾಯವಿರುವ ಮನೆ, ಗೋಡೆ ಇತರೆ ಕಟ್ಟಡಗಳು ಕುಸಿಯುವ ಸಂದರ್ಭವಿರುತ್ತದೆ, ಇದರಿಂದ ಸಾವು ನೋವುಗಳು ಸಂಭವಿಸುವ ಸಂದರ್ಭವಿರುವುದ-ರಿಂದ ಸಾರ್ವಜನಿಕರಿಗೆ ಸುರಕ್ಷತೆಯ ದೃಷ್ಠಿಯಿಂದ ಮುನ್ನೆಚ್ಚರಿಕೆಯ ಕ್ರಮಗಳನ್ನು ತೆಗೆದುಕೊಳ್ಳಬೇಕು.

ಸಾರ್ವಜನಿಕರ ಅನುಕೂಲಕ್ಕಾಗಿ ಸಹಾಯವಾಣಿಗಳನ್ನು ತೆರೆಯಲಾಗಿದ್ದು ಸಾರ್ವಜನಿಕರು ತುರ್ತು ಸಂದರ್ಭದಲ್ಲಿ ಜಿಲ್ಲಾಧಿಕಾ-ರಿಗಳ ಕಾರ್ಯಾಲಯದ 08372-239177 ಅಥವಾ 1077 ನಂಬರಿಗೆ ಸಂಪರ್ಕಿಸಬಹುದಾಗಿದೆ.

ಕಾಲಕಾಲಕ್ಕೆ ರಾಜ್ಯ/ ಜಿಲ್ಲಾಡಳಿತ ತಾಲೂಕಾಡಳಿತದಿಂದ ನೀಡುವ ಹವಾಮಾನದ ಮುನ್ನೆಚ್ಚರಿಕೆಯನ್ನು ಸಾರ್ವಾಜನಿಕರು ಪಾಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಎನ್.ಶ್ರೀಧರ್ ಅವರು ಸಾರ್ವಜನಿಕರಿಗೆ ಕೋ-ರಿದ್ದಾರೆ.

### ಏಕ್ ಪ್ರಯಾಸ್ ವಿಶೇಷ ಮಕ್ಕಳ ಕಲಿಕಾ ಕೇಂದ್ರದಲ್ಲಿ ವಿಶ್ವಪರಿಸರ ದಿನಾಚರಣೆ

## ವಿಶೇಷ ಮಕ್ಕಳನ್ನು ಸ್ವಾವಲಂಬಿಯಾಗಿಸಿ: ಡಾ.ಬಿಜ್ಜಳ

ಗದಗ: ವಿಶೇಷ ಲಾಲನೆ, ಪೋಷಣೆ ಅಗತ್ಯವುಳ್ಳ ಮಕ್ಕಳಿಗೆ ಕಲಿಕಾ ಕೇಂದ್ರದ ಜತೆಗೆ ಪಾಲಕರಾದವರೂ ಕೂಡ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಶ್ರಮವಹಿಸಬೇಕು. ಇದಕ್ಕಾಗಿ ಸಮಯ ಮೀಸಲಿಟ್ಟು, ಅಗತ್ಯ ಚಿಕಿತ್ಸೆ, ವಿವಿಧ ವ್ಯಾಯಾಮಗಳ ಮೂಲಕ ಅವರನ್ನು ಸ್ವಾವಲಂಬಿಯಾಗಿ ಬದುಕುವಂತೆ ಪ್ರೇರೇಪಿಸಬೇಕು ಎಂದು ಜಿಮ್ಸ್‌ನ ಮನೋವೈದ್ಯಾಧಿಕಾರಿ ಡಾ.ಸೋಮಶೇಖರ ಬಿಜ್ಜಳ ಹೇಳಿದರು.



ಅವರು ಇಲ್ಲಿನ ಮುಳಗುಂದ ನಾಕಾ ಸಮೀಪದ ಬಿ ಡಿ ತಟ್ಟಿ (ಅಣ್ಣಾವರು) ಮೆಮೋರಿಯಲ್ ಚಾರಿಟೇಬಲ್ ಟ್ರಸ್ಟ್ ಆಶ್ರಯದಲ್ಲಿ ನಡೆಯುತ್ತಿರುವ 'ಏಕ್ ಪ್ರಯಾಸ್ ವಿಶೇಷ ಮಕ್ಕಳ ಕಲಿಕಾ ಕೇಂದ್ರ'ದಲ್ಲಿ ಗುರುವಾರ ಆಯೋಜಿಸಿದ್ದ 'ವಿಶ್ವ ಪರಿಸರ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ, ಅವರನ್ನು ವಿವಿಧ ಚಟುವಟಿ-ಕೆಯಲ್ಲಿ ಪಾಲ್ಗೊಳ್ಳುವಂತೆ ಮನೆಯ ಪ್ರತಿಯೊಬ್ಬ ಸದಸ್ಯರೂ ಸಹಕಾರ ನೀಡಬೇಕು. ಇದು ನಿತ್ಯ ನಿರಂತರವಾಗಿ ನಡೆದಾಗ ಮಾತ್ರ ಮುಂದೊಂದು ದಿನ ಆ ಮಗು ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದರು.

ಲಯನ್ಸ್ ಕ್ಲಬ್‌ನ ಗವರ್ನರ್ ಶ್ರೀಮತಿ ಸುಗ್ಗಲಾ ಯಳಮಲಿ ಅವರು ಮಾತನಾಡಿ, ಇಂತಹ ವಿಶೇಷ ಅಗತ್ಯಯತೆಯುಳ್ಳ ಮಕ್ಕಳ ಆರೋಗ್ಯ ತಪಾಸಣೆಗಾಗಿ ಜಿಮ್ಸ್ ಆಸ್ಪತ್ರೆಯಲ್ಲಿ ಒಂದು ಪ್ರತ್ಯೇಕ ಸಮಯ, ದಿನ ನಿಗದಿಪಡಿಸಬೇಕು. ಅದರಲ್ಲೂ ವಿಶೇಷವಾಗಿ ನಿಯಮಿತವಾಗಿ ವೈದ್ಯರ ತಂಡವೇ ಇಂತಹ ಕೇಂದ್ರ ಗಳಿಗೆ ಆಗಮಿಸಿ, ತಪಾಸಣೆ ನಡೆಸುವಂತಾಗಬೇಕು ಎಂದರು.

ಜಯಂತಿಲಾಲ್ ಕವಾಡ್ ಅವರು ಮಾತನಾಡಿ, ವಿಶೇಷ ಮಕ್ಕಳಿಗೆ ಅಗತ್ಯವಿರುವ ರಾಗಿ ಹಿಟ್ಟನ್ನು ತಾವು ಪ್ರತಿ ತಿಂಗಳೂ ಉಚಿತವಾಗಿ ನೀಡುವುದಾಗಿ ಹೇಳಿ, ಮಕ್ಕಳ ಉತ್ತಮ ಆರೋಗ್ಯಕ್ಕೆ ನೈಸರ್ಗಿಕ, ಸಾವಯವ ಆಹಾರದ ಮಹತ್ವ ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ಐಡಿಎಫ್‌ಸಿ ಬ್ಯಾಂಕ್‌ನ ಮುಂಬಯಿ ಶಾಖೆ ವ್ಯವಸ್ಥಾಪಕ ರವಿ ಸಾಕರೆ, ಗದಗ ಶಾಖೆಯ ಶಿವಾನಂದ ಹಂದ್ರಾಳ, ಗದಗ ಶಹರ ಠಾಣೆ ಪಿಎಸ್‌ಐ ಶ್ರೀಮತಿ ಆರ್. ಎಸ್. ಮುಂಡೇವಾಡಿ ಸೇರಿ ಹಲವರು ವೇದಿಕೆಯಲ್ಲಿದ್ದರು. ಕಾರ್ಯಕ್ರಮ ವ್ಯವಸ್ಥಾಪಕ ಸಾಗರ ಸಿ ಪೂಜಾರಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಲಿಕಾ ಕೇಂದ್ರದ ಮುಖ್ಯ ಶಿಕ್ಷಕ ಮಂಜಪ್ಪ ಇಟಗಿ ಕಾರ್ಯಕ್ರಮ ನಿರೂಪಿಸಿದರು, ಶ್ರೀಮತಿ ಗೀತಾ ಮೇಟಿ ವಂದಿಸಿದರು.

## ವಿವಿಧ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ ಪರಿಶೀಲನೆ

ಕಾರವಾರ, ಭಾರಿ ಮಳೆಯ ಕಾರಣ ಕಾರವಾರದ ವಿವಿಧ ಭಾಗಗಳಲ್ಲಿ ಪ್ರವಾಹ ಪರಿಸ್ಥಿತಿ ಮತ್ತು ನೀರು ನಿಲುಗಡೆಯ ಸಮಸ್ಯೆಗಳ ಕುರಿತಂತೆ ಬಿಣಗಾ ಟನಲ್, ಕೆಇಬಿ ಸಬ್ ಸ್ಟೇಶನ್ ಮತ್ತಿತರ ಸ್ಥಳಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಗುರುವಾರ ಭೇಟಿ ನೀಡಿ, ಪರಿಶೀಲಿಸಿದರು. ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಅಗತ್ಯ ನೆರವು ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿ ಕನಿಷ್ಕ, ತಹಸೀಲ್ದಾರ್ ನಿಶ್ಚಲ್ ನರೋಣ್ಹ, ನಗರಸಭೆ ಪೌರಾಯುಕ್ತ ಜಗದೀಶ್ ಹುಲಗೆಜ್ಜಿ , ತಾ.ಪಂ. ಕಾರ್ಯನಿರ್ವಹಣಾಧಿಕಾರಿ ವೀರನಗೌಡ ಮತ್ತಿತರರು ಉಪಸ್ಥಿತರಿದ್ದರು.

## ಪಡಿತರ ಚೀಟಿದಾರರ ಆಧಾರ ದೃಢೀಕರಣ (ಇ-ಕೆವೈಸಿ) ಕ್ಕೆ ಜೂನ್.30 ಅಂತಿಮ ದಿನಾಂಕ

ಬೆಳಗಾವಿ, ಬೆಳಗಾವಿ ಜಿಲ್ಲೆಯಲ್ಲಿ ಆಧಾರ ದೃಢೀಕರಣ (ಇ-ಕೆವೈಸಿ) ಆಗದೆ ಬಾಕಿ ಉಳಿದ ಪಡಿತರ ಚೀಟಿದಾರರು ಜೂನ್.30, 2025ರ ಒಳಗಾಗಿ ಆಧಾರ ದೃಢೀಕರಣ (ಇ-ಕೆವೈಸಿ) ಮಾಡಿಸಲು ಕಾಲಾವಕಾಶ ಕಲ್ಪಿಸಲಾಗಿದೆ.

ಜಿಲ್ಲೆಯಲ್ಲಿ ಬಾಕಿ ಉಳಿದ 47,101 ಪಡಿತರ ಚೀಟಿದಾರರ ಕುಟುಂಬದ ಎಲ್ಲ ಸದಸ್ಯರ ಆಧಾರ ದೃಢೀಕರಣ (ಇ-ಕೆವೈಸಿ) ಬೆರಳಚ್ಚು ದೃಢೀಕರಣ ನೀಡುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ ಪಡಿತರ ಚೀಟಿಯಲ್ಲಿನ ಸದಸ್ಯರ ಇ-ಕೆವೈಸಿ ಬೆರಳಚ್ಚು ದೃಢೀಕರಣ ಆಗಿದೆಯೇ ಅಥವಾ ಇಲ್ಲವೇ ಎಂಬುದರ ಕುರಿತು ನಿಮ್ಮ ಸಮೀಪದ ನ್ಯಾಯಬೆಲೆ ಅಂಗಡಿಗೆ ಹೋಗಿ ಪರಿಶೀಲಿಸಿಕೊಂಡು, ಇ-ಕೆವೈಸಿ ಆಗದೆ ಇದ್ದಲ್ಲಿ ನಿಮ್ಮ ಸಮೀಪದ ನ್ಯಾಯಬೆಲೆ ಅಂಗಡಿಯಲ್ಲಿಯೇ ತಮ್ಮ ಇ-ಕೆವೈಸಿ (ಆಧಾರ್ ಬೆರಳಚ್ಚು ದೃಢೀಕರಣ)ವನ್ನು ಸಂಪೂರ್ಣ ಉಚಿತವಾಗಿ ಮಾಡಿಕೊಳ್ಳಬಹುದಾಗಿದೆ.

ಸರಕಾರ/ಇಲಾಖೆಯಿಂದ ಇದು ಅಂತಿಮ ಅವಕಾಶವಿರುತ್ತದೆ ಆದ-'ಕಾರಣ ಪಡಿತರ ಚೀಟಿದಾರು ಕೊಟ್ಟ ಕಾಲಾವಾಕಾಶದಲ್ಲಿ ಇ-ಕೆವೈಸಿ ಮಾಡಿಕೊಳ್ಳಬೇಕು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ಬೆಳಗಾವಿ, ಕೇಂದ್ರ ಸರ್ಕಾರದ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮ ಶೀಲತೆ ಇಲಾಖೆ ವತಿಯಿಂದ ವಿಶೇಷವಾಗಿ ವಿಕಲಚೇತನ ವಿದ್ಯಾರ್ಥಿಗಳಿಗೆ, ಪ್ರಸಕ್ತ 2025-26ನೇ ಸಾಲಿಗೆ ಸರಕಾರಿ ಪಾಲಿಟೆಕ್ನಿಕ್, ಬೆಳಗಾವಿಯಲ್ಲಿ ವಿವಿಧ ಕೋರ್ಸುಗಳಿಗೆ ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಡಿಪ್ಲೋಮಾ ಕೋರ್ಸಗಳಾದ ಸಿವಿಲ್ ಇಂಜನೀಯ-ರಿಂಗ್ ಕೋರ್ಸಗೆ 4 ಸೀಟುಗಳು, ಎಲೇಕ್ಟ್ರಿಕಲ್ & ಎಲೇಕ್ಟ್ರಾನಿಕ್ಸ್ ಇಂಜನೀಯರಿಂಗ್ 4 ಸೀಟುಗಳು, ಮೆಕ್ಯಾನಿಕಲ್ ಇಂಜನೀಯರಿಂಗ್ 3 ಸೀಟುಗಳು, ಅಟೋ ಮೋಬೈಲ್ ಇಂಜನೀಯರಿಂಗ್ 2 ಸೀಟುಗಳು, ಎಲೇಕ್ಟ್ರಾನಿಕ್ಸ್ & ಕಮ್ಯುನಿಕೇಶನ ಇಂಜನೀಯರಿಂಗ್ 5 ಸೀಟುಗಳು, ಕಮರ್ಶಿಯಲ್ ಪ್ರಾಕ್ಟಿಸ್ (ಇಂಗ್ಲೀಷ) 3 ಸೀಟುಗಳು, ಕಮರ್ಶಿಯಲ್ ಪ್ರಾಕ್ಟಿಸ್ (ಕನ್ನಡ) 4 ಸೀಟುಗಳಿಗೆ ಪ್ರವೇಶಾತಿ ದೊರಕಲಿವೆ.

ಸದರಿ ಕೋರ್ಸುಗಳಿಗೆ ಯಾವುದೇ ಶುಲ್ಕ ಇರುವುದಿಲ್ಲ. ಪ್ರವೇಶ ಹೊಂದಿದ ವಿದ್ಯಾರ್ಥಿಗಳಿಗೆ ಸ್ಕಾಲರಶಿಪ್, ಹಾಗೂ ಲಭ್ಯವಿರುವ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಜೂನ್.21ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಪಾಲಿಟೆಕ್ನಿಕ್, ಬೆಳಗಾವಿ ಇಲ್ಲಿ ಭೇಟಿ ನಿಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಬಿಳಿಎತ್ತು ಬಂದರೆ ಬಿಳಿಜೋಳ, ಕೆಂಪತ್ತು ಬಂದರೆ ಗೋಧಿ ಬೆಳೆ ಸಮೃದ್ಧಿ

# ಹುನ್ನೂರಿನಲ್ಲಿ ಸಂಭ್ರಮದ ವಿಶಿಷ್ಠ ಕಾರಹುಣ್ಣಿಮೆ ಆಚರಣೆ



ಜಮಖಂಡಿ: ಕಾರಹುಣ್ಣಿಮೆ ಕಪಾಟ ಮಳೆ ಹುಯ್ಯಲೋ, ಹುಯ್ದಿಲೋ ಎಂಬ ಜಾನಪದ ಗೀತೆ ಮಳೆರಾಯನನ್ನು ಸಂಭ್ರಮದಿಂದ ಸ್ವಾಗತಿಸುವದು ವಾಡಿಕೆ. ಕಾರಹುಣ್ಣಿಮೆ ದಿನ ರೈತರು ತಮ್ಮ ಭವಿಷ್ಯ ಅರಿತುಕೊಳ್ಳುವುದು ಕುತೂಹಲ ಇರುತ್ತದೆ. ಹುನ್ನೂರಿನಲ್ಲಿ ನಡೆದ ಕಾರಹುಣ್ಣಿಮೆ ಕರಿ ಹ–ರಿಯೋದು ಸಂಭ್ರಮಕ್ಕೆ ಸಾಕ್ಷಿಯಾಗಿದೆ.

ರೈತರು ತಮ್ಮ ಮನೆಗಳ ಎತ್ತು, ಎಮ್ಮೆ, ಆಕಳು, ದನಕರುಗಳನ್ನು ಬೆಳಗಿನಿಂದ ಸ್ನಾನ ಮಾಡಿಸಿ ಸಂಭ್ರಮ ಮೂಲಕ ಮೈತೊಳೆದ ಜಾನುವಾರುಗಳಿಗೆ ಮೈತುಂಬ ಬಣ್ಣಬಣ್ಣದ ಚಿತ್ತಾರದ ಮೂಲಕ ಶೃಂಗಾರಗೊಳಿಸುತ್ತಾರೆ.

ಗ್ರಾಮದ ಹಿರಿಯರು ನಿರ್ದೇಶನದಂತೆ ಸಾಂಪ್ರದಾಯಕ ಪ್ರಕಾರ ಸಂಸ್ಥಾನಿಕರ ಒಂದು ಎತ್ತು, ನಾಯಕ ಮನೆತನದ ಎರಡು ಎತ್ತುಗಳು, ದೇಸಾಯಿ ಮನೆತನದ ಒಂದು ಎತ್ತು ಹಾಗೂ ಮಗದುಮ್ ಮನೆತನದ ಒಂದು ಎತ್ತು ಸಹಿತ ಐದು ಎತ್ತುಗಳಿಗೆ ವೀಳ್ಯದೆಲೆ ಕೊಟ್ಟು ಆಹ್ವಾನಿದಲಾಗಿರುತ್ತದೆ. ಎತ್ತುಗಳು ಬಿಳಿ ಮತ್ತು ಕೆಂಪು ಬಣ್ಣದಾಗಿರಬೇಕೆಂಬ ನಿಯಮ ಇದೆ. ಶೃಂಗರಿಸಿದ ಎತ್ತುಗಳ ಕೊರಳಿಗೆ ಬೇವಿನ ಸರಮಾಲೆಗಳನ್ನು ಪೂರೈಸುವುದು ತಳವಾರ ಮನೆತನದ ಕಾಯಕವಾಗಿದೆ. ಇದರೊಂದಿಗೆ ಊರ ಅಗಸಿ ಬಾಗಿಲಿಗೆ ಹೊಂದಿಕೊಂಡಿರುವ ಬೋರ್ಗಲ್ ಮೇಲೆ ಅಡ್ಡಲಾಗಿ ಹಿಡಿಯಬೇಕಾಗಿರುವ ಉದ್ದನೆಯ ಬೇವಿನ ಸರದ ಪೂರೈಕೆ ಗ್ರಾಮದ ತಳವಾರನದೇ ಆಗಿರುತ್ತದೆ.

ಸಾಯಂಕಾಲ ಗ್ರಾಮಸ್ಥರು, ಸಮಾಜದ ಗಣ್ಯರು ವಾದ್ಯ ಮೇಳಗಳೊಂದಿಗೆ ಶೃಂಗರಿಸಿದ ಎತ್ತುಗಳನ್ನು ಸ್ವಾಗತಿಸಿ ಊರಾಚೆ ಸವಳಭಾವಿ ಹತ್ತಿರ ಸಾಲಾಗಿ ನಿಲ್ಲಿಸುವರು. ಸೂಚನೆಯನುಸಾರ ದೊಡ್ಡ ಶಬ್ದದೊಂದಿಗೆ ಓಡಿಸುವ ಎತ್ತುಗಳು ಸ್ಪರ್ಧೆ ಅನುಸಾರ ಓಡುತ್ತ ಬೋರ್ಗಲ್ ಮೇಲೆ ಅಡ್ಡಲಾಗಿ ಹಿಡಿದ ಬೇವಿನ ಸರವನ್ನು ಕಿತ್ತುಹಾಕವೇಕು. ಸ್ಪರ್ಧೆಯಲ್ಲಿ ಬಿಳಿಬಣ್ಣದ ಎತ್ತು ಮುಂದೆ ಬಂದಿದ್ದರೆ ಬಿಳಿಜೋಳ, ಕೆಂಪು ಬಣ್ಣದ ಎತ್ತು ಮುಂದೆ ಬಂದರೆ ಗೋಧಿ ಬೆಳೆ ಸಮೃದ್ಧಿಯಾಗಿ ಬೆಳೆಯುವ ನಂಬಿಕೆಯನ್ನು ರೈತರು ಹೊಂದಿದ್ದಾರೆ.

ಎತ್ತಿನ ಸರದಿಂದ ಕಿತ್ತು ಬರುವ ಬೇವಿನತೊಪ್ಪಲನ್ನು ಬಿತ್ತನೆ ಕಾಳುಗಳ ಜತೆಗೆ ಬೇರಿಸಿ ಬಿತ್ತನೆ ಮಾಡುವ ಸಂಪ್ರದಾಯ ರೂಢಿಯಲ್ಲಿದೆ. ಸ್ಪರ್ಧೆಯಲ್ಲಿ ಓಡಿದ ಎತ್ತುಗಳು ಎಲ್ಲರ ಕೈತಪ್ಪಿ ಊರಿಂದಾಚೆ ಅಥವಾ ಬೇರೆ ಊರಿಗೆ ಹೋದಲ್ಲಿ ಆ ಊರಿನ ಜನರು ಆ ಎತ್ತಿನ ಬಾಲವನ್ನು ತುಂಡರಿಸಿ ಕಾರ ಹುಣ್ಣಿಮೆಯ ಕರಿ ಹರಿಯುವ ಸಾಂಪ್ರದಾಯ ತಮ್ಮದಾಗಿಸಿಕೊಳ್ಳುವರಲ್ಲದೆ, ಕರಿ ಹರಿದ ಊರಿನಲ್ಲಿ ಸಂಭ್ರಮ ನಿಲ್ಲಿಸಬೇಕಾಗುತ್ತದೆ. ಮರುದಿನ ಕರಿದ ಕೊಡುಬಳೆಗಳನ್ನು ಮಣ್ಣಿನ ಎತ್ತುಗಳಿಗೆ ಏರಿಸಿ, ನೈವೇದ್ಯ ಪೂಜೆಯೊಂದಿಗೆ ಕಾರಹುಣ್ಣಿಮೆ ಕಾರ್ಯಕ್ರಮ ಮುಕ್ತಾಯಗೊಳ್ಳಲಿದೆ.

## ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮ

# ಮಕ್ಕಳಿಗೆ ಶಿಕ್ಷಣ ಒದಗಿಸುವುದು ಸಾಂವಿಧಾನಿಕ ಹಕ್ಕು

ಗದಗ : ಬಾಲ ಕಾರ್ಮಿಕತೆಯಿಂದ ದುಷ್ಪರಿಣಾಮದ ಕುರಿತು ಮಕ್ಕಳಲ್ಲಿ ಹಾಗೂ ಪೋಷಕರಲ್ಲಿ ಅರಿವು ಮೂಡಿಸಿ ಬಾಲ ಕಾರ್ಮಿಕತೆಯನ್ನು ನಿರ್ಮೂಲನೆ ಮಾಡಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋ–ರಿಯಂ ಹಾಲ್‌ದಲ್ಲಿ ಗುರುವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ (ರಿ) ಗದಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಗದಗ ಹಾಗೂ ವಿವಿಧ ಇಲಾಖೆಗಳ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕುಟುಂಬದಲ್ಲಿನ ಬಡತನ, ಅನಕ್ಷರತೆ, ಶಿಕ್ಷಣದ ಮಹತ್ವದ ಕುರಿತು ಅರಿವಿಲ್ಲದಿರುವುದು, ವಲಸೆ ಹೋಗುವುದು, ತೀವ್ರತರಹದ ಕಾಯಿಲೆಯಿಂದ ಬಳಲುತ್ತಿರುವ ಪೋಷಕರು, ಅಸ್ಪೃಶ್ಯತೆ ಹೀಗೆ ಅನೇಕ ಕಾರಣಗಳಿಂದ ಮಕ್ಕಳು ಶಾಲೆಗೆ ಹೋಗದೇ ಕೆಲಸಕ್ಕೆ ಹೋಗಿ ಬಾಲಕಾರ್ಮಿಕರಾಗುತ್ತಾರೆ. ಮಕ್ಕಳ ರಕ್ಷಣೆ ಒದಗಿಸುವುದು ಹಾಗೂ ಕಡ್ಡಾಯವಾಗಿ ಶಿಕ್ಷಣ ಒದಗಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಮಕ್ಕಳಿಗೆ ಶಿಕ್ಷಣ ಒದಗಿಸುವುದು ಸಾಂವಿಧಾನಿಕ ಹಕ್ಕಾಗಿದೆ. ಮಕ್ಕಳಿಗೆ ಅವರ ಹಕ್ಕುಗಳ ಕುರಿತು ತಿಳುವಳಿಕೆ ನೀಡಬೇಕು. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ಧತಿಯ ಮಕ್ಕಳನ್ನು ದೈಹಿಕವಾಗಿ, ಮಾನಸಿಕವಾಗಿ ಹಾಗೂ ಆರ್ಥಿಕವಾಗಿ ಶೋಷಣೆಗೆ ಒಳಪಡಿಸಿ ಅವರ ಶಿಕ್ಷಣ ಹಾಗೂ ಸರ್ವಾಂಗೀಣ ಪ್ರಗತಿಯ ಅವಕಾಶಗಳನ್ನು ತಡೆಗಟ್ಟುತ್ತದೆ. ಶಿಕ್ಷಣದಿಂದ ವಂಚಿತರಾದಂತಹ ಹಾಗೂ ದುಡಿಮೆಯಲ್ಲಿ ತೊಡಗಿರುವ ಇಂತಹ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಸರ್ಕಾರ, ಸರ್ಕಾರೇತರ ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಂಘಟಿತರಾಗಿ ಪ್ರಯತ್ನಿಸಬೇಕಾಗಿದೆ ಎಂದರು.



ಬಾಲ ಕಾರ್ಮಿಕತೆಯನ್ನು ಅಧ್ಯಯನ ಮಾಡಿ ಅದನ್ನು ತಡೆಗಟ್ಟಲು 1979 ರಲ್ಲಿ ಆಗಿನ ಕೇಂದ್ರ ಸರ್ಕಾರ ಗುರುಪಾದಸ್ವಾಮಿ ಕಮಿಟಿಯನ್ನು ರಚಿಸಿತು. ನಂತರ 1986 ರಲ್ಲಿ ಬಾಲ ಕಾರ್ಮಿಕ ನಿರ್ಮೂಲನಾ ಕಾಯ್ದೆಯು ಜಾರಿಗೆ ಬಂದಿತು. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಕಾಯ್ದೆ 1986 ರನ್ವಯ ಎಲ್ಲ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಹಾಗೂ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಹಾಗೂ ಸಂಜ್ಞೆಯ ಅಪರಾಧವಾಗಿದೆ. ಒಂದು ವೇಳೆ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ಕೆಲಸಕ್ಕೆ ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ 20,000 ರಿಂದ 50,000 ಗಳವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿದೆ. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿಯನ್ನು ಪ್ರೋತ್ಸಾಹಿಸುವ ಪೋಷಕರಿಗೂ ಸಹ ಲಘು ಶಿಕ್ಷಾ ಪ್ರಾವಧಾನವಿದ್ದು, ಪುನರಾವರ್ತಿತ ಅಪರಾದಕ್ಕೆ ರೂ.10,000 ಗಳ ದಂಡ ವಿಧಿಸಬಹುದಾಗಿದೆ ಎಂದರು.

ತಂದೆ ತಾಯಿಗಳು ತಮ್ಮ ಮಕ್ಕಳನ್ನು ತಪ್ಪದೇ ಶಾಲೆಗೆ ಕಳುಹಿಸಬೇಕು. ಮಕ್ಕಳಿಗೆ ನೈತಿಕ ಶಿಕ್ಷಣ ನೀಡುವುದು ಪಾಲಕರ ಜವಾಬ್ದಾ–ರಿಯಾಗಿದೆ. ಬಾಲ ಕಾರ್ಮಿಕತೆ ಕಂಡು ಬಂದಲ್ಲಿ ಅಥವಾ ಮಕ್ಕಳಿಗೆ ಏನಾದರೂ ತೊಂದರೆಯಾದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಸಿ.ಎಸ್.ಶಿವನಗೌಡ್ರ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಬಾಲ ಕಾರ್ಮಿಕ ವಿರೋಧಿ ದಿನಾಚರಣೆ ನಿಮಿತ್ತ ಪ್ರಮಾಣವಚನ ಬೋಧಿಸಿ ನಂತರ ಮಾತನಾಡಿ ಬಾಲ ಕಾರ್ಮಿಕತೆಗೆ ಅಸಹಾಯಕತೆ ಮುಖ್ಯ ಕಾರಣವಾಗಿದೆ. ಅರಿವೇ ಗುರು ಎಂಬ ನಾಣ್ನುಡಿಯಂತೆ ಮಕ್ಕಳಲ್ಲಿ ಅರಿವು ಮೂಡಿಸಿ ಅನ್ಯಾಯದ ವಿರುದ್ಧ ಹೋರಾಡುವ ಶಕ್ತಿ ಬೆಳೆಸಬೇಕು. ಸರ್ಕಾರವು ಮಕ್ಕಳ ಸುರಕ್ಷತಾ ದೃಷ್ಟಿಯಿಂದ ಹಾಗೂ ಶ್ರೇಯೋಭಿವೃದ್ಧಿಗಾಗಿ ಹಲವಾರು ಸೌಲಭ್ಯಗಳನ್ನು ಜಾರಿಗೆ ತಂದಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಇಂದಿನ ಅಗತ್ಯವಾಗಿದೆ. ಮಕ್ಕಳು ಶಿಕ್ಷಣದಿಂದ ವಂಚಿತರಾದರೆ ಎಲ್ಲ ಸೌಲಭ್ಯಗಳಿಂದ ಅವರು ವಂಚಿತರಾಗದಂತೆಯೇ ಆಗುತ್ತದೆ. ಬಾಲ ಕಾರ್ಮಿಕತೆ ಕುರಿತು ನಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿರುವವರಿಗೆ ಅರಿವು ಮೂಡಿಸಬೇಕು. ಬಾಲ ಕಾರ್ಮಿಕರು ಕಂಡು ಬಂದಲ್ಲಿ ಸಹಾಯವಾಣಿ ಸಂಖ್ಯೆಗೆ 1098 ಗೆ ಕರೆ ಮಾಡಬೇಕು ಎಂದರು.

ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎಂ.ಎ.ನಾಯಕ ಅವರು ಮಾತನಾಡಿ ಪ್ರತಿ ಮಗುವಿಗೂ ಕಡ್ಡಾಯ ಶಿಕ್ಷಣ ಒದಗಿಸಬೇಕು. ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಶ್ರಮಿಸಬೇಕು. ಮಕ್ಕಳಿಗೆ ಉದ್ಯೋಗ ಆಧಾರಿತ ಶಿಕ್ಷಣ ರೂಢಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮದ ನಿಮಿತ್ತ ಪ್ರೌಢಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಳ್ಳಲಾಗಿದ್ದ ಪ್ರಬಂಧ, ಭಾಷಣ ಹಾಗೂ ಚಿತ್ರಕಲೆ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತ–ರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಡಿಎಸ್‌ಪಿ ಮುರ್ತುಜಾ ಖಾದ್ರಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಶ್ರೀಮತಿ ಜಯದೇವಿ ಕವಲೂರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಶ್ರೀಮತಿ ರಫೀಕಾ ಹಳ್ಳೂರ, ಕಾರ್ಮಿಕ ನಿರೀಕ್ಷಕರು, ಸೇರಿದಂತೆ ಶಾಸ್ತ್ರೀಜಿ , ಸಿಡಿಓ, ಬಸವೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು, ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಹಾಜರಿದ್ದರು.

ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ ಪ್ರತಿ ವರ್ಷ ಜೂನ್ 12 ರಂದು ಬಾಲ ಕಾರ್ಮಿಕ ಪದ್ಧತಿ ವಿರೋದಿ ದಿನಾಚರಣೆ ಆಚ–ರಿಸಲಾಗುತ್ತಿದ್ದು ಬಾಲಕಾರ್ಮಿಕತೆಯಿಂದ ಉಂಟಾಗುವ ದುಷ್ಪರಿಣಾಮದ ಕುರಿತು ಅರಿವು ಮೂಡಿಸುವುದೇ ಇದರ ಮುಖ್ಯ ಉದ್ದೇಶವಾಗಿದೆ ಎಂದರು.

ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂದೇಶ ಪಾಟೀಲ ಸರ್ವರನ್ನು ಸ್ವಾಗತಿಸಿದರು. ಎಂ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿದರು.

## ಜಿಲ್ಲೆಯಲ್ಲಿ ಮುಂದುವರೆದ ವ್ಯಾಪಕ ಮಳೆ; ಮಳೆ ರಭಸಕ್ಕೆ ಕುಂದಗೋಳದಲ್ಲಿ ಓರ್ವ ವ್ಯಕ್ತಿ ಸಾವು, ಹುಬ್ಬಳ್ಳಿಯಲ್ಲಿ ಓರ್ವ ವ್ಯಕ್ತಿ ಕಣ್ಮರೆ; ಶೋಧ ಕಾರ್ಯ ಮುಂದುವರಿಕೆ

# ಜಿಲ್ಲಾಡಳಿತದಿಂದ ಮುಂದುವರೆದ ಪರಿಹಾರ ಕಾರ್ಯಾಚರಣೆ: ಜಿಲ್ಲಾಧಿಕಾರಿ ದಿವ್ಯ ಪ್ರಭು



**ಧಾರವಾಡ** : ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಮಾರ್ಗದರ್ಶನದಲ್ಲಿ ಜಿಲ್ಲಾಡಳಿತವು ವ್ಯಾಪಕ ಮತ್ತು ನಿರಂತರ ಮಳೆಯಿಂದ ಹಾನಿಯಾಗುವ ಕುರಿತು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದ–ರಿಂದ ಜಿಲ್ಲೆಯ ಹಲವು ಭಾಗಗಳಲ್ಲಿ ಅತಿಯಾದ ಮಳೆಯಿಂದ ಜನ ಜಾನುವಾರುಗಳನ್ನು ರಕ್ಷಿಸಿ, ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಈ ಕುರಿತು ಪ್ರಕಟಣೆ ನೀಡಿ, ಮಳೆ ಮುನ್ಸೂಚನೆ ಹಿನ್ನಲೆಯಲ್ಲಿ ಪ್ರಾಧಿಕಾರದ ಸಭೆ ಜರುಗಿಸಿ, ಎಲ್ಲ ಇಲಾಖೆಯ ಅಧಿಕಾರಿಗಳಿಗೆ ಸಂಭವನೀಯ ಹಾನಿ ಪ್ರದೇಶಗಳ ಕುರಿತು ಸುರಕ್ಷತಾ ಕ್ರಮಗಳನ್ನು ಮತ್ತು ತಕ್ಷಣಕ್ಕೆ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಲಾಗಿತ್ತು.

ಅದರಂತೆ ಕಳೆದ 24 ಗಂಟೆ ಅಂ–ದರೆ ಜೂನ್ 12 ರ 8:30 ಗಂಟೆಯವರೆಗೆ ವ್ಯಾಪಕ ಮಳೆಯಿಂದಾಗಿ ಜಿಲ್ಲೆಯ ಅನೇಕ ಗ್ರಾಮಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಆಯಾ ತಾಲೂಕಿನ ತಹಶೀಲ್ದಾರ ನೇತೃತ್ವದಲ್ಲಿ ತಕ್ಷಣ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಂಡು ಕ್ರಮವಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತದ ಮುಂಜಾಗ್ರತೆಯಿಂದ ಯಶಸ್ವಿಯಾದ ರಕ್ಷಣಾ ಕಾರ್ಯ: ಧಾರವಾಡ ಜಿಲ್ಲೆಯಲ್ಲಿ ಕಳೆದ 24 ಗಂಟೆಗಳಲ್ಲಿ (ಜೂ.12 ರ ಬೆಳಿಗ್ಗೆ 8:30 ರ ವರೆಗೆ) ಭಾರಿ ಪ್ರಮಾಣದಲ್ಲಿ ಮಳೆಯಾಗಿದ್ದು, ಜಿಲ್ಲಾಡಳಿತದ ಮುಂಜಾಗೃತಾ ಕ್ರಮಗಳಿಂದಾಗಿ ಬಹುತೇಕ ಸ್ಥಳಗಳಲ್ಲಿ ಉಂಟಾಗಿದ್ದ ಅಪಾಯವನ್ನು ಸಮರ್ಥವಾಗಿ ನಿರ್ವಹಿಸಿ, ಸೂಕ್ತ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮತ್ತು ಇದರಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ಜನ, ಜನುವಾರು ಜೀವ ಹಾನಿಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಕುಂದಗೋಳದಲ್ಲಿ ಓರ್ವ ವ್ಯಕ್ತಿ ಸಾವು, ಹುಬ್ಬಳ್ಳಿಯಲ್ಲಿ ಓರ್ವ ವ್ಯಕ್ತಿ ಕಣ್ಮರೆ: ಕುಂದಗೋಳ ತಾಲ್ಲೂಕು ಹಂಚಿನಾಳ ಗ್ರಾಮದ ಹತ್ತಿರ ಹಳ್ಳದಲ್ಲಿ ಟ್ರಾಕ್ಟರ್ ಪಲ್ಟಿಯಾಗಿ ಕುಂದಗೋಳ ನಿವಾಸಿ ಶಿವಯ್ಯ ಬಸಯ್ಯ ವಟ್ನಾಲಮಠ (31) ಅವರು ಮೃತಪಟ್ಟಿದ್ದಾರೆ ಎಂದು ಪ್ರಾಥಮಿಕ ವರದಿಯಾಗಿದೆ. ಇವರೊಂದಿಗೆ ಇದ್ದ ಕುಂದಗೋಳ ನಿವಾಸಿ ವಾಸು ಶಿವಪ್ಪ ಬ್ಯಾಹಟ್ಟಿ (25) ಹಾಗೂ ಕಲಘಟಗಿ ತಾಲೂಕಿನ ಮುಕ್ಕಲ್ ಗ್ರಾಮದ ಮಲ್ಲಿಕಾರ್ಜುನ ಶಿವಪ್ಪ ಅಂಚಟಗೇರಿ (26) ಅವರು ಗಾಯಗೊಂಡಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ ಮತ್ತು ಕುಂದಗೋಳ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮತ್ತು ನಿನ್ನೆ ರಾತ್ರಿ ಸುರಿದ ಭಾರಿ ಮಳೆಯಿಂದಾಗಿ ಹುಬ್ಬಳ್ಳಿನಗರ ತಾಲೂಕು ಅಯೋಧ್ಯ ಗ್ರಾಮದ ನೇಕಾರನಗರ ಬ್ರಿಜ್ ಹತ್ತಿರ ಬೈಕಿನಲ್ಲಿ ರಸ್ತೆ ದಾಟುವಾಗ ಹುಸೇನಸಾಬ ಸಯ್ಯದಸಾಬ ಕಳಸ (58) ಅವರು ನೀರಿನ ರಭಸಕ್ಕೆ ಸಿಲುಕಿ ಕಣ್ಮರೆಯಾಗಿದ್ದಾರೆ ಎಂದು ಪ್ರಾಥಮಿಕ ವರದಿಯಾಗಿದೆ. ಇವರೊಂದಿಗೆ ಬೈಕ್‌ನಲ್ಲಿದ್ದ ವ್ಯಕ್ತಿ ಅಪಾಯದಿಂದ ಪಾರಾಗಿದ್ದಾರೆ. ತಹಶೀಲ್ದಾರ ಕಲ್ಲನಗೌಡ ಆರ್.ಪಾಟೀಲ ಅವರ ನೇತೃತ್ವದಲ್ಲಿ ತಾಲೂಕಾಡಳಿತವು ಕಣ್ಮರೆಯಾದ ವ್ಯಕ್ತಿಯ ಪತ್ತೆಗಾಗಿ ತೀವ್ರ ಕಾರ್ಯಾಚರಣೆ ಕೈಗೊಂಡಿದ್ದು, ತಪಾಸಣೆ ಕಾರ್ಯ ಮುಂದುವರೆದಿದೆ. ಹೆಚ್ಚಿನ ಕಾರ್ಯಾಚರಣೆ ಕೈಗೊಳ್ಳಲು ಬೆಳಗಾವಿಯಿಂದ ಇಂದು ಸಂಜೆ ಎಸ್‌ಡಿಆರ್‌ಎಫ್ ತಂಡ ಆಗಮಿಸಲಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ನವಲಗುಂದ ತಾಲ್ಲೂಕು: ನವಲಗುಂದ ತಾಲ್ಲೂಕಿನಲ್ಲಿ ಬುಧವಾರ ಸುರಿದ ಮಳೆಗೆ ಯಮನೂರ ಗ್ರಾಮದ ಬೈಪಾಸ್ ಬಳಿ ಇರುವ ಕಾಶೀನಾಥ ಖೋಡೆ ಅವರ ಜಮೀನುದಲ್ಲಿ ನಿರ್ಮಿಸಿದ್ದ ಮನೆ ಸುತ್ತಲೂ ಬೆಣ್ಣಿಹಳ್ಳದ ನೀರು ಆವರಿಸಿ ಮನೆಯಲ್ಲಿ ನಾಲ್ಕು ಜನ ಕಾರ್ಮಿಕರು ಸಿಲುಕಿಕೊಂಡಿದ್ದರು.

ಪೊಲೀಸ್ ಹಾಗೂ ಅಗ್ನಿಶಾಮಕ ಪಡೆಗಳ ಸಹಾಯದಿಂದ ಜಲಾವೃತಗೊಂಡ ಮನೆಯಲ್ಲಿ ಸಿಲುಕಿದ್ದ ಬೆಳಗಾವಿಯ ಬಸವರಾಜ್ ಭಂಡಾರಿ, ವಿಜಯಲಕ್ಷ್ಮಿ ಭಂಡಾರಿ, ರಮ್ಯಾ ಭಂಡಾರಿ, ಸೌಮ್ಯ ಭಂಡಾರಿ ಹಾಗೂ ಅವರ ಸಾಕುನಾಯಿ, ಬೆಕ್ಕುನ್ನು ರಕ್ಷಿಸಲಾಯಿತ್ತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್, ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಮತ್ತು ತಹಶೀಲ್ದಾರ ಸುಧೀರ ಸಾವುಕಾರ ಸಮ್ಮುಖದಲ್ಲಿ ಅಗ್ನಿಶಾಮಕ ದಳದ ಸಿಬ್ಬಂದಿಗಳು ಹಾಗೂ ಈಜು ತಜ್ಞರೊಂದಿಗೆ ರಕ್ಷಣೆ ಮಾಡಿ ನೀರಿನಿಂದ ಹೊರ ತರಲಾಯಿತು.

ನಂತರ ಅವರ ಆರೋಗ್ಯ ತಪಾಸಣೆ ನಡೆಸಿ, ಆರೋಗ್ಯವಾಗಿದ್ದ ಮಾಹಿತಿ ಪಡೆದು ಅವರನ್ನು ಅವರ ಊರಿನತ್ತ ಕಳಿಸಲಾಯಿತು ಎಂದು ತಿಳಿಸಿದ್ದಾರೆ.

**ಹುಬ್ಬಳ್ಳಿ ತಾಲೂಕು ಜಾನುವಾರುಗಳ ರಕ್ಷಣೆ, 2 ಹಾನಿ**: ಹುಬ್ಬಳ್ಳಿ ತಾಲ್ಲೂಕು ಬ್ಯಾಹಟ್ಟಿ ಗ್ರಾಮದ ಹತ್ತಿರ ಇರುವ ನಿಗರಿಹಳ್ಳಕ್ಕೆ ಹಬ್ಬಳ್ಳಿ ನಗರ, ಉಣಕಲ್ ಮತ್ತು ನವಲೂರ ಕಡೆಯಿಂದ ಬಾರಿ ಪ್ರಮಾಣದ ಮಳೆ ನೀರು ಬಂದಿದ್ದರಿಂದ ಹಳ್ಳದಲ್ಲಿ ಹಾಕಲಾಗಿದ್ದ ಕುರಿ ಶೆಡ್‌ಗೆ ರಾತ್ರಿ 12 ಗಂಟೆಗೆ ಸುಮಾರಿಗೆ ಹಳ್ಳದ ನೀರು ಬಂದು ಶೆಡ್‌ನಲ್ಲಿರುವ ಅಂದಾಜು 100 ಕು–ರಿಗಳು 3 ಜನರು ಸಿಲುಕಿಕೊಂಡಿದ್ದರು.

ಹುಬ್ಬಳ್ಳಿ ತಹಶೀಲ್ದಾರ ಜೆ.ಬಿ.ಮಜ್ಜಗಿ ಹಾಗೂ ಡಿವಾಯ್‌ಎಸ್‌ಪಿ ವಿನೋಧ ಮುಕ್ತೆದಾರ ಅವರ ನೇತೃತ್ವದಲ್ಲಿ ಪೊಲೀಸ್ ಹಾಗೂ ಅಗ್ನಿಶಾಮಕ ತಂಡದವರು ಪರಿಹಾರ ಕ್ರಮಗಳನ್ನು ಕೈಗೊಂಡು ಶೆಡ್‌ನಲ್ಲಿ ಸಿಲುಕಿದ್ದ ಕುರಿಗಳ ಮಾಲೀಕರಾದ ಬ್ಯಾಹಟ್ಟಿ ಗ್ರಾಮದ ಹಜರೇಸಾಬ ಹುಸೇನಸಾಬ ನೂಲ್ವಿ ಮತ್ತು ರಾಯಪ್ಪ ರಾಮಪ್ಪ ಕಬ್ಬೇರ ಹಾಗೂ ಆಯಟ್ಟಿ ಗ್ರಾಮದ ಹನಮಂತಪ್ಪ ಕಲ್ಲಪ್ಪ ಬೇವೂರ ಅವರನ್ನು ರಕ್ಷಿಸಲಾಯಿತ್ತು. ಮತ್ತು ಅಂದಾಜು 100 ಕುರಿಗಳನ್ನು ಅಗ್ನಿ ಶಾಮಕ ಸಿಬ್ಬಂದಿಗಳಿಂದ ರಕ್ಷಣೆ ಮಾಡಲಾಗಿದೆ. ಇವುಗಳ ಪೈಕಿ ಎರಡು ಕು–ರಿಗಳು ಹಳ್ಳದಲ್ಲಿ ಮೃತಪಟ್ಟಿರುವ ಬಗ್ಗೆ ಪ್ರಾಥಮಿಕ ವರದಿಯಾಗಿದೆ.

ಹುಬ್ಬಳ್ಳಿ ತಾಲ್ಲೂಕು ಇಂಗಳಳ್ಳಿ ಗ್ರಾಮಕ್ಕೆ ಹೊಂದಿಕೊಂಡಿರುವ ಬೆಣ್ಣಿ ಹಳ್ಳಕ್ಕೆ ನೀರು ಬಂದು ನಡುಗಡ್ಡೆಯಲ್ಲಿ ಸಿಲುಕಿದ್ದ ಕುರಿಗಾರರಾದ ಇಂಗಳಳ್ಳಿ ಗ್ರಾಮ ನಿವಾಸಿಗಳಾದ ಹುಸೇನಸಾಬ ದುದುಸಾಬ ತಹಶೀಲ್ದಾರ, ಚನಬಸಪ್ಪ ಮಲ್ಲಪ್ಪ ಕುರಿ ಮತ್ತು ಮೌಲಾಸಾಬ ಪಕ್ರುಸಾಬ ನದಾಫ ಅವರನ್ನು ಪೊಲೀಸ್ ಹಾಗೂ ಅಗ್ನಿಶಾಮಕ ತಂಡಗಳು ರಕ್ಷಣೆ ಮಾಡಿದವು. ಈ ಮೂವರಿಗೆ ಸೇರಿದ್ದ ಅಂ–ದಾಜು 470 ಕುರಿ ಮತ್ತು ಆಡುಗಳನ್ನು ಅಗ್ನಿಶಾಮಕ ಇಲಾಖೆಯವರ ಸಹಾಯದಿಂದ ಬೋಟ್ ಮೂಲಕ ಹೊರಗಡೆ ತಗೆದು ರಕ್ಷಿಸಲಾಗಿದೆ. ಯಾವುದೇ ಪ್ರಾಣ ಹಾನಿಯಾಗಿರುವುದಿಲ್ಲ. ಮತ್ತು ಹುಬ್ಬಳ್ಳಿ ತಾಲೂಕಿನ ಶಿರಗುಪ್ಪಿ ಗ್ರಾಮ ಹತ್ತಿರದ ಬೆಣ್ಣಿಹಳ್ಳದಲ್ಲಿ ಸಿಲುಕಿದ ಮೊರಬ ಗ್ರಾಮದ ಮೂರು ಜನರನ್ನು ರಕ್ಷಣೆ ಮಾಡಲಾಗಿದ್ದು ಮತ್ತು 300 ಕುರಿಗಳನ್ನು ರಕ್ಷಿಸುವ ಕಾರ್ಯ ಪ್ರಗತಿಯಲ್ಲಿದೆ.



ಈ ಸಂದರ್ಭದಲ್ಲಿ ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ತಹಶೀಲ್ದಾರ ಜೆ.ಬಿ. ಮಜ್ಜಗಿ, ಹೆಚ್ಚುವರಿ ಎಸ್.ಪಿ. ನಾರಯಣ ಭರಮನಿ, ಸ್ಥಳೀಯ ಪೊಲೀಸ್ ಅಧಿಕಾರಿಗಳು, ಗ್ರಾಮೀಣ ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಸಹಾಯಕ ಕೃಷಿ ನಿರ್ದೇಶಕರು, ಹುಬ್ಬಳ್ಳಿ ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು, ಗ್ರಾಮ ಪಂಚಾಯತ್ ಪಿಡಿಓ ಮತ್ತು ಗ್ರಾಮ ಪಂಚಾಯತ ಸದಸ್ಯರು ಹಾಜರಿದ್ದರು.

**ಮನೆಹಾನಿ**: ನಿರಂತರ ಮಳೆಯಿಂದಾಗಿ ಜಿಲ್ಲೆಯ ನವಲಗುಂದದಲ್ಲಿ ಭಾಗಶಃ 23 ಮನೆ, ಅಣ್ಣಿಗೇ–ರಿಯಲ್ಲಿ 15 ಮನೆ, ಹುಬ್ಬಳ್ಳಿ ನಗರದಲ್ಲಿ 3 ಮನೆ ಹಾಗೂ ಕುಂದಗೋಳದಲ್ಲಿ 2 ಮನೆಗಳು ಸೇರಿ ಒಟ್ಟು 45 ಮನೆಗಳು ಭಾಗಶಃ ಹಾನಿಗೊಳಗಾಗಿವೆ ಎಂದು ತಾಲೂಕಿನ ತಹಶೀಲ್ದಾರರು ಜಿಲ್ಲಾಡಳಿತಕ್ಕೆ ಪ್ರಾಥ–ಮಿಕ ವರದಿ ಸಲ್ಲಿಸಿದ್ದಾರೆ.

ಶಾಸಕ ಎಮ್.ಆರ್.ಪಾಟೀಲ ವಿವಿಧ ಗ್ರಾಮಗಳಿಗೆ ಭೇಟಿ: ಕುಂದಗೋಳ ವಿಧಾನಸಭಾ ಮತಕ್ಷೇತ್ರದ ಶಾಸಕರಾದ ಎಮ್.ಆರ್.ಪಾಟೀಲ ಅವರು ಕುಂದಗೋಳ ತಾಲೂಕಿನ ಮಳೆ ಹಾನಿ ಪ್ರದೇಶಗಳಿಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಪರಿಶೀಲಿಸಿದರು. ಕುಂದಗೋಳ ತಾಲೂಕಿನ ಬೆನಕನಹಳ್ಳಿ, ಹಿರೇನರ್ತಿ, ಬಸಪೂರ ಬೆನಕನಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳಿಗೆ ಶಾಸಕರು ಭೇಟಿ ನೀಡಿದರು. ಬೆನಕನಹಳ್ಳಿ ಗ್ರಾಮದಲ್ಲಿ ಪರಿಶಿಷ್ಟ ಸಮುದಾಯದವರು ವಾಸಿಸುವ ಓಣಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಕೆಲ ಮನೆಗಳ ಒಳಗಡೆ ನೀರು ನುಗ್ಗಿದ್ದನ್ನು ಪರಿಶೀಲಿಸಿದರು. ಮತ್ತು ಹಿರೇನರ್ತಿ ಗ್ರಾಮದ ಬ್ರಿಡ್ಜ್, ರಸ್ತೆ ಕುಸಿದ ಬಗ್ಗೆ, ಶಾಲಾ ಆವರಣದಲ್ಲಿ ನೀರು ಹೆಚ್ಚಿನ ಪ್ರಮಾಣದಲ್ಲಿ ತುಂಬಿದ ಬಗ್ಗೆ, ಚರಂಡಿ ದುರಸ್ತಿ ಬಗ್ಗೆ ಪರಿಶೀಲನೆ ಮಾಡಿದರು. ಬಸಪೂರ ಗ್ರಾಮದ ಕೆರೆಯ ಕೊಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ ರಾಜು ಮಾವರಕರ ಸೇರಿದಂತೆ ವಿವಿಧ ಇಲಾಖೆಯ ತಾಲೂಕಾ ಮಟ್ಟದ ಅಧಿಕಾರಿಗಳು, ಇತರರು ಇದ್ದರು.

**ಧಾರವಾಡ ಜಿಲ್ಲೆಯ ಹವಾಮಾನ ವರದಿ**: ರಾಜ್ಯ ಹವಾಮಾನ ಇಲಾಖೆಯ ವರದಿಯಂತೆ ಜೂನ್ 11, 2025 ರಂದು ಹುಬ್ಬಳ್ಳಿ ತಾಲ್ಲೂಕಿನ ಶಿರುಗುಪ್ಪಿ ಹೊಬಳಿಯಲ್ಲಿ 90.8 ಮೀ.ಮೀ ಗರಿಷ್ಠ ಪ್ರಮಾಣದ ಹಾಗೂ ಅಳ್ನಾವರ ತಾಲ್ಲೂಕಿನ ಅಳ್ನಾವರ ಹೊಬಳಿಯಲ್ಲಿ 4.8 ಮೀ.ಮೀ ಕನಿಷ್ಠ ಪ್ರಮಾಣದ ಮಳೆಯಾಗಿರುವ ವರದಿಯಾಗಿದೆ.

ಮುಂದಿನ ಮೂರು ದಿನಗಳ ಹವಾಮಾನ ವರದಿಯಂತೆ ಜೂನ್ 12 ರಂದು ಎಲ್ಲೋ ಅಲರ್ಟ್, ಜೂನ್ 13 ಮತ್ತು 14 ರಂದು ಆರೆಂಜ್ ಅಲರ್ಟ್ ಇರುತ್ತದೆ.

ಜೂನ್ 6 ರಿಂದ ಜೂನ್ 12 ರವರೆಗೆ ಮಳೆಯಿಂದ ಕೈಗೊಂಡ ಕ್ರಮಗಳು: ರಾಜ್ಯ ಹವಾಮಾನ ಇಲಾಖೆಯ ವರದಿಯಂತೆ ಧಾರವಾಡ ಜಿಲ್ಲೆಯಲ್ಲಿ ಜೂನ್ 12 ರಂದು ಒಂದು ದಿನ ರೆಡ್ ಅಲರ್ಟ್ ಹಾಗೂ ಮೂರು ದಿನ ಆರೆಂಜ್ ಅಲರ್ಟ್ ನೀಡಲಾಗಿದೆ. ಇದರಿಂದ ಧಾರವಾಡ ಜಿಲ್ಲೆಯಲ್ಲಿ ಭಾರಿ ಮಳೆ, ಪ್ರವಾಹದ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಮುನ್ನೆಚ್ಚರಿಕೆಯ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಹವಾಮಾನ ಇಲಾಖೆಯಿಂದ ಧಾರವಾಡ ಜಿಲ್ಲೆಯಲ್ಲಿ ಭಾರಿ ಮಳೆಯ ಮುನ್ಸೂಚನೆ ಇರುವುದರಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾ–ರಿಗಳು ಕೇಂದ್ರ ಸ್ಥಾನ ಬಿಡದಂತೆ ಈಗಾಗಲೇ ಆದೇಶಿಸಲಾಗಿದೆ. ಮತ್ತು ಧಾರವಾಡ ಜಿಲ್ಲೆಯ ಜಲಪ್ರದೇಶಗಳಲ್ಲಿ ಸಾರ್ವಜನಿಕರ ಅನಧಿಕೃತ ಪ್ರವೇಶವನ್ನು ನಿರ್ಭಂಧಿಸುವ ಬಗ್ಗೆ ಆದೇಶ ನೀಡಲಾಗಿದೆ.

ಪ್ರವಾಹಕ್ಕ ಒಳಗಾಗುವ ಪ್ರದೇಶಗಳಿಗೆ ಹಾಗೂ ಸಮಸ್ಯೆ ಇರುವ ಸ್ಥಳಗಳಿಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ನಿರಂತರ ಭೇಟಿ ನೀಡಿ, ಸಾರ್ವಜಿಕರ ಸಮಸ್ಯೆಗಳಿಗೆ ಸ್ಪಂಧಿಸಿದ ಪರಿಹರಿಸಲು ಕ್ರಮವಹಿಸಲಾಗಿದೆ.

ಬೆಣ್ಣೆ ಹಳ್ಳ ಮತ್ತು ತುಪ್ಪರಿ ಹಳ್ಳಗಳ ಅಚ್ಚು–ಕಟ್ಟು ಪ್ರದೇಶದ ಪ್ರಸ್ತುತ ಹಾಗೂ ಮುಂದಿನ ಒಂದು ವಾರ ಸಂಭವಿಸಬಹುದಾದ ಮಳೆ ಪ್ರಮಾಣದ ವಿವರಗಳನ್ನು ರಾಜ್ಯ ಹವಾಮಾನ ಇಲಾಖೆಯಿಂದ ಪಡೆದುಕೊಂಡು ತಾಲ್ಲೂಕಿನ ಅಧಿಕಾರಿ, ಸಿಬ್ಬಂದಿಗಳಿಗೆ ಈ ಕುರಿತು ಜಾಗೃತಿ ಹಾಗೂ ಮುನ್ನೆಚ್ಚರಿಕೆ ವಹಿಸಲು ಪ್ರಾಧಿಕಾರದಿಂದ ನಿರ್ದೇಶನ ನೀಡಲಾಗಿದೆ.

ಜಿಲ್ಲೆಯ ಬೆಣ್ಣೆ ಹಳ್ಳ ಮತ್ತು ತುಪ್ಪರಿ ಹಳ್ಳದ ದಡದಲ್ಲಿರುವ ಗ್ರಾಮಗಳಲ್ಲಿ ಪ್ರವಾಹದ ಕುರಿತು ಡಂಗುರ ಸಾರುವ ಮೂಲಕ ಹಾಗೂ ವಾಹನಗಳಲ್ಲಿ ಧ್ವನಿವರ್ಧಕಗಳ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಜಿಲ್ಲಾ ವಿಪತ್ತು ನಿರ್ವಾಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

**ತಾಲೂಕುವಾರು ಮಳೆ ಮಾಹಿತಿ** : ಕಳೆದ 24 ಗಂಟೆಯಲ್ಲಿ ಧಾರವಾಡ ತಾಲೂಕಿನಲ್ಲಿ 6.6 ಮಿಲಿಮೀಟರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 19.9 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 188 ರಷ್ಟು ಹೆಚ್ಚುವರಿ ಮಳೆಯಾಗಿದೆ.

ಹುಬ್ಬಳ್ಳಿ ತಾಲೂಕಿನಲ್ಲಿ 4.2 ಮಿಲಿಮೀಟ–ರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 71.5 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 1602 ರಷ್ಟು ಹೆಚ್ಚುವರಿ ಮಳೆಯಾಗಿದೆ.

ಕಲಘಟಗಿ ತಾಲೂಕಿನಲ್ಲಿ 4.0 ಮಿಲಿಮೀಟ–ರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 9.2 ರಷ್ಟು ವಾಸ್ತವಿಕವಾಗಿ ಮಳೆಯಾಗಿದ್ದು, ಶೇ. 130 ರಷ್ಟು ಹೆಚ್ಚುವರಿ ಮಳೆಯಾಗಿದೆ.

ಕುಂದಗೋಳ ತಾಲೂಕಿನಲ್ಲಿ 4.2 ಮಿಲಿಮೀಟ–ರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 63.2 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 1405 ರಷ್ಟು ಹೆಚ್ಚುವರಿ ಮಳೆಯಾಗಿದೆ.

ನವಲಗುಂದ ತಾಲೂಕಿನಲ್ಲಿ 3.2 ಮಿಲಿಮೀಟ–ರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 56.7 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 1672 ರಷ್ಟು ಹೆಚ್ಚುವರಿ ಮಳೆಯಾಗಿದೆ.

ಹುಬ್ಬಳ್ಳಿ ನಗರ 3.2 ಮಿಲಿಮೀಟರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 30.4 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 850 ರಷ್ಟು ಹೆಚ್ಚುವರಿ ಮಳೆಯಾಗಿದೆ. ಅಳ್ನಾವರ ತಾಲೂಕಿನಲ್ಲಿ 7.1 ಮಿಲಿಮೀಟರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, ಕೇವಲ 4.8 ರಷ್ಟು ವಾಸ್ತವಿಕವಾಗಿ ಮಳೆಯಾಗಿದ್ದು, ಶೇ. –32 ರಷ್ಟು ಮಳೆ ಕೊರತೆಯಾಗಿದೆ.

ಅಣ್ಣಿಗೇರಿ ತಾಲೂಕಿನಲ್ಲಿ 7.1 ಮಿಲಿಮೀಟ–ರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 56.9 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 701 ರಷ್ಟು ಹೆಚ್ಚುವರಿ ಮಳೆಯಾಗಿದೆ.

ಒಟ್ಟಾರೆಯಾಗಿ ಧಾರವಾಡ ಜಿಲ್ಲೆಯಲ್ಲಿ ಕಳೆದ 24 ಗಂಟೆಯಲ್ಲಿ (ಜೂ.12 ರ ಬೆಳಿಗ್ಗೆ 8:30 ರ ವರೆಗೆ) 4.7 ಮಿಲಿಮೀಟರ್ ಆಗಬೇಕಿದ್ದ ಸಾಮಾನ್ಯ ಮಳೆಗೆ, 40.9 ರಷ್ಟು ವಾಸ್ತವಿಕವಾಗಿ ಮಳೆಯಾಗಿದೆ. ಶೇ. 770 ರಷ್ಟು ಹೆಚ್ಚುವರಿ ಮಳೆಯಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಾರ್ವಜನಿಕರ ತುರ್ತು ಸಂಪರ್ಕಕ್ಕಾಗಿ ಸಹಾಯವಾಣಿ ಕೇಂದ್ರಗಳು**: ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆ ಹಾಗೂ ಇತರ ಪ್ರಕೃತಿ ವಿಕೋಪದ ಸಂದರ್ಭಗಳಲ್ಲಿ ಜಿಲ್ಲೆಯ ಮಹಾನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ನಿರಾಶ್ರಿತರು, ಬಾಧಿತರು ಮತ್ತು ಸಾರ್ವಜನಿಕರು ತುರ್ತಾಗಿ ಸಂಪರ್ಕಿಸಲು ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ ಜಿಲ್ಲೆಯ ಎಲ್ಲ ತಹಶೀಲ್ದಾರ ಅವರ ಕಾರ್ಯಾಲಯದಲ್ಲಿ ಮತ್ತು ಮಹಾನಗರ ಪಾಲಿಕೆಯಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಿ, ದಿನದ 24 ಗಂಟೆ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನೇಮಿಸಿ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆದೇಶಿಸಿ, ಕ್ರಮಕೈಗೊಂಡಿದ್ದಾರೆ.

ಅದರಂತೆ ಧಾರವಾಡ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ: 0836–2445508 ಹಾಗೂ 1077, ಧಾರವಾಡ ಉಪವಿಭಾಗಾಧಿಕಾರಿಗಳ ಕಚೇರಿ ಸಹಾಯವಾಣಿ ಸಂಖ್ಯೆ: 0836–2233860, ಧಾರವಾಡ ತಹಶೀಲ್ದಾರರ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ: 0836–2233822, ಅಳ್ನಾವರ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂಖ್ಯೆ: 0836–2385544, ಹುಬ್ಬಳ್ಳಿ ನಗರ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂಖ್ಯೆ: 0836–2358035, ಹುಬ್ಬಳ್ಳಿ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂಖ್ಯೆ:0836–2233844, ಕಲಘಟಗಿ ತಹಶೀಲ್ದಾರರ ಕಾರ್ಯಾಲಯಾದ ಸಹಾಯವಾಣಿ ಸಂಖ್ಯೆ:08370–284535, ಕುಂದಗೋಳ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂಖ್ಯೆ: 08304–290239, ನವಲಗುಂದ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂಖ್ಯೆ: 08380–229240, ಅಣ್ಣಿಗೇರಿ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂಖ್ಯೆ: 8618442759 ಮತ್ತು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಸಹಾಯವಾಣಿ ಕೇಂದ್ರವನ್ನು ತೆರೆದು 0836–2213888, 0836–2213889, 0836–2213869 ದೂರವಾಣಿ ಸಂಖ್ಯೆಗಳನ್ನು ನೀಡಲಾಗಿದೆ.



ಮತ್ತು ತೊಂದರೆಗಿಡಾದ ಸಾರ್ವಜನಿಕರು ವಾಟ್ಸಪ್ ಸಂದೇಶದ ಮೂಲಕ ಸಹಾಯವಾಣಿ 8277803778 ಗೆ ಫೋಟೋ, ವಿಡಿಯೋಗಳನ್ನು ಕಳಿಸುವ ಮೂಲಕ ಮಾಹಿತಿಯನ್ನು ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

***

### ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಬಸ್ ನಿಲ್ದಾಣ ಪರಿಶೀಲನೆ

## ಸ್ವಚ್ಛತೆಗೆ ಪ್ರಥಮ ಆದ್ಯತೆ ವಹಿಸಲು ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ಸೂಚನೆ



ಗದಗ : ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಅವರ ನೇತೃತ್ವದಲ್ಲಿ ಸಮಿತಿ ಸದಸ್ಯರು ಗುರುವಾರ ನಗರದ ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ವ್ಯವಸ್ಥೆಯ ಪರಿಶೀಲನೆ ನಡೆಸಿದರು.

ಮೊದಲು ಬಸ್ ನಿಲ್ದಾಣದ ಆವರಣವನ್ನು ಪರಿಶೀಲನೆ ನಡೆಸಿದ ಅವರು ನಿಲ್ದಾಣದ ಸ್ವಚ್ಛತೆಗೆ ಗಮನ ಹರಿಸಬೇಕು. ಇದೇ ಜೂನ್ 20ಕ್ಕೆ ಪುನ: ಬಸ್‌ನಿಲ್ದಾಣಕ್ಕೆ ಸ್ವಚ್ಛತೆಯ ಪರಿಶೀಲನೆಗಾಗಿ ಆಗಮಿಸುವೆ. ಆ ಸಂದರ್ಭದಲ್ಲಿ ನಿಲ್ದಾಣ ಆವರಣ ಶುಚಿಯಾಗಿರಬೇಕು. ನಿಲ್ದಾಣದಲ್ಲಿನ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸುವಂತೆ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಶೌಚಾಲಯ ವೀಕ್ಷಣೆ : ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ ಅಲ್ಲಿಯೂ ಸಹ ಸ್ವಚ್ಛತೆ ಅಗತ್ಯವಾಗಿದೆ. ಅಲ್ಲದೇ ಸಾರ್ವಜನಿಕರಿಂದ ನಿಗದಿತ ಶುಲ್ಕ ಪಡೆದು ಸಾರ್ವಜನಿಕರಿಗೆ ಶೌಚಾಲಯ ಬಳಕೆಗೆ ದೊರೆಯಬೇಕು. ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು ಪುನ: ದೂರುಗಳು ಬರದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಗಾ ವಹಿಸಲು ಸೂಚಿಸಿದರು.

ವಿಶ್ರಾಂತಿ ಕೊಠಡಿ : ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಶುಭ್ರವಾಗಿರುವಂತೆ ನೋಡಿಕೊಳ್ಳಬೇಕು ಹಾಗೂ ಪ್ರತಿನಿತ್ಯ ವಿಶ್ರಾಂತಿ ಕೊಠಡಿಗೆ ಸಾರ್ವಜನಿಕರು ಆಗಮಿಸುವಂತೆ ಶುಚಿಯಾಗಿಟ್ಟುಕೊಳ್ಳಲು ಸಂಸ್ಥೆಯ ಅಧಿಕಾರಿಗಳಿಗೆ ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಜೂನ್ 20 ಕ್ಕೆ ಪುನ: ಪರಿಶೀಲನೆಗೆ ಆಗಮಿಸಲಾಗುವುದು. ಆ ಸಂದರ್ಭದಲ್ಲಿ ಇಂದು ನೀಡಿದ ಎಲ್ಲ ಸೂಚನೆಗಳು ಕಾರ್ಯರೂಪಕ್ಕೆ ಬಂದಿರಬೇಕು. ಇಲ್ಲವಾದಲ್ಲಿ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹಿಸಲಾಗುವುದು ಎಂದರು.

ಗ್ಯಾರಂಟಿ ಸಂವಾದ : ನಿಲ್ದಾಣದ ಆವರಣದಲ್ಲಿನ ಮಹಿಳೆಯರೊಂದಿಗೆ ಹಾಗೂ ಗ್ಯಾರಂಟಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದ ಸಮಿತಿ ಸದಸ್ಯರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಯಶಸ್ಸಿನ ಬಗ್ಗೆ ಅಭಿಪ್ರಾಯಗಳನ್ನು ಆಲಿಸಿದರು. ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿರುವುದು ಅಕ್ಷರಶ: ಸತ್ಯ. ಅದರಂತೆ ಸುಸ್ಥಿತ ಬದುಕಿಗಾಗಿ ಗೃಹಲಕ್ಷ್ಮೀ ಯೋಜನೆ, ಹಸಿವು ಮುಕ್ತ ಕರ್ನಾಟಕಕ್ಕೆ ಅನ್ನಭಾಗ್ಯ ಹಾಗೂ ಬಡವರ ಆಶಾಕಿರಣ ಗೃಹ ಜ್ಯೋತಿ, ನಿರುದ್ಯೋಗ ನಿವಾರಣೆಗೆ ಯುವನಿಧಿ ಸಹಕಾರಿಯಾಗಿವೆ ಎಂದು ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ ಮುಖ್ಯಮಂತ್ರಿ ಸಿದ್ದರಾಮಯ್ಯ , ಸಚಿವರಾದ ಎಚ್.ಕೆ.ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ಸದಸ್ಯರಾದ ಈಶ್ವರ ಹುಣಸಿಕಟ್ಟಿ, ಅಶೋಕ ಮಂದಾಲಿ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ನಿಂಗಪ್ಪ ದೇಸಾಯಿ, ಮುಲ್ಲಾ ಬಾರಕೇರ, ಸಂಗಮೇಶ ಹಾದಿಮನಿ, ಶಂಭು ಕಾಳೆ, ಗಣೇಶ ಮಿಟಾಯಿ, ಗಣ್ಯರಾದ ಚನ್ನಬಸಪ್ಪ ಅಕ್ಕಿ, ಅನಿಲ ಗರಗ, ಮೋಹನ ದೊಡ್ಡಬಂಡಿ, ಸಮೀರ ಉಪಸ್ಥಿತರಿದ್ದರು.

## ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸಿ ಪರಿಸರ ಜಾಗೃತಿ ಕಾರ್ಯಕ್ರಮ





ಕಾರವಾರ, ವಿಶ್ವಪರಿಸರ ದಿನಾಚರಣೆ–2025 ರನ್ವಯ ಘೋಷವಾಕ್ಯವಾದ "ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು" ವಿಷಯದ ಕುರಿತು ಗುರುವಾರ , ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ ಕಾರವಾರ ಹಾಗೂ ಮೆ. ವೆಸ್ಟ್ ಕೋಸ್ಟ್ ಪೇಪರ್ ಮಿಲ್ಸ್ ಲಿ., ದಾಂಡೇಲಿ ಇವರ ಸಹಯೋಗದೊಂದಿಗೆ ಮೆ. ವೆಸ್ಟ್ ಕೋಸ್ಟ್ ಪೇಪರ್ ಮಿಲ್ಸ್ ಲಿ., ದಾಂಡೇಲಿ ಇಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಬಿ.ಕೆ. ಸಂತೋಷ್ ಹಾಜರಿದ್ದು, ಕಂಪನಿಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆಯಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳು ಹಾಗೂ ಪ್ಲಾಸ್ಟಿಕ್ ತ್ಯಾಜ್ಯಗಳ ನಿರ್ವಹಣೆ ವಿಲೇವಾರಿ ಬಗ್ಗೆ ತಿಳಿಸಿದರು.

ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು (ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಸ್ಟ್ರಾಗಳು, ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕಾಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್ ನಿಂದ ತಯಾರಾದಂತಹ ವಸ್ತುಗಳು) ಉಪಯೋಗಿಸದಂತೆ ಜಾಗೃತಿ ಮೂಡಿಸಿ, ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಉಪಯೋಗವನ್ನು ಸಂಪೂರ್ಣವಾಗಿ ನಿಷೇಧಿಸಿ ಬದಲಾಗಿ ಅಡಿಕೆ ಎಲೆ / ಕಟ್ಟಿಗೆ / ಗಾಜು / ಪೇಪರ್ / ಸ್ಟೀಲ್ನಿಂದ ತಯಾರಿಸಿದ ವಸ್ತುಗಳನ್ನು ಬಳಸುವಂತೆ ಬಟ್ಟೆ ಚೀಲಗಳನ್ನು ಬಳಸುವಂತೆ ಹಾಗೂ ಪ್ಲಾಸ್ಟಿಕ್ ಚೀಲಗಳನ್ನು ಬಳಸಿದಲ್ಲಿ ದಂಡವನ್ನು ವಿಧಿಸಲಾಗುವುದು ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತು ಕರಪತ್ರ ಬಿಡುಗಡೆಗೊಳಿಸಲಾಯಿತು. ಎಲ್ಲರಿಗೂ ಬಟ್ಟೆ ಚೀಲಗಳನ್ನು ವಿತರಿಸಲಾಯಿತು. ಜಾಗೃತಿ ಕಾರ್ಯಕ್ರಮದ ಅಂಗವಾಗಿ ಕಂಪನಿಯ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಜಾಗೃತಿ ಕಾರ್ಯಕ್ರಮದಲ್ಲಿ ಕಂಪನಿಯ ಅಧಿಕಾರಿ ರಾಜೇಂದ್ರ ಜೈನ, ಎಕ್ಸಿಕ್ಯೂಟಿವ್ ಡೈರೆಕ್ಟರ್ ಅಶೋಕ ಶರ್ಮಾ, ಸಿನಿಯರ್ ವೈಸ್ ಪ್ರೆಸಿಡೆಂಟ್ ರವಿಗೌತಮ, ವೈಸ್ ಪ್ರೆಸಿಡೆಂಟ್ ಭುಪೆಂದ್ರ ಸಿಂಗ್, ಅಸಿಸ್ಟೆಂಟ್ ವೈಸ್ ಪ್ರೆಸಿಡೆಂಟ್ ರಾಘವೇಂದ್ರ ಜೆ., ಮತ್ತಿತರರು ಹಾಜರಿದ್ದರು.

## ನಾಗನೂರ ಅರ್ಬನ ಕ್ರೆಡಿಟ್ ಸೊಸೈಟಿಯಿಂದ ಒಂದು ಲಕ್ಷ ರೂಪಾಯಿ ಪರಿಹಾರ



ಮುಗಳಖೋಡ: ಪಟ್ಟಣದ ನಾಗನೂರ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ ಮುಗಳಖೋಡ ಶಾಖೆಯ ಸದಸ್ಯರಾದ ಸುಲ್ತಾನ ಗೌಬಿಸಾಬ ಡಾಂಗೆ ಇವರು ಪೆ. 14 ರಂದು ನಿಧನರಾದ ಹಿನ್ನಲೆಯಲ್ಲಿ, ಸಂಘದ ಸುರಕ್ಷಾ ಪರಿಹಾರ ನಿಧಿಯಿಂದ ರೂ. 1,00,000/– ಗಳನ್ನು ಜೂ.13 ಶುಕ್ರವಾರದಂದು ಅವರ ಪತ್ನಿ ಜಹರಾ ಸುಲ್ತಾನ ಡಾಂಗೆ ಇವರಿಗೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಚೇರಿಯ ಅಧ್ಯಕ್ಷ ಬಸವರಾಜ ಗೌಡಪ್ಪ ತಡಸನ್ನವರ, ಶಾಖಾ ಸಲಹಾ ಸಮಿತಿಯ ಅಧ್ಯಕ್ಷ ಗಿರಿಗೌಡ ಪಾಟೀಲ, ಸದಸ್ಯರಾದ ಮಲ್ಲಿಕಾರ್ಜುನ ಖಾನಗೌಡರ, ಮಹಾಂತೇಶ ಯರಡತ್ತಿ, ರಾಮಚಂದ್ರ ಹುಲ್ಲೋಳಿ, ಗಜಾನಂದ ಕೊಕಟನೂರ, ಭರಮಪ್ಪ ನಿಂಗನೂರ, ಗಣಪತಿ ಕುಲಿಗೋಡ, ಗುರುಪಾದ ಚೌಗಲಾ ಹಾಗೂ ಹಣಕಾಸು ಅಭಿವೃದ್ಧಿ ಅಧಿಕಾರಿ ಭೀಮಪ್ಪ ಬಂಡಿವಡ್ಡರ ಶಾಖಾ ವ್ಯವಸ್ಥಾಪಕರಾದ ಸಿದ್ದಾರೂಢ ಕೆಸರಗೊಪ್ಪ ಮತ್ತು ಸಂಘದ ಸಿಬ್ಬಂದಿ ವರ್ಗದವರು ಹಾಗೂ ಪಿಗ್ಮಿಸಂಗ್ರಹಕರು ಉಪಸ್ಥಿತರಿದ್ದರು.

## ಜೂ.21ರಂದು ಜಿಲ್ಲೆಯಲ್ಲಿ ರಾಜ್ಯಮಟ್ಟದ ಯೋಗೋತ್ಸವ ದಿನಾಚರಣೆ



ವಿಜಯಪುರ : ಮಕ್ಕಳ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಯೋಗದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಹಾಗೂ ಆಯುಷ್ ಇಲಾಖೆ ಇವರ ಸಹಯೋಗದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯೊಂದಿಗೆ ಜೂ.21 ರಂದು ಜಿಲ್ಲೆಯಲ್ಲಿ ರಾಜ್ಯಮಟ್ಟದ ಯೋಗೋತ್ಸವ ಕಾರ್ಯಕ್ರಮ ಆಚರಿಸಲಾಗುವುದು ಎಂದು ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ತಿಳಿಸಿದರು. ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ರಾಜ್ಯಮಟ್ಟದ ಯೋಗೋತ್ಸವ ಕುರಿತು ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಪ್ರಪ್ರಥಮವಾಗಿ ರಾಜ್ಯಮಟ್ಟದ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ಆಯೋಜಿಸಲಾಗುತ್ತಿದೆ. ಈ ಕಾರ್ಯಕ್ರಮಕ್ಕಾಗಿ 15 ಲಕ್ಷ ರೂ.ಗಳನ್ನು ಅಕಾಡೆಮಿ ವತಿಯಿಂದ ಒದಗಿಸಲಾಗಿದ್ದು, ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಹಮ್ಮಿಕೊಳ್ಳುವ ನಿಟ್ಟಿನಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಬೇಕು. ಯೋಗದಲ್ಲಿ ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಮಕ್ಕಳಿಗೆ ಸನ್ಮಾನ ಹಾಗೂ ಜೂ.22 ರಂದು ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಯೋಗದ ಕುರಿತು ಪರಿಣಿತರಿಂದ ಚಿಂತನಾಗೋಷ್ಠಿ ಹಾಗೂ ಯೋಗ ಪ್ರದರ್ಶನ ಹಮ್ಮಿಕೊಳ್ಳಲಾಗಿದ್ದು,– ಎಲ್ಲ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಮಾತನಾಡಿ, ಜೂ.21ರಂದು ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದೊಂದಿಗೆ ಜರುಗುವ ಯೋಗೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಪದವಿಪೂರ್ವ ಕಾಲೇಜ್, ಪ್ರೌಢಶಾಲೆ, ವಿವಿಧ ವಸತಿನಿಲಯಗಳು ಸೇರಿದಂತೆ ವಿವಿಧ ಶಾಲಾ–ಕಾಲೇಜಿನ 2000 ವಿದ್ಯಾರ್ಥಿಗಳು ಭಾಗವಹಿಸಲು ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು. ಪೊಲೀಸ್ ಇಲಾಖೆಯಿಂದ ಸೂಕ್ತ ಭದ್ರತಾ ವ್ಯವಸ್ಥೆ, ಕ್ರೀಡಾಂಗಣದ ಸ್ವಚ್ಛತೆ, ಅಂಬ್ಯುಲೆನ್ಸ್ ವ್ಯವಸ್ಥೆ, ಸೇರಿದಂತೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಯೋಗೋತ್ಸವ ಕಾರ್ಯಕ್ರಮದ ಅಂಗವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಕ್ಕಳಿಗೆ ಗುಣಮಟ್ಟದ ಟೀ ಶರ್ಟ್, ಕ್ಯಾಪ್ ಒದಗಿಸಬೇಕು. ಯೋಗದ ಮಹತ್ವ ಕುರಿತ ಕಿರುಪುಸ್ತಕವನ್ನು ಮಕ್ಕಳಿಗೆ ಒದಗಿಸುವುದು, ಕಾರ್ಯಕ್ರಮದ ವೇಳೆ ಮಳೆ ಬಂದಲ್ಲಿ ಒಳಾಂಗಣ ಕ್ರೀಡಾಂಗಣದಲ್ಲಿ ಪರ್ಯಾಯ ವ್ಯವಸ್ಥೆಯ ಸಿದ್ಧತೆ ಕೈಗೊಳ್ಳಬೇಕು. ಕ್ರೀಡಾಂಗಣದಲ್ಲಿ ಎಲ್‌ಇಡಿ ಪರದೆ ಅಳವಡಿಕೆ, ಕುಡಿಯುವ ನೀರು, ಅಲ್ಪೋಪಹಾರ, ಯೋಗ ಮ್ಯಾಟ್ ಸೇರಿದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಉಪನಿರ್ದೇಶಕ ಕೆ.ಕೆ.ಚವ್ಹಾಣ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪುಂಡಲೀಕ ಮಾನವರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಿ.ಕೆ.ಹೊಸಮನಿ, ಆಯುಷ್ ಇಲಾಖೆಯ ಡಾ.ವಿದ್ಯಾವತಿ ಅಥಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಕರಾದ ಶ್ರೀಮತಿ ಟಿ.ಎಸ್.ಕೊಲ್ಹಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ದೀಪಕ, ಕ್ರೀಡಾ ಇಲಾಖೆ ಅಧಿಕಾರಿ ರಾಜಶೇಖರ ಧೈವಾಡಿ ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಬೆಣ್ಣೆಹಳ್ಳ ಹಾಗೂ ನದಿಯ ಹರಿವಿನ ಗ್ರಾಮಗಳಲ್ಲಿ ಕಟ್ಟೆಚ್ಚರಕ್ಕೆ ಸೂಚನೆ

## ಪ್ರವಾಹಕ್ಕೊಳಗಾಗುವ ಗ್ರಾಮಗಳ ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ವಹಿಸಿ



ಗದಗ : ಜಿಲ್ಲೆಯಲ್ಲಿ ಬೆಣ್ಣೆಹಳ್ಳ ಹಾಗೂ ನದಿಯ ಪ್ರವಾಹಕ್ಕೊಳಗಾಗುವ ಗ್ರಾಮಗಳ ಸಾರ್ವಜನಿಕರ ಸುರಕ್ಷತೆಗೆ ಸ್ಥಳೀಯ ಅಧಿಕಾರಿಗಳು ಪ್ರಥಮಾದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಿಂದ ವಿಡಿಯೋ ಕಾನ್ಪರನ್ಸ್ ಮೂಲಕ ಗುರುವಾರ ಬೆಣ್ಣೆಹಳ್ಳ ಹಾಗೂ ನದಿಯ ಪ್ರವಾಹದಿಂದ ತೊಂದರೆಗೊಳಗಾಗುವ ಗ್ರಾಮಗಳ ಸುರಕ್ಷತೆ ಕುರಿತಂತೆ ತಾಲೂಕಾ ಆಡಳಿತದೊಂದಿಗೆ ಪ್ರವಾಹ ಪರಿಸ್ಥಿತಿ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಪಾರ ಮಳೆಯಿಂದ ಬಿದ್ದ ಮಳೆ ನೀರು ಚರಂಡಿ ಹಾಗೂ ಪ್ರಮುಖ ಕಾಲುವೆಗಳ ಮೂಲಕ ಸರಾಗವಾಗಿ ಮುಂದೆ ಸಾಗುವಂತೆ ಇರುವ ಗಿಡ ಕಂಟೆ, ಪ್ಲಾಸ್ಟಿಕ್ ತೆರವುಗೊಳಿಸಬೇಕು. ಇದರಿಂದ ವಿನಾಕಾರಣ ಮಳೆ ನೀರು ಮನೆಗಳಿಗೆ ನುಗ್ಗುವುದನ್ನು ತಡೆಯಬಹುದಾಗಿದೆ ಎಂದರು. ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಎಲ್ಲರೂ ಕೇಂದ್ರ ಸ್ಥಾನದಲ್ಲಿದ್ದು ಅತೀವೃಷ್ಟಿ, ಪ್ರವಾಹ ಪರಿಸ್ಥಿತಿ ಎದುರಾದಲ್ಲಿ ಸಮರ್ಪಕವಾಗಿ ಎದುರಿಸಬೇಕು. ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ಜನಜಾನುವಾರುಗಳ ಜೀವ ಹಾನಿ ತಡೆಯುವುದರೊಂದಿಗೆ ಆಸ್ತಿ ರಕ್ಷಣೆ ಮಾಡಬೇಕೆಂದು ಹೇಳಿದರು.

ಈ ಹಿಂದೆ ಅಧಿಕ ಪ್ರಮಾಣದ ಪ್ರವಾಹ ಪರಿಸ್ಥಿತಿ ಎದುರಾದಾಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಿದ ಅನೇಕ ಅಧಿಕಾರಿಗಳು ಅನುಭವ ಹೊಂದಿದವರಾಗಿದ್ದಾರೆ. ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಣೆಗೆ ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕೆಂದು ಸೂಚಿಸಿದರು.

ನವಿಲುತೀರ್ಥ ಡ್ಯಾಂ 37.731 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು. ನವಿಲುತೀರ್ಥ ಡ್ಯಾಮಿನಿಂದ ಅಪಾರ ಪ್ರಮಾಣದ ನೀರು ಬಿಟ್ಟಲ್ಲಿ ಮುಂದಿನ 18 ಗಂಟೆಯೊಳಗಾಗಿ ನೀರು ಜಿಲ್ಲೆಗೆ ಪ್ರವೇಶ ಮಾಡಲಿದ್ದು ಡ್ಯಾಂನಿಂದ ನೀರು ಹೊರಬಿಡುವ ಮಾಹಿತಿ ದೊರೆತ ತಕ್ಷಣ ತಾಲೂಕಾ ಆಡಳಿತಗಳು ಪ್ರವಾಹ ಪೀಡಿತಕ್ಕೊಳಗಾಗುವ ಗ್ರಾಮಗಳಲ್ಲಿ ಕಟ್ಟೆಚ್ಚರ ವಹಿಸುವ ಮೂಲಕ ಆಗುವ ಜೀವ ಹಾನಿ ತಪ್ಪಿಸಬೇಕು ಎಂದರು. ನವಲಗುಂದ ಸೇರಿದಂತೆ 5 ತಾಲೂಕುಗಳ ಮಳೆಯಿಂದ ಅಪಾರ ಪ್ರಮಾಣದ ನೀರು ಬೆಣ್ಣೆಹಳ್ಳ ತಲುಪಿ ಅಲ್ಲಿಂದ ಜಿಲ್ಲೆಗೆ ಒಮ್ಮಿಲೇ ನೀರು ಹರಿದು ಬರಲಿದೆ ಇದರಿಂದ ನರಗುಂದ ಹಾಗೂ ರೋಣ ತಾಲೂಕಿನ ಹಲವು ಗ್ರಾಮಗಳು ಪ್ರವಾಹಕ್ಕೊಳಗಾಗುವ ಸಂಭವವಿದ್ದು ಈಗಾಗಲೇ ತಾಲೂಕಾ ಆಡಳಿತ ಅಂತಹ ಗ್ರಾಮಗಳನ್ನು ಗುರುತಿಸಿದೆ. ನೀರಿನ ಪ್ರಮಾಣಕ್ಕನುಗುಣವಾಗಿ ಅಧಿಕಾರಿಗಳು ಪ್ರವಾಹ ಪರಿಸ್ಥಿತಿಯನ್ನು ಸರಿಯಾಗಿ ನಿಭಾಯಿಸಬೇಕು ಎಂದು ನಿರ್ದೇಶಿಸಿದರು.

ಪ್ರವಾಹ ಪರಿಸ್ಥಿತಿ ತಲೆದೂರಿದಲ್ಲಿ ಅಗ್ನಿಶಾಮಕ ಇಲಾಖೆ ತಂಡ ತಕ್ಷಣ ಕಾರ್ಯಪ್ರವೃತ್ತವಾಗಬೇಕು. ತಾಲೂಕಾ ಆಡಳಿತದೊಂದಿಗೆ ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯ ಸಾಧಿಸುವ ಮೂಲಕ ಪ್ರವಾಹ ಪರಿಸ್ಥಿತಿ ನಿರ್ವಹಣೆ ಮಾಡಬೇಕು. ತಗ್ಗುಪ್ರದೇಶಗಳಲ್ಲಿ ಹಾಗೂ ಶಿಥಿಲಾವಸ್ಥೆಯಲ್ಲಿರುವ ಮಣ್ಣಿನ ಮನೆಗಳಲ್ಲಿ ವಾಸಿಸುವವರನ್ನು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಹೇಳಿದರು. ಜಿ.ಪಂ. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಮಾತನಾಡಿ ಪ್ರವಾಹ ಪರಿಸ್ಥಿತಿ ಸಮರ್ಥವಾಗಿ ನಿಭಾಯಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ಅಗತ್ಯವಿದ್ದಲ್ಲಿ ಕಾಳಜಿ ಕೇಂದ್ರಗಳನ್ನು ತೆರೆಯಬೇಕು. ಕಾಳಜಿ ಕೇಂದ್ರಗಳನ್ನು ಈಗಾಗಲೇ ಗುರುತಿಸಲಾಗಿದೆ. ಕಾಳಜಿ ಕೇಂದ್ರಗಳಲ್ಲಿ ಅಗತ್ಯಮೂಲಭೂತ ಸೌಲಭ್ಯಗಳು ಇರುವಂತೆ ಪರಿಶೀಲಿಸಬೇಕು. ಸಂದರ್ಭಾನುಸಾರ ಸಾರ್ವಜನಿಕರನ್ನು ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಿದಲ್ಲಿ ಆರೋಗ್ಯಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿಭಾಯಿಸಬೇಕೆಂದು ಸೂಚಿಸಿದರು.

ಉಪವಿಭಾಗಾಧಿಕಾರಿ ಗಂಗಪ್ಪ ಎಂ ಮಾತನಾಡಿ ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಈಗಾಗಲೇ ಪೂರ್ವಸಿದ್ಧತೆ ಮಾಡಿಕೊಳ್ಳಲಾಗಿದೆ. ಜನಜಾನುವಾರು ಸ್ಥಳಾಂತರಕ್ಕೆ ಸ್ಥಳ ಗುರುತಿಸಿಟ್ಟುಕೊಳ್ಳಲಾಗಿದೆ. ಮೊದಲು ಪ್ರವಾಹಕ್ಕೀಡಾಗುವ ಗ್ರಾಮಗಳ ಪಟ್ಟಿಯನ್ನು ಮಾಡಿಟ್ಟುಕೊಂಡಿದ್ದು ಸಂದರ್ಭಕ್ಕನುಸಾರವಾಗಿ ಸಮರ್ಪಕವಾಗಿ ಪ್ರವಾಹ ನಿರ್ವಹಣೆಗೆ ಕ್ರಮ ವಹಿಸಲಾಗುವುದು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸೇರಿದಂತೆ ತಾಲೂಕಾ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ತಾಲೂಕಾ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಭೂ ಕುಸಿತ ಪ್ರದೇಶಗಳಲ್ಲಿ ವಾಹನ ನಿಲುಗಡೆ ನಿಷೇಧ ; ಜಿಲ್ಲಾಧಿಕಾರಿ

ಕಾರವಾರ, ಜಿಲ್ಲೆಯಲ್ಲಿ ಭಾರೀ ಮಳೆ ಸುರಿಯುತ್ತಿರುವುದರಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೂ ಕುಸಿತವಾಗುವ ಸ್ಥಳಗಳಲ್ಲಿ ಎಲ್ಲಾ ತರಹದ ವಾಹನಗಳ ನಿಲುಗಡೆಯನ್ನು ಜೂನ್ 12 ರಿಂದ ಮಳೆಗಾಲ ಮುಕ್ತಾಯವಾಗುವವರೆಗೆ ನಿರ್ಭಂಧಿಸಿ, ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಆದೇಶಿಸಿದ್ದಾರೆ.

ಈ ಪ್ರದೇಶಗಳಲ್ಲಿ ವಾಹನ ನಿಲುಗಡೆ ನಿಷೇಧ ಬಗ್ಗೆ ಅಗತ್ಯ ಗುರುತಿನ ಚಿಹ್ನೆಯುಳ್ಳ ಸೂಚನಾ ಫಲಕಗಳು ಹಾಗೂ ಇತರೇ ಸುರಕ್ಷಾ ಕ್ರಮಗಳನ್ನು ಅಳವಡಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

### ಸಂಚಾರ ನಿಷೇಧ, ಪರ್ಯಾಯ ಮಾರ್ಗ ಬಳಸಿ ; ಜಿಲ್ಲಾಧಿಕಾರಿ

ಕಾರವಾರ, ಭಟ್ಕಳ ತಾಲೂಕಿನ ಮಾವಿನಕುರ್ವೆ ಗ್ರಾಮ ಪಂಚಾಯತ ವ್ಯಾಪ್ತಿಯ ತಲಗೋಡ ಕೊಂಡರಕೇರಿಯಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ ಸುರಿಯುತ್ತಿರುವುದರಿಂದ , ಸದರಿ ಭಾಗದಲ್ಲಿ ಗುಡ್ಡ ಕುಸಿಯುವ ಸಂಭವ ಇದ್ದು, ಸಾರ್ವಜನಿಕ ಸುರಕ್ಷತಾ ಹಿತದೃಷ್ಟಿಯಿಂದ ಮತ್ತು ಯಾವುದೇ ರೀತಿಯ ಅಹಿತಕರ ಘಟನೆಗಳು ತಡೆಯುವ ದೃಷ್ಟಿಯಿಂದ ಮುನ್ನೆಚ್ಚರಿಕೆ ಕ್ರಮವಾಗಿ ಈ ರಸ್ತೆಯಲ್ಲಿ ವಾಹನ/ಸಾರ್ವಜನಿಕ ಸಂಚಾರವನ್ನು ದಿನಾಂಕ 12–06–2025 ರಿಂದ 2025–26 ನೇ ಸಾಲಿನ ಮಳೆಗಾಲ ಮುಕ್ತಾಯವಾಗುವವರೆಗೆ ನಿರ್ಭಂದಿಸಿ ಹಾಗೂ ಸದರಿ ರಸ್ತೆಯ ಪರ್ಯಾಯವಾಗಿ ಭಟ್ಕಳ ಮುಗ್ಧಮ್ ಕಾಲೋನಿ ಮುಖಾಂತರ ಪಥ ಬದಲಾವಣೆ ಮಾಡಿ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಆದೇಶಿಸಿದ್ದಾರೆ.

## ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಿ: ನ್ಯಾ.ದಿವ್ಯಶ್ರೀ ಸಿ.ಎಂ



ಕಾರವಾರ, ಬಾಲ ಕಾರ್ಮಿಕ ಪದ್ದತಿಯ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ. ಎಮ್ ಹೇಳಿದರು.

ಅವರು ಗುರುವಾರ ಶಿವಾಜಿ ಶಿಕ್ಷಣ ಸಂಸ್ಥೆಯಲ್ಲಿ, ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ(ರಿ), ಶಿವಾಜಿ ಶಿಕ್ಷಣ ಸಂಸ್ಥೆ ಹಾಗೂ ಅಂಗ ಸಂಸ್ಥೆಗಳು, ಹಾಗೂ ಜಿಲ್ಲಾ ನ್ಯಾಯಾವಾದಿಗಳ ಸಂಘ ಇವರುಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆನ್ನು ಉದ್ಘಾಟಿಸಿ ಮಾತನಾಡಿರು. ಭಾರತದಲ್ಲಿ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಜಾರಿಯಲ್ಲಿದ್ದರೂ , ಬಡತನ, ಶಿಕ್ಷಣದ ಕೊರತೆ, ಜನ ಸಂಖ್ಯಾ ಸ್ಫೋಟ ಮುಂತಾದ ಕಾರಣಗಳಿಂದ ಬಾಲ ಕಾರ್ಮಿಕ ವ್ಯವಸ್ಥೆ ಇಂದಿಗೂ ಜಾರಿಯಲ್ಲಿದ್ದು, ಇದನ್ನು ಬುಡ ಸಮೇತ ನಿರ್ಮೂಲನೆ ಮಾಡಲು ಪ್ರತಿಯೊಬ್ಬರು ಕೈ ಜೋಡಿಸಬೇಕು ಎಂದರು.

ಮಕ್ಕಳಿಗೆ ಶಿಕ್ಷಣದ ಅವಶ್ಯಕತೆ ತುಂಬಾ ಅಗತ್ಯವಾಗಿದೆ ಶಿಕ್ಷಣವು ಜೀವನದ ಪಾಠ ಕಲಿಸುವುದರ ಜೊತೆಗೆ ಉತ್ತಮ ಸಮಾಜದ ಅಭಿವೃದ್ಧಿ ಸಹಕರಿಯಾಗಿದೆ. ಪ್ರತಿಯೊಬ್ಬರೂ ತಾಯಿ ಗರ್ಭ ಧರಿಸಿನಿಂದಲೂ ಅಂತ್ಯ ಸಂಸ್ಕಾರ ಮುಗಿಯುವವರೆಗೆ ಕಾನೂನಿನ ಚೌಕಟ್ಟಿಗೆ ಒಳಪಟ್ಟಿರುತ್ತಾನೆ. ಆದರಿಂದ ಕಾನೂನು ಮತ್ತು ಹಕ್ಕುಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಭಿಕ್ಷಾಟಣೆಯಲ್ಲಿ ತೊಡಗಿರುವ ಮಕ್ಕಳಿಗೆ ಪ್ರೋತ್ಸಾಹ ನೀಡಬಾರದು ಎಂದರು.

ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿ, ಬಾಲ ಕಾರ್ಮಿಕರನ್ನು ರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿ . ಬಡತನ, ಅನಕ್ಷರತೆ, ಹಾಗೂ ಹಣದ ಆಸೆ ಆಮಿಷಗಳಿಗೆ ಒಳಗಾಗಿ ಮಗುವಿನ ಜೀವನವನ್ನೇ ಹಾಳು ಮಾಡಲಾಗುತ್ತಿದೆ. ಯಾವುದೇ ಮಗು ಕೂಡ ಶಿಕ್ಷಣದಿಂದ ವಂಚಿತರಾಗಬಾರದೆಂದು ಸರ್ಕಾರ ಅನೇಕ ಯೋಜನೆ ಜಾರಿಗೆ ತಂದಿದೆ ಅದನ್ನು ಸದುಪಯೋಗ ಪಡೆದುಕೊಂಡು ಶಿಕ್ಷಣ ಪಡೆದುಕೊಳ್ಳಿ ಎಂದರು.

ಕಾರ್ಮಿಕ ನಿರೀಕ್ಷಕ ಡಿ. ಎಂ ವೆಂಕಟೇಶ್ ಬಾಬು, ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಕಾಯ್ದೆ ಕುರಿತು ಉಪನ್ಯಾಸ ನೀಡಿ, ಶಾಲೆಯಿಂದ ಹೊರಗುಳಿದ ಮಕ್ಕಳೆಲ್ಲ ಬಾಲ ಕಾರ್ಮಿಕರೇ ಇದಕ್ಕೆ ಮೂಲ ಕಾರಣ ಬಡತನ. ಶಿಕ್ಷಣ ಪಡೆದು ಕೊಳ್ಳುವುದು ಪ್ರತಿಯೊಬ್ಬರ ಹಕ್ಕು ಅದನ್ನು ಯಾರು ಕಸಿದುಕೊಳ್ಳಲು ಸಾಧ್ಯವಿಲ್ಲ. ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂದು ಸರ್ಕಾರ ಉಚಿತ ಶಿಕ್ಷಣ, ಬಟ್ಟೆ, ಪುಸ್ತಕ, ಊಟ ಮುಂತಾದ ಸೌಲಭ್ಯವನ್ನು ಕಲ್ಪಿಸುವುದರ ಜೊತೆಗೆ ತಂದೆ ತಾಯಿಗಳಿಗೆ ಆಧಾರವಾಗುವ ಯೋಜನೆಗಳನ್ನು ಜಾರಿಗೆ ತಂದಿದೆ, ಬಾಲ ಕಾರ್ಮಿಕರು ಕಂಡು ಬಂದಲ್ಲಿ ಸಾರ್ವಜನಿಕರು 1098 ಗೆ ಮಾಹಿತಿ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ನ ಯೋಜನಾ ನಿರ್ದೇಶಕ ಕರೀಂ ಅಸದಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ವಿರೂಪಾಕ್ಷ ಗೌಡ ಪಾಟೇಲ್, ಶಹರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಕುಮಾರ ಕಾಂಬಳೆ, ಜಿಲ್ಲಾ ನ್ಯಾಯಾವಾದಿಗಳ ಸಂಘದ ಅಧ್ಯಕ್ಷ ಸಂತೋಷ್ ಭಾಗವತ, ಶಿವಾಜಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಎ.ಸಿ ಗಾಂವಕರ, ಶಿವಾಜಿ ಶಿಕ್ಷಣ ಸಂಸ್ಥೆ ಹಾಗೂ ಅಂಗ ಸಂಸ್ಥೆಗಳ ಅಧ್ಯಕ್ಷ ಕೆ.ಪಿ ನಾಯ್ಕ ಮತ್ತಿತರರು ಉಪಸ್ಥಿತರಿದ್ದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಲಲಿತಾ ಸಾತೇನಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು, ಶಿವಾಜಿ ಬಾಲ ಮಂದಿರದ ಮುಖ್ಯೋಪಧ್ಯಾಯನಿ ರಾಜೇಶ್ವರಿ ನಾಯ್ಕ ನಿರೂಪಿಸಿದರು. ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿನ ವಿಜೇತರಿಗೆ ಬಹುಮಾನ ವಿತರಣೆ, ಬಾಲ ಮತ್ತು ಕಿಶೋರ ಕಾರ್ಮಿಕ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿದವರಿಗೆ ಸನ್ಮಾನ, ನಿಶ್ಚಿತ ಠೇವಣಿ ಪತ್ರ ವಿತರಿಸಲಾಯಿತು.

## ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಸತಿ ರಹಿತ, ನಿವೇಶನ ರಹಿತರಿಂದ ಅರ್ಜಿ ಆಹ್ವಾನ

ಬೆಳಗಾವಿ, ಕೇಂದ್ರ ಸರ್ಕಾರದ ಪರಿಷ್ಕೃತ ಪ್ರಧಾನಮಂತ್ರಿ ಆವಾಸ ಯೋಜನೆಯಡಿ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಕಲ್ಪಿಸಲು ಕೇಂದ್ರ ಸರ್ಕಾರವು ಗಟಿಜಿಜಜ ಫಜಭ ಕಠಡಿಣಒಟ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯೊಳಗೆ ಬರುವ ವಾರ್ಡ ಕ್ರಮ ಸಂಖ್ಯೆ 01 ರಿಂದ 58 ರ ಎಲ್ಲಾ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳು ವಸತಿ ಪಡೆಯಲು ಕೇಂದ್ರ ಸರ್ಕಾರದ ಿಣಣಠಿ://ಠಿಟಚಿಥಿ.ಣಡಿಛಿಚಿಟ.ರಠಿತ.ಟಿ ನಲ್ಲಿ ಅರ್ಜಿ ಸಲ್ಲಿಸಿ, ಅರ್ಜಿ ಸಲ್ಲಿಸಿದ ಪ್ರತಿಯನ್ನು ಬೆಳಗಾವಿ ಮಹಾನಗರ ಪಾಲಿಕೆಯ ಆಶ್ರಯ ಶಾಖೆಗೆ ಸಲ್ಲಿಸಬೇಕು ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಆಯೋಜನೆ

## ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ಹಾಗೂ ಬಾಲ್ಯವಿವಾಹ ಪಿಡುಗು ನಿರ್ಮೂಲನೆಗೆ ಸಾರ್ವಜನಿಕರು ಕೈಜೋಡಿಸಿ -ಜಿಲ್ಲಾಧಿಕಾರಿ ಟಿ.ಭೂಬಾಲನ್



ವಿಜಯಪುರ, ಬಾಲ ಕಾರ್ಮಿಕ ಪದ್ಧತಿ ಹಾಗೂ ಬಾಲ್ಯ ವಿವಾಹದಂತಹ ಸಾಮಾಜಿಕ ಅನಿಷ್ಟ ಪಿಡುಗುಗಳ ಸಂಪೂರ್ಣ ನಿರ್ಮೂಲನೆಗೆ ಸಾರ್ವಜನಿಕರು, ಪೋಷಕರು ಹಾಗೂ ಈ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಂಘ-ಸಂಸ್ಥೆಗಳು ಕೈಜೋಡಿಸಿ, ಈ ನಿಟ್ಟಿನಲ್ಲಿ ಎಲ್ಲರೂ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿ ಸೂಕ್ತ ಜನಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಉತ್ತಮ ಗುಣಮಟ್ಟದ ಆರೋಗ್ಯ, ಶಿಕ್ಷಣ ಮಕ್ಕಳ ಮೂಲಭೂತ ಹಕ್ಕಾಗಿದ್ದು, ಇದನ್ನು ಉತ್ತಮಪಡಿಸುವುದರಿಂದ ಸುಭದ್ರ ಸಮಾಜದ ನಿರ್ಮಾಣಕ್ಕೆ ಅಡಿಪಾಯವಾಗುವುದು. ಬಾಲ ಕಾರ್ಮಿಕ ಹಾಗೂ ಬಾಲ್ಯ ವಿವಾಹ ಅನಿಷ್ಟ ಪದ್ಧತಿ ಮುಕ್ತ ಜಿಲ್ಲೆಯನ್ನಾಗಿಸಲು ಹಾಗೂ ಈ ಪಿಡಗುಗಳ ನಿರ್ಮೂಲನೆಗೊಳಿಸಲು ಕಟಿಬದ್ಧರಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಬಾಲಕಾರ್ಮಿಕ ಪದ್ಧತಿಯ ನಿರ್ಮೂಲನೆಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳು ಶ್ರಮಿಸುತ್ತಿವೆ. ಈ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ. ಮಕ್ಕಳ ಸಹಾಯವಾಣಿ-1098 ಕರೆ ಮಾಡಿ ಮಾಹಿತಿ ನೀಡಿದಲ್ಲಿ ಮಕ್ಕಳ ರಕ್ಷಣೆಯ ಕಾರ್ಯ ಮಾಡಲಾಗುವುದೆಂದು ಅವರು ತಿಳಿಸಿದರು. ಈ ದಿನ ದೇಶಾದ್ಯಂತ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನವನ್ನಾಗಿ ಆಚರಿಸಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣವೂ ಸೇರಿದಂತೆ ಮಕ್ಕಳ ರಕ್ಷಣೆಯ ಹಿತ ಕಾಯುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅನೇಕ ಯೋಜನೆಗಳನ್ನು ಜಾರಿಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಯೋಜನೆಗಳ ಸದುಪಯೋಗಪಡೆದುಕೊಂಡು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವ ಮೂಲಕ ಅವರ ಜೀವನ ಹಾಗೂ ಭವಿಷ್ಯ ಸುಂದರಗೊಳಿಸುವ ಮಹತ್ತರ ಹೊಣೆ ಪಾಲಕರ ಮೇಲಿದೆ ಎಂದು ಹೇಳಿದರು.

ಐತಿಹಾಸಿಕ ಹಿನ್ನೆಲೆ ಇರುವ ನಮ್ಮ ಹೆಮ್ಮೆಯ ಜಿಲ್ಲೆಯಲ್ಲಿ ಸಂಪೂರ್ಣ ಬಾಲ ಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿಸುವ ನಿಟ್ಟಿನಲ್ಲಿ ನಮ್ಮೆಲ್ಲರ ಜವಾಬ್ದಾರಿ ಇನ್ನೂ ಹೆಚ್ಚಾಗಿದೆ. ಎಲ್ಲ ಮಕ್ಕಳನ್ನು ಶಾಲಾ ದಾಖಲಾತಿ ಮಾಡಿಸುವ ಮೂಲಕ ಶಾಲೆಯಿಂದ ಹೊರಗುಳಿಯುವ ಮಕ್ಕಳ ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಯಾವುದೇ ಮಗು ಶಾಲೆಯಿಂದ ಹೊರಗುಳಿಯದಂತೆ ಸಂಬಂಧಿಸಿದ ಇಲಾಖೆಗಳು ನಿಗಾವಹಿಸಬೇಕು. ಶಾಲೆಬಿಟ್ಟ ಮಕ್ಕಳ ಸಮಗ್ರ ಮಾಹಿತಿ ಕ್ರೋಢೀಕರಿಸಬೇಕು. ಬಾಲ ಕಾರ್ಮಿಕರು ಕಂಡು ಬಂದಲ್ಲಿ ಸಂಬಂಧಿಸಿದ ಇಲಾಖೆಗಳಿಗೆ ಸಾರ್ವಜನಿಕರು ಮಾಹಿತಿ ನೀಡಬೇಕು. ಯಾವುದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ಶಿಕ್ಷಣವನ್ನು ಮೊಟಕುಗೊಳಿಸಿದೇ, ವಿದ್ಯಾಭ್ಯಾಸವನ್ನು ಮುಂದುವರೆಸುವ ಮೂಲಕ ಉನ್ನತ ಶಿಕ್ಷಣ ಪಡೆದುಕೊಂಡು ಬದುಕನ್ನು ಸುಂದರಗೊಳಿಸಿಕೊಂಡು, ಸಮಾಜಕ್ಕೆ ಹಾಗೂ ದೇಶಕ್ಕೆ ತಮ್ಮ ಕೊಡುಗೆ ನೀಡಬೇಕು. ಬಾಲ ಕಾರ್ಮಿಕ ಪದ್ಧತಿಯಿಂದ ಮಕ್ಕಳ ಭವಿಷ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ತಮ್ಮ ನೆರೆಹೊರೆಯವರಿಗೂ ತಿಳುವಳಿಕೆ ನೀಡಬೇಕು. ಬಾಲ ಕಾರ್ಮಿಕ ಮಕ್ಕಳು ಕಂಡು ಬಂದಲ್ಲಿ ಮಾಹಿತಿ ನೀಡಿ, ಅವರ ರಕ್ಷಣೆ ಮಾಡಿ, ಅವರನ್ನು ಸಮಾಜದ ಮುಖ್ಯವಾಹಿನಿಗೆ ತಂದು ಅವರು ಶಿಕ್ಷನ ಪಡೆದುಕೊಂಡು ಉತ್ತಮ ಜೀವನ ನಿರ್ವಹಿಸುವಂತಾಗಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ ಅವರು ಮಾತನಾಡಿ, 1986ರಲ್ಲಿ ಬಾಲ ಕಾರ್ಮಿಕ ನಿಷೇಧ ಹಾಗೂ 2016ರಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ನಿಷೇಧ ಕಾಯ್ದೆಯೂ ಜಾರಿಗೆ ಬಂದಿದೆ. ಬಾಲ ಕಾರ್ಮಿಕ ಪದ್ಧತಿ ಹೋಗಲಾಡಿಸಲು ಎಲ್ಲರ ಸಹಕಾರ ಅಗತ್ಯವಾಗಿದೆ. ಬಾಲ ಕಾರ್ಮಿಕರು ಕಂಡು ಬಂದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕಾಗಲಿ, ಸಂಬಂಧಿಸಿದ ಇಲಾಖೆಗಳಿಗೆ ಸಾರ್ವಜನಿಕರು ಮಾಹಿತಿ ನೀಡಬೇಕು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶಂಕರ ಮಾರಿಹಾಳ ಅವರು ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಪ್ರತಿಯೊಬ್ಬರಿಗೂ ಶಿಕ್ಷಣ ಅವಶ್ಯಕವಾಗಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು. ಯಾವುದೇ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳುವ ಬಹು ದೊಡ್ಡ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು. ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿಗಳಾದ ಉಮಾಶ್ರೀ ಎಸ್.ಕೋಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ಮನಸ್ಸು ಬಹಳ ಸೂಕ್ಷ್ಮವಾದದ್ದು, ಅವರ ಬಾಲ್ಯವನ್ನು ಉತ್ತಮವಾಗಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಬಾಲಕಾರ್ಮಿಕ ಮಕ್ಕಳನ್ನು ತೊಡಗಿಸಿಕೊಂಡಿರುವ ಮಾಲೀಕರ ವಿರುದ್ಧ ಈಗಾಗಲೇ ಬಹಳಷ್ಟು ಕ್ರಮಗಳನ್ನು ತೆಗೆದುಕೊಳ್ಳಲಾಗತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರ 11 ಇಲಾಖೆಗಳ ಅಧಿಕಾರಿಗಳನ್ನು ನಿರೀಕ್ಷಕರನ್ನಾಗಿ ನೇಮಕ ಮಾಡಿದ್ದು, ಈ ಅಧಿಕಾರಿಗಳ ತಂಡ ಯೋಜಿತವಾಗಿ ಹಾಗೂ ಅನಿರೀಕ್ಷಿತವಾಗಿ ದಾಳಿ ಮಾಡುವ ಮೂಲಕ ಮಕ್ಕಳನ್ನು ರಕ್ಷಣೆ ಮಾಡಿ, ಮಕ್ಕಳ ಕಲ್ಯಾಣ ಸಮಿತಿಗೆ ಒಪ್ಪಿಸುತ್ತದೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೋಸಾಯಿಟಿ ವತಿಯಿಂದ ಸಾಕಷ್ಟು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಜಿಲ್ಲಾಧಿಕಾರಿಗಳ ಮಾರ್ಗದರ್ಶನದ ಮೇರೆಗೆ, ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 26 ಪ್ರಕರಣಗಳನ್ನು ದಾಖಲಿಸಲಾಗಿದೆ. ಮಾಲೀಕರಿಗೆ ಜಾಗೃತಿ ಸಹ ಮೂಡಿಸಲಾಗುತ್ತಿದೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಾರ್ವಜನಿಕರ ಹಾಗೂ ಎಲ್ಲ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಅನೌಪಚಾರಿಕ ಶಿಕ್ಷಣ ಸಂಸ್ಥೆಯ ಫಾದರ್ ಕೆವಿನ್ ಸೆಕ್ವೆರಾ ಅವರು, ಸಮಗ್ರ ಮಕ್ಕಳ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ ಹಾಗೂ ಕರ್ತವ್ಯವೂ ಆಗಿದೆ. ಬಾಲಕಾರ್ಮಿಕ ಪದ್ಧತಿಯ ಪಿಡುಗು ಮಕ್ಕಳ ತಮ್ಮ ಸಾಮಾಜಿಕ ಆರ್ಥಿಕ ಸ್ಥಿತಿಯನ್ನು ಕಸಿದುಕೊಳ್ಳುತ್ತಿದ್ದು, ಬಾಲಕಾರ್ಮಿಕ ಪದ್ಧತಿಯ ನಿರ್ಮೂಲನೆಗೆ ಈ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಂಘ-ಸಂಸ್ಥೆಗಳು, ಸಾರ್ವಜನಿಕರ ಸಹಕಾರದ ಅಗತ್ಯತೆಯ ಕುರಿತು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಕೆ. ಕೆ ಚವ್ಹಾಣ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಟಿ.ಎಸ್.ಕೋಲಾರ, ಜಿಲ್ಲಾ ಶಸ್ತ್ರ ಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ದೀಪಾಕ್ಷಿ ಜಾನಕಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಬಸಮ್ಮ ಹತ್ತರಕಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಪ್ರಮಾಣ ವಚನ ಬೋಧಿಸಿದರು.

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಜಾಗೃತಿ ಜಾಥಾಗೆ ಚಾಲನೆ : ನಗರದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಗೌರವಾನ್ವಿತ ಹರೀಶ ಎ. ಅವರು ಚಾಲನೆ ನೀಡಿದರು. ಜಾಥಾವು ಗಾಂಧಿ ಚೌಕ್‌ದಿಂದ ವಿವಿಧ ಮಾರ್ಗಗಳಲ್ಲಿ ಸಂಚರಿಸಿ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಮಾವೇಶಗೊಂಡಿತು. ವಿವಿಧ ಘೋಷ ವಾಕ್ಯ ಹೇಳಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಅಪರ ಜಿಲ್ಲಾಧಿಕಾರಿಗಳು ಸೋಮಲಿಂಗ ಗೆಣ್ಣೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಿ.ಕೆ ಹೊಸಮನಿ, ಶಾಲೆಯ ಪ್ರಾಂಶುಪಾಲರು, ವಿವಿಧ ಶಾಲೆಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಳೆಗಾಲವನ್ನು ಸಮರ್ಥವಾಗಿ ಎದುರಿಸಲು ಜಾಗೃತರಾಗಿ

## ತ್ರೈಮಾಸಿಕ ಸಭೆಯಲ್ಲಿ ತಾಲೂಕಾ ಆಡಳಿತಕ್ಕೆ ಶಾಸಕ ನಿಖಿಲ್ ಕತ್ತಿ ಎಚ್ಚರಿಕೆ



ಹುಕ್ಕೇರಿ : ಮಳೆಗಾಲ ಪ್ರಾರಂಭದ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗಂತೆ ಎಲ್ಲ ಇಲಾಖೆಯ ಅಧಿಕಾರಿಗಳು ಮುನ್ನಚ್ಚರಿಕೆ ವಹಿಸಬೇಕು ಎಂದು ಶಾಸಕ ನಿಖಿಲ್ ಕತ್ತಿ ಹೇಳಿದರು.

ಇಲ್ಲಿನ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಗುರುವಾರ ನಡೆದ ತಾಲೂಕು ಮಟ್ಟದ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಶಾಲಾ ಕಟ್ಟಡ, ಅಂಗನವಾಡಿ ಕಟ್ಟಡ ಗೋಡೆಗಳ ಬಗ್ಗೆ ಗಮನ ಹರಿಸಬೇಕು, ಬಿತ್ತನೆ ಬೀಜಗಳು ಹಾಗೂ ಗೊಬ್ಬರ ದಾಸ್ತಾನು, ನೀರಿನ ಮೂಲಗಳನ್ನು ಪತ್ತೆ ಮಾಡಬೇಕು. ನೀರು ಪೂರೈಕೆಯಾಗುವ ಪರಿಸರದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಕಾಲ ಕಾಲಕ್ಕೆ ನೀರು ಪರೀಕ್ಷೆ ನಡೆಸಬೇಕು, ಪರಿಸರ ಸ್ವಚ್ಚತೆ ಗಮನ ಹರಿಸಬೇಕು

ಚರಂಡಿಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವದು, ಜೊತೆಗೆ ಸಾಂಕ್ರಾಮಿಕ ರೋಗ ಉಲ್ಬಣಗೊಳ್ಳದಂತೆ ಗ್ರಾಮ ಪಂಚಾಯತಿ ಪಿಡಿಓಗಳ ಉಸ್ತುವಾರಿ ವಹಿಸಿಕೊಳ್ಳಬೇಕು ಎಂದರು. ಮಳೆಗಾಲದ ತಾಲೂಕು ಆಡಳಿತ ಸಮರ್ಥವಾಗಿ ನಿಭಾಯಿಸಬೇಕು. ಈ ನಿಟ್ಟಿನಲ್ಲಿ ಮುಂಜಾಗೃತಾ ಕ್ರಮಗಳನ್ನು ವಹಿಸಬೇಕು. ಯಾವುದೇ ರೀತಿಯ ತೊಂದರೆಯಾಗದಂತೆ. ಈ ವಿಚಾರವನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಈ ಕರ್ತವ್ಯದಲ್ಲಿ ಅಲಕ್ಷ್ಯ ಸಲ್ಲದು ಎಂದು ಶಾಸಕ ನಿಖಿಲ್ ಕತ್ತಿ ತಾಕೀತು ಮಾಡಿದರು ಎಂದು ಆದೇಶಿಸಿದರು.

ಜಲಜೀವನ ಮಿಷನ್ (ಜೆಜೆಎಂ) ಯೋಜನೆಯಡಿ ಕೈಗೆತ್ತಿಕೊಂಡ ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಪೂರ್ಣಗೊಂಡ ನಂತರ ಗ್ರಾಮ ಪಂಚಾಯತಿಯವರು ಹಸ್ತಾಂತರ ಮಾಡಿಕೊಳ್ಳುವದು ಪಿಡಿಓ ಅವರ ಜವಾಬ್ದಾರಿ ಎಂದರು. ಹಿಡಕಲ್ ಜಲಾಶಯದಿಂದ ಕುಡಿಯುವ ನೀರಿನ ಹೊಸ ಪೈಪಲೈನ್ ಕಾಮಗಾರಿ ಆರು ತಿಂಗಳಿನಲ್ಲಿ ಮುಗಿಯಲಿದೆ ಎಂದರು. ಪುರಸಭೆ ವ್ಯಾಪ್ತಿಯ ಯು.ಜಿ.ಡಿ ಕಾಮಗಾರಿಯಲ್ಲಿ ಸ್ಥಳೀಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಗುಣಮಟ್ಟದ ಕೆಲಸಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ಕಳೆದ ಎಸ್,ಎಸ್.ಎಲ್.ಸಿ. ಪರೀಕ್ಷೇಯಲ್ಲಿ ಉತ್ತಮ ಸಾಧನೆ ಮಾಡಿದ ಮೂರು ವಿಧ್ಯಾರ್ಥಿಗಳಿಗೆ ಲ್ಯಾಪಟಾಪ್, ಹಾಗೂ ಆರೋಗ್ಯ ಇಲಾಖೆಯಿಂದ 22 ಗ್ರಾಮ ಪಂಚಾಯತಿಗಳಿಗೆ ಕ್ಷಯ ರೋಗ ಮುಕ್ತ ಪುರಸ್ಕಾರ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು.

ಕ್ಷೇತ್ರ ಶಿಕ್ಷಣಧಿಕಾರಿ ಪ್ರಭಾವತಿ ಪಾಟೀಲ ಮಾತನಾಡಿ 349 ಅತಿಥಿಗಳ ಶಿಕ್ಷಕರ ನೇಮಕಮಾಡಲಾಗಿದೆ ಜುಲೈ ತಿಂಗಳಿನಲ್ಲಿ ಮತ್ತೆ ಅವಶ್ಯಕವಿರುವ ಶಾಲೆಗಳಿಗೆ ಅನುಮೋದನೆ ನೀಡಲಾಗುವದು ಹಾಗೂ ಅಪಾಯದ ಅಂಚಿನಲ್ಲಿರುವ 73 ಶಾಲಾ ಕಟ್ಟಡಗಳನ್ನು ನೆಲಸಮ ಮಾಡಲಾಗಿದೆ 272 ಶಾಲಾ ಕಟ್ಟಡಗಳ ರೀಪೇರಿಗಳ ಬಗ್ಗೆ ಮಾಹಿತಿ ನೀಡಲಾಗಿದೆ ಎಂದರು. ಕೃಷಿ ಅಧಿಕಾರಿ ಆರ.ಬಿ ನಾಯ್ಕರ, ಕ್ಷೇತ್ರದಲ್ಲಿ ಶೆ. 37 ರಷ್ಟು ಬಿತ್ತನೆಯಾಗಿದೆ. ಜೂನ ತಿಂಗಳಿನವರಗೆ ಅವಕಾಶವಿದೆ ಎಂದರು. ಬೀಜ ಹಾಗೂ ಗೊಬ್ಬರ ಸಾಕಷ್ಟು ದಾಸ್ತಾನಿದೆ ಎಂದರು

ತಹಶೀಲ್ದಾರ ಮಂಜುಳಾ ನಾಯಕ, ತಾಪಂ ಇಓ ಟಿ.ಆರ್.ಮಲ್ಲಾಡದ, ತಾಲೂಕಾ ನೋಡಲ್ ಅಧಿಕಾರಿ ಸಮಾಜ ಕಲ್ಯಾಣ ಜಂಟಿ ನಿರ್ದೇಶಕ ರಾಮಣ್ಣಾ ಕನ್ನೋಳಿ, ಸಿಪಿಐಗಳಾದ ಶಿವಶರಣ ಅವಜಿ, ಪುರಸಭೆ ಮುಖ್ಯಾಧಿಕಾರಿಗಳಾದ ಈಶ್ವರ ಸಿದ್ನಾಳ, ಪ್ರಕಾಶ ಮಠದ, ಡಾ. ಉದಯ ಕುಡಚಿ, ಕಂದಾಯ ನಿರೀಕ್ಷಕ ಮಲ್ಲಿಕಾರ್ಜುನ ಸಾರಾಪುರೆ, ತಾಪಂ ಮ್ಯಾನೇಜರ್ ಅವಿನಾಶ ಹೊಳೆಪ್ಪಗೋಳ, ಗ್ಯಾರಂಟಿ ಯೋಜನೆ ಅಧ್ಯಕ್ಷ ಶಾನೂಲ ತಹಶಿಲ್ದಾರ, ಕೆಡಿಪಿ ನಾಮನಿರ್ದೇಶಕ ಸದಸ್ಯರಾದ ಬಸವರಾಜ ಕೋಳಿ, ಸಿದ್ರಾಮ ಖೋತ, ಗುಲಾಬ ತಹಶಿಲ್ದಾರ, ಕಲ್ಲಪ್ಪ ಕಟ್ಟಿ, ರಾಜು ಅವಟೆ, ಮುಖಂಡರಾದ ಸತ್ಯಪ್ಪಾ ನಾಯಿಕ, ಶಿಥಲ ಬ್ಯಾಳಿ, ರಾಜು ಮುನ್ನೋಳಿ, ಚನ್ನಪ್ಪ ಗಜಬರ, ಶಿವನಗೌಡ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು. ಟಿಪಿಓ ಪ್ರಶಾಂತ ಮುನ್ನೋಳಿ ಸ್ವಾಗತಿಸಿದರು. ಪಿಡಿಓ ಕಿರಣ ಅಂಬೇಕರ. ವಂದಿಸಿದರು.

# ರಾಷ್ಟ್ರೀಯ ಲೋಕ ಅದಾಲತ್" ಜುಲೈ 12 ರಂದು: ಸಂದೀಪ ಪಾಟೀಲ



ಬೆಳಗಾವಿ, ಜಿಲ್ಲೆಯಾದ್ಯಂತ ಜುಲೈ 12 ರಂದು "ರಾಷ್ಟ್ರೀಯ ಲೋಕ ಅದಾಲತ್" ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಹೊಸ ನ್ಯಾಯಾಲಯಗಳ ಸಂಕೀರ್ಣದ ಆವರಣದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಜೂ.13) ನಡೆದ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಆಯೋಜಿಸಲಾದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು.

ದೇಶದಾದ್ಯಂತ ಲೋಕ್ ಅದಾಲತ್ ಜುಲೈ 12 ರಂದು ನಡೆಯಲಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಅದಾಲತ್ ಹಮ್ಮಿಕೊಳ್ಳಲಾಗಿದೆ. ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ, ಜೀವನಾಂಶ, ಚೆಕ್ ಬೌನ್ಸ್, ವಿದ್ಯುತ್ ಪ್ರಕರಣ, ಕಂದಾಯ ಅಪರಾಧಿತ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವಂತಹ ಪ್ರಕರಣ, ಕಾರ್ಮಿಕರ, ಬ್ಯಾಂಕ್ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ ಎಂದು ಹೇಳಿದರು. ಲೋಕ ಅದಾಲತ್ ನಲ್ಲಿ ಸುಮಾರು ವರ್ಷಗಳಿಂದ ಬಾಕಿ ಇರುವ ಪ್ರಕಣಗಳ ಇತ್ಯರ್ಥಕ್ಕೆ ಅವಕಾಶ ಕಲ್ಪಿಸಲಾಗುವುದು. ಇದ'ರಿಂದ' ನ್ಯಾಯಾಲಯಕ್ಕೆ ಅಲೆದಾಡುತ್ತಿರುವ ಕಕ್ಷಿದಾರರ ಹಣ, ಸಮಯ ಉಳಿತಾಯದ ಜೊತೆಗೆ ತ್ವರಿತ ಗತಿಯಲ್ಲಿ ಪರಿಹಾರ ಕಲ್ಪಿಸಲು ಸಹಾಯವಾಗಲಿದೆ.

ಜಿಲ್ಲೆಯ ನಡೆಯುವ ಪ್ರತಿ ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್ ನಲ್ಲಿ ಸುಮಾರು 1 ಲಕ್ಷ 37 ಸಾವಿರ ಬಾಕಿ ಪ್ರಕರಣಗಳಿವೆ. ಇದರಲ್ಲಿ ಸುಮಾರು 12 ಸಾವಿರ ಪ್ರಕರಣಗಳು ವಿಲೇವಾರಿಗೊಳಿಸಲು ಕೈಗೆತ್ತಿಕೊಳ್ಳಲಾಗುವುದು. ಅಂದಾಜು 13 ಸಾವಿರ ಪ್ರಕರಣಗಳು ಈಗಾಗಲೇ ರಾಜೀಯಾಗಿವೆ ಎಂದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಪ್ರತಿ ತಿಂಗಳು ಲೋಕ್ ಅದಾಲತ್ ಕುರಿತು 5 ರಿಂದ 6 ಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಅವರು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

## 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಕುರಿತು ಪೂರ್ವ ಸಿದ್ಧತಾ ಸಭೆ

# ಜೂನ್ 21 ರಂದು ಜಿಲ್ಲೆಯಲ್ಲಿ ಯೋಗ ದಿನಾಚರಣೆ ವ್ಯವಸ್ಥಿತವಾಗಿ ಆಚರಿಸಿ



ಗದಗ : ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21 ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 7 ಗಂಟೆಗೆ ಆಚರಿಸಲಾಗುತ್ತಿದ್ದು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯೋಗವು ಮನುಷ್ಯನ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಸಹಕಾರಿಯಾಗಿದೆ. ಇದು ಮನುಷ್ಯನಲ್ಲಿನ ರೋಗ ನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಯೋಗದ ನಂತರ ಧ್ಯಾನ, ಶಾಂತಿ ಮಂತ್ರಗಳು ಸಹ ಮನುಷ್ಯನಲ್ಲಿನ ತಾಳ್ಮೆ, ಆಧ್ಯಾತ್ಮಿಕ ಶಕ್ತಿಯನ್ನು ಹೆಚ್ಚಿಸುತ್ತವೆ, ಹೀಗೆ ಅನೇಕ ರೀತಿ ಮನುಷ್ಯನ ಆರೋಗ್ಯಕ್ಕೆ ಸಹಕಾರಿಯಾದ ಯೋಗದ ಕುರಿತು ಅರಿವು ಮೂಡಿಸಿ ಮಕ್ಕಳು, ಹಿರಿಯ ನಾಗರಿಕರು ಯೋಗಾಭ್ಯಾಸ ಮಾಡುವಂತೆ ಪ್ರಚುರಪಡಿಸಬೇಕು. ಅಂತರಾಷ್ಟ್ರೀಯ ಯೋಗ ದಿನಾಚರಣೆಯಂದು ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು. ಶಾಲೆ, ಕಾಲೇಜುಗಳಲ್ಲಿ ಯೋಗದ ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವಾಗಬೇಕು ಎಂದರು.

ಯೋಗ ದಿನಾಚರಣೆ ವ್ಯವಸ್ಥಿತವಾಗಿ ಜರುಗಿಸಲು ಇಲಾಖಾವಾರು ಹೊಣೆಗಾರಿಕೆಗಳನ್ನು ಹಂಚಿಕೆ ಮಾಡಲಾಗಿದೆ.ಸಂಬಂಧಿತ ಇಲಾಖೆಗಳು ತಮಗೆ ಸೂಚಿಸಿದ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು.ವಿವಿಧ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುವ ಮೂಲಕ ಯೋಗ ದಿನಾಚರಣೆ ಯಶಸ್ವಿಯಾಗುವಂತೆ ನೋಡಿಕೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನಿರ್ದೇಶಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಜಯಪಾಲ್ ಸಿಂಗ್ ಪಿ ಸಮೋರೇಕರ್ ಅವರು ಮಾತನಾಡಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆ 7 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಸಂಘ ಸಂಸ್ಥೆಯವರು, ಇಲಾಖೆ ಅಧಿಕಾರಿ ಸಿಬ್ಬಂದಿಗಳು ಸೇರಿದಂತೆ ಯೋಗಾಸಕ್ತರು ಬೆ 6.30 ಗಂಟೆಗೆ ಸರಿಯಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಿರಬೇಕು. ಜಿಲ್ಲೆಯಲ್ಲಿ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಜೂನ್ 19 ರಂದು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗುವುದು. ಅರಣ್ಯ ಮತ್ತು ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಜಿಲ್ಲೆಯ ತಾಲೂಕು ಹಾಗೂ ಗ್ರಾಮಗಳಲ್ಲಿ ಆಯುರ್ವೇದ ಔಷಧಿ ಸಸಿಗಳನ್ನು ನೆಡಲಾಗುವುದು. ಆಯುಷ್ ಇಲಾಖೆಯಿಂದ ಜಿಲ್ಲೆಯ ಇಟಗಿ, ಸೊರಟೂರು, ಕೋಟುಮಚಗಿ, ಯಾವಗಲ್, ಪೇತಾಲೂರು, ಬಿದರಳ್ಳಿ, ಮೇವುಂಡಿ, ಅಂತೂರು ಬೆಂತೂರು ಈ ಗ್ರಾಮಗಳಲ್ಲಿ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದರು.

ಸಭೆಯಲಿ ್ಲ ಯೋಗ ದಿನಾಚರಣೆಯ ದಿನದಂದು ಕುಡಿಯುವ ನೀರಿನ ವ್ಯವಸ್ಥೆ, ಉಪಹಾರ ವ್ಯವಸ್ಥೆ, ಅಂಬುಲೆನ್ಸ್ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸತೀಶ ನೀಲಗುಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ.ಮಸನಾಯಕ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಂಘ ಸಂಸ್ಥೆಯವರು , ಯೋಗಾಸಕ್ತರು ಹಾಜರಿದ್ದರು.

# ಸುಬುಧೇಂದ್ರತೀರ್ಥ ಶ್ರೀಗಳಿಂದ ಬೃಂದಾವನ ಲೋಕಾರ್ಪಣೆ



ತೇರದಾಳ-ತೇರದಾಳ ಪಟ್ಟಣದ ಕಿಲ್ಲಾಭಾಗದಲ್ಲಿ ನೂತನವಾಗಿ ನಿರ್ಮಿಸಿರುವ ರಾಘವೇಂದ್ರ ಸ್ವಾಮಿಗಳ ಮೃತ್ತಿಕಾ ಬೃಂದಾವನವನ್ನು ಶುಕ್ರವಾರ ಮಂತ್ರಾಲಯದ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ವಿಪ್ರುತ್ ಸಂಪ್ರದಾಯದಂತೆ ಹಲವು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಲೋಕಾರ್ಪಣೆ ಮಾಡಿದರು.

ದತ್ತ ಮಂಗಲ ಕಾರ್ಯಾಲಯದಿಂದ ವಾಧ್ಯಮೇಳ ಕುಂಭದೊಂದಿಗೆ ಶ್ರೀಪಾದಂಗಳವರನ್ನು ಪುರಪ್ರವೇಶ ಮಾಡಿಕೊಂಡು ಭವ್ಯ ಶೋಭಾಯಾತ್ರೆ ಮೂಲಕ ರಾಘವೇಂದ್ರ ಸ್ವಾಮಿಗಳ ಮಠದ ವರೆಗೆ ಕರೆತರಲಾಯಿತು. ನಂತರ ಶ್ರೀಗಳ ಪೂಜಾ ಕೈಕಂರ್ಯ ಮುಗಿದ ಬಳಿಕ ಷೋಡಶೋಪಚಾರಪೂಜೆ ಪ್ರತಿಮೆಗಳಿಗೆ ಪ್ರತಿಷ್ಠಾಂಗ ಕಲಸ್ಥಾಪನೆ, ಮೂಲಮೃತ್ತಿಕಾ, ಶಾಲಾಗ್ರಾಮ ಸ್ಥಾಪನೆ, ಅಷ್ಟಬಂಧಕ ಕಲಾಶಾಭಿಷೇಕ, ಮಾತೃಕನ್ಯಾಸ, ತತ್ವ್ತನ್ಯಾಸ, ಅಷ್ಟಮಹಾಮಂತ್ರಗಳ ಸಹಿತ ಲಕ್ಷ್ಮೀ ಮುಖ್ಯಪ್ರಾಣದೇವರ ರಾಘವೇಂದ್ರ ಅಷ್ಟಾಕ್ಷರಮಂತ್ರಗಳ ಪುರಸ್ವರ ಬಿಂಬಾವಾಹನೆ ಪ್ರತಿಷ್ಠಾಪನೆ ಮಹಾಮಂತ್ರಾಭಿಷೇಕ, ಮಂಗಳಾರುತಿ ಸೇರಿದಂತೆ ಹಲವು ಕಾರ್ಯಕ್ರಮಗಳು ಜರುಗಿದವು. ಇದೇ ಮೊದಲ ಬಾರಿಗೆ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ತೇರದಾಳಕ್ಕೆ ಆಗಮಿಸಿದ ಹಿನ್ನಲೆಯಲ್ಲಿ ಬೇರೆ ಬೇರೆ ಊರುಗಳಿಂದ ವಿಪ್ರುತ್(ಬ್ರಾಹ್ಮನ) ಸಮಾಜ ಬಾಂಧವರು ಸಾಕಷ್ಟು ಸಂಖ್ಯೆಯಲ್ಲಿ ಆಗಮಿಸಿದ್ದರು. ಜತೆಗೆ ಪಟ್ಟಣದ ಹಲವು ಸಮಾಜದವರು ಶ್ರೀಗಳನ್ನು ಕಂಡು ದರ್ಶನ ಪಡೆದರು. ಜನಪ್ರತಿನಿಧಿಗಳು, ಸಮಸ್ತ ಬ್ರಾಹ್ಮ ಸಮಾಜ ಬಾಂಧವರು ಮುಖಂಡರು ಪಾಲ್ಗೊಂಡಿದ್ದರು.

# ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಬೆಳಗಾವಿ, : ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ ಹಾಗೂ ಕಊ-ೂಃಊಖಊ ಯೋಜನೆ ಅಡಿಯಲ್ಲಿ ವಿವಧ ಹದ್ದೆಗಳ ನೇಮಕಾತಿ ಅಂತಿಮ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕು.ಕ ಕಚೇರಿಯ ಸೂಚನಾ ಫಲಕಕ್ಕೆ ಹಾಗೂ ಓಖಅ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿದ್ದಾರೆ.

# ಅರ್ಜಿ ಆಹ್ವಾನ

ಬೆಳಗಾವಿ, : 2025-26ನೇ ಸಾಲಿನ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಹಾಗೂ ಶೈಕ್ಷಣಿಕವಾಗಿ ಪ್ರೋತ್ಸಾಹಿಸಲು ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ ಪೂರ್ವ ಮತ್ತು ಮೆಟ್ರಿಕ ನಂತರದ ವಿದ್ಯಾರ್ಥಿ ವೇತನ ಹಾಗೂ ಖಖಐಅ ಮತ್ತು ಮೆಟ್ರಿಕ ನಂತರದ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಮೆಟ್ರಿಕ ಪೂರ್ವ/ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ರಾಜ್ಯ ವಿದ್ಯಾರ್ಥಿ ವೇತನದ ಅಧಿಕೃತ ತಂತ್ರಾಂಶ **http://ssp.postmatric.karntaka.gov.in** ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು (ಗ್ರೇಡ-1) ಸಮಾಜ ಕಲ್ಯಾಣ ಇಲಾಖೆ, ನೆಹರು ನಗರ ಬೆಳಗಾವಿ ದೂರವಾಣಿ ಸಂ:0831-2470545. ಮೊ:9480843065 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ವಿಕಲಚೇತನರ ಆರೈಕೆದಾರರಿಂದ ಅರ್ಜಿ ಆಹ್ವಾನ

ಬೆಳಗಾವಿ, : 2025-26ನೇ ಸಾಲಿಗೆ **Cerebral Palsy, Muscualr Distrophy, Parkisons, & Multiple Sclerosis, Autism, Intellectual Disability,** ಬಹುವಿಧ ಅಂಗವಿಕಲತೆ ( ಶ್ರವಣ&ಅಂಧತ್ವ) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆಗಾಗಿ ಪ್ರತಿ ಮಾಹೆ ರೂ.1000/-ಗಳ ಪ್ರೋತ್ಸಾಹಧನ ಯೋಜನೆಯಡಿ ವಿಕಲಚೇತನರ ಆರೈಕೆದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಜೂಲೈ.30, 2025ರ ಒಳಗಾಗಿ ಆಯಾ ತಾಲೂಕು ಪಂಚಾಯತ ಕಛೇರಿಯಲ್ಲಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ (ಎಂ.ಆರ್.ಡಬ್ಲ್ಯೂ.) ಖುದ್ದಾಗಿ ದ್ವಿಪ್ರತಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ ದೂರವಾಣಿ ಸಂಖ್ಯೆ: 0831-2476096/7 ಗೆ ಅಥವಾ ತಮ್ಮ ತಾಲೂಕಿನ ಎಂ.ಆರ್.ಡಬ್ಲ್ಯೂ. ರವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರು ಕ್ರೀಯಾಶೀಲತೆಯಿಂದ ಶ್ರಮವಹಿಸಬೇಕು



ಸಿಂದಗಿ: ಬಾಲಕಾರ್ಮಿಕ ಪದ್ದತಿ ನಿರ್ಮೂಲನೆಗೆ ಪ್ರತಿಯೊಬ್ಬರು ಕ್ರೀಯಾಶೀಲತೆಯಿಂದ ಶ್ರಮವಹಿಸಬೇಕು ಎಂದು ಸಿಂದಗಿ ಸಿವ್ಹಿಲ್ ಮತ್ತು ಜೆಎಮ್‌ಎಫ್‌ಸಿ ನ್ಯಾಯಾಧೀಶ ಪಂಕಜಾ ಕೊಣ್ಣೂರ ಅವರು ಹೇಳಿದರು.

ಸಿಂದಗಿ ಪಟ್ಟಣದ ಸರಕಾರಿ ಕನ್ನಡ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ತಾಲೂಕು ಆಡಳಿತ, ತಾಲೂಕು ಪಂಚಾಯತ್, ಪುರಸಭೆ, ತಾಲೂಕು ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಾಲ ಕಾರ್ಮಿಕ ಪದ್ದತಿಯೂ ಸಾಮಾಜಿಕ ಪಿಡುಗಾಗಿದ್ದು, ಬಾಲ ಕಾರ್ಮಿಕ ಪದ್ದತಿಯ ನಿರ್ಮೂಲನೆಗೆ ಸಾರ್ವಜನಿಕರು ಮತ್ತು ವಿವಿಧ ಸಂಘ ಸಂಸ್ಥೆಗಳು ಸಹಕರಿಸಿ ಬಲವಂತವಾಗಿ ಕಾರ್ಯ ಮಾಡುತ್ತಿರುವ ಮಕ್ಕಳ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಬೇಕು ಎಂದರು.

ಈ ವೇಳೆ ತಾಲೂಕು ದಂಡಾಧಿಕಾರಿ ಪ್ರದೀಪಕುಮಾರ ಹಿರೇಮಠ ಮಾತನಾಡಿ, ಸಮಾಜದ ಅಇಷ್ಠ ಪದ್ದತಿಯಾದ ಬಾಲಕಾರ್ಮಿಕತೆ ಕೊನೆಗೊಳಿಸಿ ದೇಶದ ಆಸ್ತಿಯಾದ ಮಕ್ಕಳ ಬದುಕನ್ನು ಉಜ್ವಲಗೊಳಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದರು. ಇದೇ ಸಂದರ್ಭದಲ್ಲಿ ಎಸಿಡಿಪಿಓ ಸಿದ್ದಲಿಂಗಪ್ಪ ಕೋರವಾರ ಮಾತನಾಡಿ, ಬಾಲ ಕಾರ್ಮಿಕ ಪದ್ದತಿ ವಿರುದ್ಧ ಎಲ್ಲ ಶಾಲೆಯಲ್ಲಿ ಪ್ರತಿಜ್ಞಾವಿಧಿ ಭೋದಿಸಲಾಗುತ್ತಿದೆ. ಬಾಲ ಕಾರ್ಮಿಕ ಪದ್ದತಿ ನಿರ್ಮೂಲನೆಗೆ ತಾಲೂಕು ಕಾರ್ಮಿಕ ಇಲಾಖೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದರು.

ಕಾರ್ಯಕ್ರಮದಲ್ಲಿ ಕಾರ್ಮಿಕ ನಿರೀಕ್ಷಕ ಮಲ್ಲಿಕಾರ್ಜುನ ಬಗಲಿ, ವಕೀಲರ ಸಂಘದ ಅಧ್ಯಕ್ಷ ಎಸ್.ಬಿ.ಪಾಟೀಲ, ಸಹಾಯಕ ಸರಕಾರಿ ವಕೀಲ ಎಫ್.ಝುಡ್.ಖತೀಬ, ಕೆಜಿಎಸ್‌ಸಿ ಶಾಲೆಯ ಪ್ರಬಾರಿ ಮುಖ್ಯಗುರು ವ್ಹಿ.ವ್ಹಿ. ಕುಲಕರ್ಣಿ, ಎಮ್.ಸಿ.ಯಾತನೂರ, ಬಿ.ಎಸ್.ಮಠ, ಶರಣು ದಬಡಿ, ರಾಜು ದಂಡಾವತಿ, ಶ್ರೀಶೈಲ ಬಿಸಿರೊಟ್ಟಿ, ಎ.ಕೆ.ಬಿರಾದಾರ ಶಿವಾನಂದ ಶಹಾಪುರ ಸೇರಿದಂತೆ ಶಾಲೆಯ ಸಹ ಶಿಕ್ಷಕರು ಹಾಗೂ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಇದ್ದರು.

***

